


ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡವೇ ಸತ್ಯ, ಕನ್ನಡವೇ ನಿತ್ಯ

ಸಂಪುಟ: 22, ಸಂಚಿಕೆ: 32, ಪುಟಗಳು: 8, ಸೋಮವಾರ, 11 ನವೆಂಬರ್ 2024 RNI NO. KARKAN/2002/08054

epaper: www.sanjemugilu.com

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3







ಸುಭಾಷಿತ

ನಿಮ್ಮ ಶಕ್ತಿ ಹೆಚ್ಚಾಗುವುದು ಗೆಲುವುಗಳಿಂದಲ್ಲ, ಗೆಲುವಿಗಾಗಿ ನೀವು ನಡೆಸುವ ಹೋರಾಟಗಳಿಂದ..

## ಪಂಚಾಂಗ

(ಸೋಮವಾರ 11, ನವೆಂಬರ್-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ದಕ್ಷಿಣಾಯನ, ಶರದ್ ಋತು
- ಕಾರ್ತಿಕ ಮಾಸ, ಶುಕ್ಲ ಪಕ್ಷ,
- ನಕ್ಷತ್ರ: ಶತಭಿಷ, ತಿಥಿ: ದಶಮಿ
- ರಾಹುಕಾಲ: 7:46 ರಿಂದ 9:13
- ಗುಳಿಕಕಾಲ: 1:34 ರಿಂದ 3:01
- ಯಮಗಂಡಕಾಲ: 10:40 ರಿಂದ 12:07

## ಸಂಕ್ಷಿಪ್ತ ಸುದ್ದಿ

### ಬಾಬಾ ಸಿದ್ದಿಕಿ ಹತ್ಯೆ ಪ್ರಕರಣ, ಪ್ರಮುಖ ಆರೋಪಿಯ ಬಂಧನ

**ಮುಂಬೈ:** ಎನ್‌ಸಿಪಿ ನಾಯಕ ಬಾಬಾ ಸಿದ್ದಿಕಿ ಹತ್ಯೆ ಪ್ರಕರಣದ ಪ್ರಮುಖ ಆರೋಪಿಯನ್ನು ನೇಪಾಳದ ಗಡಿಯಲ್ಲಿ ಪೊಲೀಸರು ಬಂಧಿಸಿದ್ದಾರೆ. ಶಿವಕುಮಾರ್ ಸಿಕ್ಕಿಬಿದ್ದಾಗ ನೇಪಾಳಕ್ಕೆ ಪರಾರಿಯಾಗಲು ಯತ್ನಿಸುತ್ತಿದ್ದ. ಅಲ್ಲಿ ಎಸ್‌ಟಿಎಫ್ ಸಕಾಲದಲ್ಲಿ ಬಲೆ ಬೀಸಿ ಆತನನ್ನು ಹಿಡಿದಿದೆ.ಉತ್ತರ ಪ್ರದೇಶ ಪೊಲೀಸರು ಮತ್ತು ಮುಂಬೈ ಪೊಲೀಸರು ಜಂಟಿ ಕಾರ್ಯಾಚರಣೆ ನಡೆಸಿ ಪ್ರಮುಖ ಆರೋಪಿ ಶೂಟರ್ ಶಿವಕುಮಾರ್ ಅಲಿಯಾಸ್ ಶಿವನನ್ನು ನೇಪಾಳದ ಬಹ್ರೈಚ್ ಬಳಿ ಬಂಧಿಸಿದ್ದಾರೆ. ಯುಪಿ ಮತ್ತು ಮುಂಬೈನ ಎಸ್‌ಟಿಎಫ್ ತಂಡವು ನೇಪಾಳದಿಂದ ಪಲಾಯನ ಮಾಡಲು ಪ್ರಯತ್ನಿಸುತ್ತಿದ್ದಾಗ ಶಿವ ಮತ್ತು ಅವನ ನಾಲ್ವರು ಸಹಚರರನ್ನು ಹಿಡಿದಿದ್ದಾರೆ.



### ರೋಡ್ ರೇಜ್ ಪ್ರಕರಣಗಳ ತನಿಖೆಗಾಗಿ ಟ್ರಾಫಿಕ್ ಪೊಲೀಸರಿಗೆ ಅವಕಾಶ



**ಬೆಂಗಳೂರು:** ಬೆಂಗಳೂರು ಸೇರಿದಂತೆ ರಾಜ್ಯಾದ್ಯಂತ ರೋಡ್ ರೇಜ್ ಪ್ರಕರಣಗಳು ದಿನೇ ದಿನೇ ಜಾಸ್ತಿ ಆಗುತ್ತಲೇ ಇವೆ. ಇದರಿಂದ ತನಿಖೆಗಾಗಿ ಟ್ರಾಫಿಕ್ ಪೊಲೀಸರಿಗೆ ಅವಕಾಶ ನೀಡುವಂತೆ ಪೊಲೀಸ್ ಇಲಾಖೆಯು ಗೃಹ ಇಲಾಖೆಗೆ ಪತ್ರ ಬರೆದಿದೆ.

ರೋಡ್ ರೇಜ್ ಪ್ರಕರಣಗಳನ್ನು ತಡೆಯಲು ಪೊಲೀಸ್ ಇಲಾಖೆ ಕೂಡ ಶತಪ್ರಯತ್ನ ಮಾಡುತ್ತಿದೆ. ಜೊತೆಗೆ ನಗರ ಪೊಲೀಸ್ ಆಯುಕ್ತ ಬಿ.ದಯಾನಂದ ಇನ್ನೊಂದು ಹೆಜ್ಜೆ ಮುಂದೆ ಹೋಗಿ ಇದನ್ನು ಗೂಂಡಾ ಆಕ್ಟ್ ಎಂದು ಪರಿಗಣನೆ ಮಾಡುತ್ತೇವೆ ಎಂದು ಹೇಳಿದ್ದರು.

### ರಾಯಚೂರಿನಲ್ಲಿ ಅಪಘಾತಗಳ ಸಂಖ್ಯೆಯಲ್ಲಿ ಹೆಚ್ಚಳ

## ಹೆಲ್ಮೆಟ್ ಬಳಕೆ ಕಡ್ಡಾಯಗೊಳಿಸಿದ ಪೊಲೀಸರು

**ರಾಯಚೂರು:** ಬಿಸಿಲಿನ ಕಾರಣಕ್ಕೆ ಬಿಸಿಲನಾಡು ರಾಯಚೂರು ಜಿಲ್ಲೆಯ ಬೈಕ್ ಸವಾರರಿಗೆ ಇಷ್ಟು ದಿನ ನೀಡಲಾಗಿದ್ದ ಹೆಲ್ಮೆಟ್ ವಿನಾಯಿತಿ ಈಗ ಮುಕ್ತಾಯವಾಗಿದೆ. ಪೊಲೀಸ್ ಇಲಾಖೆ ಹೆಲ್ಮೆಟ್ ಬಳಕೆ ಕಡ್ಡಾಯಗೊಳಿಸಿದೆ. ಹೀಗಾಗಿ, ಪೊಲೀಸರು ದಂಡ ವಸೂಲಿಯಲ್ಲಿ ಹೊಸ ದಾಖಲೆಯನ್ನೇ ಬರೆಯುತ್ತಿದ್ದಾರೆ. ಹೆಲ್ಮೆಟ್‌ಗಳ ವ್ಯಾಪಾರವೂ ಜಿಲ್ಲೆಯಲ್ಲಿ ಜೋರಾಗಿದೆ.

ರಾಜ್ಯದ ರಾಜಧಾನಿ ಬೆಂಗಳೂರಿನಲ್ಲಿ ಬೈಕ್ ಸವಾರರು ಮಾತ್ರವಲ್ಲದೇ ಹಿಂಬದಿ ಸವಾರರಿಗೂ ಹೆಲ್ಮೆಟ್ ಕಡ್ಡಾಯ. ಆದರೆ, ಬಿರು ಬಿಸಿಲಿನ ಕಾರಣಕ್ಕೆ ರಾಯಚೂರು, ಬಳ್ಳಾರಿ, ಕೊಪ್ಪಳ, ಕಲಬುರ್ಗಿಯಲ್ಲಿ ಬೈಕ್ ಸವಾರರ ಹೆಲ್ಮೆಟ್ ಬಳಕೆಗೆ ವಿನಾಯಿತಿ ನೀಡಲಾಗಿತ್ತು. ಪುಟ 2



### ಪ್ರೇಯಸಿ ತಾಯಿಗಾಗಿ ಚೈನ್ ಸ್ನ್ಯಾಚರ್ ಆದ

## ಡ್ಯಾನ್ಸ್ ಮಾಸ್ಟರ್ ಅಂದರ್!

**ಬೆಂಗಳೂರು:** ಪ್ರೀತಿಗಾಗಿ, ಪ್ರೀತಿಸಿದವರಿಗಾಗಿ ಎಂತಾ ತ್ಯಾಗಕ್ಕೂ ಸಿದ್ದರಾಗಿ ಇರುವಂತ ಅಥವಾ ಅಂತಾ ತ್ಯಾಗ ಮಾಡಿದಂತ ಹಲವು ಕಥೆಗಳನ್ನ ನೀವು ಕೇಳಿರ್ತೀರ. ಪ್ರೀಯಿಯ ಹುಚ್ಚಲ್ಲಿ ಜನ ಹಲವು ಅವಾಂತರಗಳನ್ನು ಮಾಡಿದ ಉದಾಹರಣೆಗಳೂ ನಮ್ಮ ಕಣ್ಣಮುಂದಿವೆ. ಆದ್ರೆ, ಇಲ್ಲೊಬ್ಬ ವ್ಯಕ್ತಿ ತಾನು ಪ್ರೀತಿಸಿದವಳ ಮತ್ತು ಆಕೆಯ ಕುಟುಂಬಕ್ಕಾಗಿ ಕಳ್ಳತನಕ್ಕೆ ಇಳಿದಿದ್ದಾನೆ. ಆಕೆಯ ಜೊತೆ ವಿಲಾಸಿ ಜೀವನ ನಡೆಸಬೇಕು ಮತ್ತೆ ಆಕೆಯ ತಾಯಿಗೆ ಟ್ರೀಟ್‌ಮೆಂಟ್ ಗೆ ಹಣ ಬೇಕು ಎಂಬ ಕಾರಣಕ್ಕೆ ಕಳ್ಳತನ ನಡೆಸುತ್ತಿದ್ದ ಆರೋಪಿಯನ್ನ ಬೆಂಗಳೂರಿನ ಜಿಗಣಿ ಠಾಣೆ ಪೊಲೀಸರು ಬಂಧಿಸಿದ್ದಾರೆ.



ಇದು ಪ್ರೇಯಸಿ ಮತ್ತೆ ಆಕೆಯ ತಾಯಿಯ ಚಿಕಿತ್ಸೆಗಾಗಿ ಖತರ್ನಾಕ್ ಕಳ್ಳನಾದ ಡ್ಯಾನ್ಸ್ ಮಾಸ್ಟರ್ ಕಥೆ. ಹೃದಯ ಸಂಬಂಧಿ ಕಾಯಿಲೆಯಿಂದ ಬಳಲುತ್ತಿದ್ದ ಪ್ರೇಯಸಿ ತಾಯಿಯ ಚಿಕಿತ್ಸೆಗೆ ಹಣ ಹೊಂದಿಸೋದಕ್ಕೆ ಸೈಯ್ಯದ್ ಅಲಿ ಬಾಳಸಾಹೇಬ್ ನಡಾಫ್ ಎಂಬ 25 ವರ್ಷದ ಯುವಕ ಕಳ್ಳನತಕ್ಕೆ ಇಳಿದುರುವ ಪ್ರಕರಣ ಬೆಳಕಿಗೆ ಬಂದಿದೆ. ಪುಟ 2

### ಈರುಳ್ಳಿ ದರ ಶತಕದತ್ತ ಸಾಗುತ್ತಿದ್ದರೂ ಗದಗ ರೈತರಿಗೆ ಶಾಕ್!

# ದಲ್ಲಾಳಿಗಳಿಂದ ಸಿಗ್ತಿಲ್ಲ ದರ





**ಗದಗ:** ಕರ್ನಾಟಕದ ಮಾರುಕಟ್ಟೆಗಳಲ್ಲಿ ಈರುಳ್ಳಿ ದರ ಕೆಜಿಗೆ 70, 80 ರೂ. ಎಂದು ಶತಕದತ್ತ ದಾಪುಗಾಲಿಡುತ್ತಿದೆ. ಈರುಳ್ಳಿ ದರ ಏರಿಕೆಯಿಂದ ಕಂಗಾಲಾಗಿರುವ ಗ್ರಾಹಕರು, ರೈತರಿಗಾದರೂ ಹಣ ಸಿಗುತ್ತಿದೆಯಲ್ಲ ಎಂದು ಸಮಾಧಾನಪಟ್ಟುಕೊಳ್ಳಲು ಯತ್ನಿಸುತ್ತಿದ್ದಾರೆ. ಆದರೆ, ವಾಸ್ತವ ಬೇರೆಯೇ ಇದೆ! ಬೆಲೆ ಏರಿಕೆಯ ಲಾಭ ರೈತರಿಗೂ ಸಿಗುತ್ತಿಲ್ಲ, ಬದಲಿಗೆ ದಲ್ಲಾಳಿಗಳ ಪಾಲಾಗುತ್ತಿದೆ.

**ದಲ್ಲಾಳಿಗಳ ಚೆಲ್ಲಾಟ, ರೈತರ ಸಂಕಷ್ಟ:** ಈ ಬಾರಿ ಹಿಂಗಾರು ಮಳೆ ಅಬ್ಬರಿಸಿದ್ದರಿಂದ ರಾಜ್ಯದ ಉದ್ದಗಲಕ್ಕೂ ಈರುಳ್ಳಿ ಬೆಳೆ ಕೊಳೆತು ಹೋಗಿದೆ. ಬೇಡಿಕೆಯಷ್ಟು ಈರುಳ್ಳಿ ಮಾರುಕಟ್ಟೆಗೆ ಬರುತ್ತಿಲ್ಲ. ಹೀಗಾಗಿ ಇರುವ ಈರುಳ್ಳಿಗೆ ಉತ್ತಮ ಬೆಲೆ ಸಿಗುತ್ತಿದೆ. ಮಾರುಕಟ್ಟೆಯಲ್ಲಿ ಗ್ರಾಹಕರಿಗೆ ಒಂದು ಕೆಜಿ ಈರುಳ್ಳಿ 60 ರಿಂದ 70 ರೂಪಾಯಿಗೆ ಮಾರಾಟವಾಗುತ್ತಿದೆ. ಹೀಗಾಗಿ ರೈತರಿಗೆ 50 ರೂಪಾಯಿ ಆದರೂ ಸಿಗಬೇಕಿದೆ. ಆದರೆ, ಗದಗ ಎಪಿಎಂಸಿಯಲ್ಲಿ ದಲ್ಲಾಳಿಗಳು ಕಳ್ಳಾಟ ಆಡುತ್ತಿದ್ದಾರೆ ಎಂದು ರೈತರು ಆರೋಪಿಸಿದ್ದಾರೆ.

**ಗದಗ ಮಾರುಕಟ್ಟೆಯಲ್ಲಿ ಹೇಗಿದೆ ಈರುಳ್ಳಿ ದರ :** ಗದಗ ಮಾರುಕಟ್ಟೆಯಲ್ಲಿ ಶುಕ್ರವಾರದವರೆಗೂ ಒಂದು ಕ್ವಿಂಟಲ್ ಈರುಳ್ಳಿಗೆ 4 ಸಾವಿರ, 5 ಸಾವಿರ ರೂಪಾಯಿ ಸಿಗುತ್ತಿತ್ತು. ಆದರೆ, ಶನಿವಾರ ಒಂದು ಕ್ವಿಂಟಲ್ ಈರುಳ್ಳಿಗೆ 500 ರೂಪಾಯಿ, 800, 1000 ರೂಪಾಯಿ ಮಾಡಿದ್ದಾರೆ. ಈ ಬಗ್ಗೆ ಪ್ರಶ್ನೆ ಮಾಡಿದರೆ ವಾಪಸ್ ತೆಗೆದುಕೊಂಡು ಹೋಗಿ ಎನ್ನುತ್ತಾರೆ ಎಂದು ರೈತ ಅಶೋಕ ಎಂಬವವರು ಬೇಸರ ತೋಡಿಕೊಂಡಿದ್ದಾರೆ.

ಇನ್ನು ಗದಗ ಜಿಲ್ಲೆಯ ಏಳು ತಾಲೂಕುಗಳಲ್ಲಿ ಅತೀ ಹೆಚ್ಚು ರೈತರು ಈರುಳ್ಳಿ ಬೆಳೆಯುತ್ತಾರೆ. ಇತ್ತಿಚೆಗೆ ಸುರಿದ ಮಳೆಯಿಂದ ಸಾಕಷ್ಟು ಈರುಳ್ಳಿ ನಾಶವಾಗಿದೆ. ಪುಟ 2

### ಚನ್ನಪಟ್ಟಣ ಉಪ ಚುನಾವಣೆ

## ಕರಿಯ ಕುಮಾರಸ್ವಾಮಿ ಎಂದ ಜಮೀರ್

**ರಾಮನಗರ:** ಚಾಮರಾಜಪೇಟೆ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಶಾಸಕ, ಸಚಿವ ಬಿ. ಝಡ್ . ಜಮೀರ್ ಅಹ್ಮದ್ ಖಾನ್ ಅವರು ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ್ದಾರೆ. ಭಾಷಣದ ಮಧ್ಯೆ ''ಕರಿಯ ಕುಮಾರಸ್ವಾಮಿ'' ಎಂದು ಟೀಕಿಸಿದ್ದಾರೆ. ಈ ಮೂಲಕ ಕಪ್ಪು ವರ್ಣದ ಜನಾಂಗೀಯ ನಿಂದನೆ ಮಾಡಿದ್ದಾರೆ.

ರವಿವಾರ ರಾತ್ರಿ ಚನ್ನಪಟ್ಟಣದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಿಪಿ ಯೋಗೇಶ್ವರ ಪರವಾಗಿ ಜಮೀರ್ ಅಹ್ಮದ್ ಪ್ರಚಾರಕ್ಕೆ ಇಳಿದಿದ್ದರು. ಪ್ರಚಾರ ಭಾಷಣದಲ್ಲಿ ಹೆಚ್ ಡಿ ಕುಮಾರಸ್ವಾಮಿ ವಿರುದ್ಧ ವಾಗ್ದಾಳಿ ಮಾಡುವ ಭರದಲ್ಲಿ ''ಬಿಜೆಪಿಯವರಿಗಿಂತ ಕಾಲಾ ಕುಮಾರಸ್ವಾಮಿ (ಕರಿಯ ಕುಮಾರಸ್ವಾಮಿ) ಹೆಚ್ಚು ಖತರ್ನಾಕ್ '' ಎಂದು ಉರ್ದುವಿನಲ್ಲಿ ಹೇಳಿದರು. ಪುಟ 2



### ಚಳಿಗಾಲದಲ್ಲಿ ಅಯೋಧ್ಯೆ ರಾಮನನ್ನು ಬೆಚ್ಚಗಿಡಲು ಚಾದರ, ಪಶ್ಮಿನಾ ಶಾಲು

## ಹೀಟರ್ ವ್ಯವಸ್ಥೆ

**ಲಕ್ನೋ:** ಚಳಿಗಾಲ ಸಮೀಪಿಸಿದ್ದು, ಅಯೋಧ್ಯೆ ರಾಮಮಂದಿರದ ಬಾಲರಾಮನನ್ನು ಬೆಚ್ಚಗಿಡಲು ಸಿದ್ಧತೆ ಮಾಡಿಕೊಳ್ಳಲಾಗಿದೆ.

ನವೆಂಬರ್ 20 ರಿಂದ ಬರುವ 'ಅಘರ್ ಕಿ ಪಂಚಮಿ'ಯಿಂದ ರಾಮಲಲ್ಲಾನಿಗೆ ಚಾದರ, ಪಶ್ಮಿನಾ ಶಾಲು ಹೊದಿಸಿ ಅಲಂಕಾರ ಮಾಡಲಾಗುವುದು. ಹೀಟರ್ ಅಳವಡಿಕೆ ಮಾಡಿ ಮೂರ್ತಿಗೆ ಬಿಸಿ ನೀರಿನ ಅಭಿಷೇಕ ಮಾಡುವುದು. ಬಾಲರಾಮನಿಗೆ ಮೊಸರು ನೈವೇದ್ಯದ ಬದಲು ಹವಾಮಾನ ಬದಲಾವಣೆಯನ್ನು ಗಮನದಲ್ಲಿಟ್ಟುಕೊಂಡು ಒಣ ಹಣ್ಣುಗಳ ನೈವೇದ್ಯ ಇರುತ್ತದೆ.

ಚಳಿಗಾಲದ ಉಡುಗೆಯನ್ನು ದೆಹಲಿ ಮೂಲದ ವಿನ್ಯಾಸಕರು ಹೊಲಿಯುತ್ತಿದ್ದಾರೆ. ನ.20 ರಿಂದ, ರಾಮಲಲ್ಲಾ ಮೂರ್ತಿಗೆ ಉಗುರುಬೆಚ್ಚನೆಯ ನೀರಿನಿಂದ ಸ್ನಾನ ಮಾಡಲಾಗುವುದು ಮತ್ತು ಗರ್ಭಗುಡಿಯಲ್ಲಿ ಹೀಟರ್‌ಗಳನ್ನು ಅಳವಡಿಸಿ



## ಕ್ಯೂಬಾದಲ್ಲಿ 2 ಪ್ರಬಲ ಭೂಕಂಪ

**ಹವಾನಾ:** ಪೂರ್ವ ಕ್ಯೂಬಾದಲ್ಲಿ 6.8 ತೀವ್ರತೆಯ ಪ್ರಬಲ ಭೂಕಂಪ ಸಂಭವಿಸಿದ್ದು ದೇಶದ 2ನೇ ಅತಿದೊಡ್ಡ ನಗರವಾದ ಸ್ಯಾಂಟಿಯಾಗೊ ಡಿ ಕ್ಯೂಬಾ ಮತ್ತು ಹತ್ತಿರದ ಪ್ರದೇಶಗಳಲ್ಲಿ ತೀವ್ರ ಹಾನಿಯಾಗಿದೆ. ಇದಕ್ಕೂ ಮೊದಲು 5.9 ತೀವ್ರತೆಯ ಭೂಕಂಪ ಸಂಭವಿಸಿದೆ ಎಂದು ವರದಿಯಾಗಿದೆ

ಕ್ಯೂಬಾದ ಮಾಜಿ ಅಧ್ಯಕ್ಷ ದಿ.ಫಿಡೆಲ್ ಕ್ಯಾಸ್ಟ್ರೋ ಅವರು ಕ್ಯೂಬನ್ ಕ್ರಾಂತಿಯ ಸಮಯದಲ್ಲಿ ತಮ್ಮ ಪ್ರಧಾನ ಕಚೇರಿಯನ್ನು ಹೊಂದಿದ್ದ ಬಾರ್ಟೋಲೋಮ್ ಮಾಸೊ ಬಳಿಯ ಗ್ರ್ಯಾನ್ಮಾ ಪ್ರಾಂತ್ಯದ ಕರಾವಳಿಯಲ್ಲಿ ಭೂಕಂಪವಾಗಿದೆ. ಯಾವುದೇ ಸಾವು ನೋವುಗಳ ಬಗ್ಗೆ ವರದಿಯಾಗಿಲ್ಲ.

ಭೂಕಂಪದ ಕೇಂದ್ರ 14 ಕಿಮೀ (8.7 ಮೈಲುಗಳು) ಆಳದಲ್ಲಿದೆ. ಯಾವುದೇ ಸುನಾಮಿ ಭೀತಿ ಇಲ್ಲ ಎಂದು ಅಮೆರಿಕದ ಜಿಯಾಲಾಜಿಕಲ್ ಸರ್ವೆ ತಿಳಿಸಿದೆ.

ಭೂಕಂಪದ ಪರಿಣಾಮದಿಂದ ಹಲವೆಡೆ ಭೂಕುಸಿತ ಸಂಭವಿಸಿದೆ. ಪುಟ 2



### ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಯಾಗಿ ಇಂದು ನ್ಯಾ.ಸಂಜೀವ ಖನ್ನಾ

## ಪ್ರಮಾಣವಚನ

**ನವದೆಹಲಿ:** ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿಯಾಗಿ ನ್ಯಾ.ಸಂಜೀವ ಖನ್ನಾ ಇಂದು (ನ.11) ರಂದು ಪ್ರಮಾಣ ವಚನ ಸ್ವೀಕರಿಸಲಿದ್ದಾರೆ.

ಇಂದು ರಾಷ್ಟ್ರಪತಿ ಭವನದಲ್ಲಿ ಬೆಳಿಗ್ಗೆ 10 ಗಂಟೆಗೆ ನಡೆಯಲಿರುವ ಸಮಾರಂಭದಲ್ಲಿ ಸುಪ್ರೀಂ ಕೋರ್ಟ್‌ನ 51ನೇ ಮುಖ್ಯ ನ್ಯಾಯಮೂರ್ತಿಯಾಗಿ ಅಧಿಕಾರ ಸ್ವೀಕರಿಸಲಿರುವ ನ್ಯಾ. ಸಂಜೀವ ಖನ್ನಾ ಅವರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರಮಾಣ ವಚನ ಬೋಧಿಸಲಿದ್ದಾರೆ.

ಎರಡು ವರ್ಷಗಳ ಅವಧಿಯ ಬಳಿಕ ಹಾಲಿ ಸಿಜೆಐ ಡಿವೈ ಚಂದ್ರಚೂಡ್ ಅವರು ಭಾನುವಾರ ತಮ್ಮ ಅಧಿಕಾರದಿಂದ ನಿವೃತ್ತಿ ಹೊಂದಿದರು. ಅವರ ಶಿಫಾರಸಿನ ಮೇರೆಗೆ ಅ.24 ರಂದು ನ್ಯಾ.ಸಂಜೀವ ಖನ್ನಾ ಅವರನ್ನು ಮುಖ್ಯ ನ್ಯಾಯರ್ಮೂರ್ತಿಯಾಗಿ ನೇಮಕ ಮಾಡುವ ಕುರಿತು ಅಧಿಕೃತವಾಗಿ ಪ್ರಕಟಿಸಲಾಗಿತ್ತು.



## 28 ಬಂಡಾಯ ಅಭ್ಯರ್ಥಿಗಳನ್ನು ಅಮಾನತುಗೊಳಿಸಿದ ಕಾಂಗ್ರೆಸ್

**ಮುಂಬೈ:** ಮಹಾರಾಷ್ಟ್ರ ವಿಧಾನಸಭಾ ಚುನಾವಣೆ ಸನ್ನಿಹಿತವಾಗುತ್ತಿದ್ದು, ಬಿಜೆಪಿಯಂತೆಯೇ ಕಾಂಗ್ರೆಸ್ ಕೂಡ ಬಂಡಾಯ ಅಭ್ಯರ್ಥಿಗಳನ್ನು ಅಮಾನತುಗೊಳಿಸಿದೆ. ಪಕ್ಷ ವಿರೋಧಿ ಚಟುವಟಿಕೆಗಾಗಿ ಮಹಾರಾಷ್ಟ್ರ ಕಾಂಗ್ರೆಸ್ 28 ಬಂಡಾಯ ಅಭ್ಯರ್ಥಿಗಳನ್ನು ಆರು ವರ್ಷಗಳ ಕಾಲ ಅಮಾನತುಗೊಳಿಸಿದೆ.

ನವೆಂಬರ್ 20 ರಂದು ನಡೆಯಲಿರುವ ಚುನಾವಣೆಯಲ್ಲಿ ಮಹಾ ವಿಕಾಸ್ ಅಘಾಡಿಯ ಅಧಿಕೃತ ಅಭ್ಯರ್ಥಿಗಳ ವಿರುದ್ಧ 22 ವಿಧಾನಸಭಾ ಕ್ಷೇತ್ರಗಳ ಈ ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಮಾಜಿ ಸಚಿವ ರಾಜೇಂದ್ರ ಮುಲಾಕ್ (ರಾಮ್‌ಟೆಕ್ ಕ್ಷೇತ್ರ), ಯಜ್ಞವಲ್ಕ್ ಜಿಚ್ಕರ್ (ಕಟೋಲ್), ಕಮಲ್ ವ್ಯಾವಾರೆ (ಕಸ್ಬಾ), ಮನೋಜ್ ಶಿಂಧೆ (ಕೊಪ್ರಿ ಪಚ್ಪಖಾಡಿ), ಮತ್ತು ಆಬಾ ಬಾಗುಲ್ (ಪಾರ್ವತಿ) ಸೇರಿದಂತೆ ಪ್ರಮುಖ ನಾಯಕರು ಕ್ರಮ ಎದುರಿಸಿದ್ದಾರೆ.

ಎಐಸಿಸಿ ಉಸ್ತುವಾರಿ ರಮೇಶ್ ಚೆನ್ನಿತ್ತಲ ಅವರ ನಿರ್ದೇಶನದ ಮೇರೆಗೆ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಕಾಂಗ್ರೆಸ್ ಹೇಳಿಕೆ ತಿಳಿಸಿದೆ. ಎಐಸಿಸಿ ಉಸ್ತುವಾರಿ ರಮೇಶ್ ಚೆನ್ನಿತ್ತಲ ಅವರ ಸೂಚನೆ ಮೇರೆಗೆ ಈ ನಿರ್ಧಾರ ಕೈಗೊಳ್ಳಲಾಗಿದೆ ಪುಟ 2



## ಪಿಎಸ್‌ಐ ಪರೀಕ್ಷೆ

### ತಪ್ಪು ಪ್ರಶ್ನೆಗಳನ್ನು ನೀಡಿ ಸಾವಿರಾರು ರೂ. ಸುಲಿಗೆಗೆ ಮುಂದಾದ ಕೆಇಎ




**ಬೆಂಗಳೂರು:** ನೇಮಕಾತಿ ಸಂಬಂಧ ಸರ್ಕಾರ ನಡೆಸುವ ಬಹುತೇಕ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಇತ್ತೀಚೆಗೆ ಒಂದಲ್ಲ ಒಂದು ಎಡವಟ್ಟುಗಳು ನಡೆಯುತ್ತಲೇ ಇವೆ. ಎಷ್ಟೇ ನಿಗಾವಹಿಸಿ ಪರೀಕ್ಷೆ ನಡೆಸಿದರೂ ತಪ್ಪುಗಳು ಕಂಡು ಬರುತ್ತಿವೆ. ಆದರೆ, ಈ ತಪ್ಪುಗಳಲ್ಲಿಯೂ ಸರ್ಕಾರ ಬೊಕ್ಕಸ ತುಂಬಿಸಿಕೊಳ್ಳಲು ಮುಂದಾಗಿದೆ. ಕರ್ನಾಟಕ ಪರೀಕ್ಷಾ ಪ್ರಾಧಿಕಾರದ (ಕೆಇಎ) ಎಡವಟ್ಟುಗಳಿಗೂ ಅಭ್ಯರ್ಥಿಗಳೇ ದಂಡ ತೆರಬೇಕಾಗಿ ಬಂದಿರುವುದು ಅಭ್ಯರ್ಥಿಗಳ ಆಕ್ರೋಶಕ್ಕೆ ಕಾರಣವಾಗಿದೆ. ಪುಟ 2

## ಆಧುನಿಕ ಭಸ್ಮಾಸುರನನ್ನ ನಾಶ ಮಾಡೋದಕ್ಕೆ ಒಬ್ಬ ಮೋಹಿನಿ ಸಾಲಲ್ಲ: ಸಿ.ಟಿ.ರವಿ

**ಚಿಕ್ಕಮಗಳೂರು:** ಆಧುನಿಕ ಭಸ್ಮಾಸುರನನ್ನ ನಾಶ ಮಾಡೋದಕ್ಕೆ ಒಬ್ಬ ಮೋಹಿನಿ ಸಾಲಲ್ಲ, ಇಡೀ ಹಿಂದೂ ಸಮಾಜವೇ ಒಂದಾಗಬೇಕು ಎಂದು ದತ್ತಮಾಲಾ ಧರ್ಮ ಸಭೆಯಲ್ಲಿ ವಕ್ಫ್ ವಿರುದ್ಧ ಸಿ.ಟಿ.ರವಿ ಕಿಡಿಕಾರಿದ್ದಾರೆ.

ಚಿಕ್ಕಮಗಳೂರಿನಲ್ಲಿ ದತ್ತಮಾಲಾ ಧರ್ಮ ಸಭೆಯಲ್ಲಿ ವಕ್ಫ್ ವಿರುದ್ಧ ಮಾತನಾಡಿದ ಅವರು, ವಕ್ಫ್ ಬೋರ್ಡ್ ಅನ್ನೋದು ಆಧುನಿಕ ಭಸ್ಮಾಸುರ. ವೋಟಿನ ಆಸೆಗೆ ಅವರಿಗೆ ನಮ್ಮವರೇ ವರ ಕೊಟ್ಟರು. ಹಿಂದಿನ ಭಸ್ಮಾಸುರನಂತೆ ಇಂದಿನ ಭಸ್ಮಾಸುರ ಎಲ್ಲರ ತಲೆ ಮೇಲೆ ಕೈ ಇಡಲು ಬಂದಿದ್ದಾನೆ. ಭಗವಂತ ಮತ್ತೊಮ್ಮೆ ಮೋಹಿನಿ ರೂಪದಲ್ಲಿ ಭಸ್ಮಾಸುರನನ್ನ ನಾಶ ಮಾಡಬೇಕಾದ ಅವಶ್ಯಕತೆ ಇದೆ. ಆ ಭಸ್ಮಾಸುರ ವರ ಕೊಟ್ಟ ಶಿವನನ್ನೇ ಅಟ್ಟಿಸಿಕೊಂಡು ಹೋದನಂತೆ. ಆಗ ವಿಷ್ಣು ಮೋಹಿನಿ ರೂಪ ತಾಳಿ ಭಸ್ಮಾಸುರನನ್ನ ನಾಶ ಮಾಡಿದ ಕಥೆ ಕೇಳಿದ್ದೇವೆ. ಆಧುನಿಕ ಭಸ್ಮಾಸುರನನ್ನ ನಾಶ ಮಾಡೋದಕ್ಕೆ ಒಬ್ಬ ಮೋಹಿನಿ ಸಾಲಲ್ಲ, ಇಡೀ ಹಿಂದೂ ಸಮಾಜವೇ ಒಂದಾಗಬೇಕು ಎಂದು ಹರಿಹಾಯ್ದರು. ವಕ್ಫ್ ಬೋರ್ಡ್‌ಗೆ ಪರಮಾಧಿಕಾರವಿದೆ, ದೇಶ-ಜಗತ್ತಿನ ಯಾವ ಆಸ್ತಿಯನ್ನಾದರೂ ನಮ್ಮದು ಅನ್ನಬಹುದು. ಒಮ್ಮೆ ಘೋಷಣೆ ಮಾಡಿಕೊಂಡರೆ ಅಲ್ಲಾಗೆ ಸೇರಿದ್ದು ಅಂತಾರೆ. ಬಲಿ ಚಕ್ರವರ್ತಿ ವಿಷ್ಣುವಿನ ಅವತಾರದ ವಾಮನನಿಗೆ ಆ ಕಾಲದಲ್ಲೇ ದಾನ ಕೊಟ್ಟಿದ್ದಾನೆ. ಮತ್ತೆ ದಾನ ಕೊಡಬೇಕು ಅಂದರೆ ವಿಷ್ಣುವಿನ ಅವತಾರದ ವಾಮನನೇ ಬಂದು ಕೊಡಬೇಕು. ಇಡೀ ಭೂಮಂಡಲವೇ ಮಹಾ ವಿಷ್ಣುಗೆ ಸೇರಿದ್ದು. ಮಹಾವಿಷ್ಣು ಎಲ್ಲಿವರೆಗೆ ಇನ್ನೊಬ್ಬರಿಗೆ ಭೂಮಿ ಕೊಡಲ್ವೋ ಅಲ್ಲಿವರೆಗೂ ಅದು ಸನಾತನ ಧರ್ಮೀಯರದ್ದು. ಸನಾತನ ಧರ್ಮದಿಂದ ದೂರ ಹೋದವರಿಗೆ ಭೂಮಿ ಮೇಲೆ ಬದುಕುವ ಹಕ್ಕಿದೆ ಅಷ್ಟೆ. ದಶಾವತಾರ, ದೇವನೊಬ್ಬ ನಾಮ ಹಲವು, ಬಹುದೇವತಾರಾಧನೆ ಬಗ್ಗೆ ನಂಬಿಕೆ ಇಟ್ಟಿದ್ದಾರೋ ಅವರಿಗೆ ಮಾತ್ರ ವಾರಸುದಾರಿಕೆ ಇದೆ ಎಂದು ಹೇಳಿದರು.

## ಮೈಸೂರಿನಲ್ಲಿ ಸಚಿವರಿಗೆ ಕಪಾಳಕ್ಕೆ ಹೊಡೆಯಲಾಗಿದೆ ಎಂಬುದು ಸುಳ್ಳು ಆರೋಪ

**ಬೆಂಗಳೂರು:** ಮೈಸೂರಿನಲ್ಲಿ ಸಚಿವರಿಗೆ ಕಪಾಳಕ್ಕೆ ಹೊಡೆಯಲಾಗಿದೆ ಎಂಬ ಹೆಚ್‌ಡಿ ಕುಮಾರಸ್ವಾಮಿ ಆರೋಪ ಸುಳ್ಳು ಎಂದು ಡಿಸಿಎಂ ಡಿಕೆ ಶಿವಕುಮಾರ್ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಈ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಯಾವುದು ಇಲ್ಲಾ ಅದೆಲ್ಲಾ ಸುಳ್ಳು ಆರೋಪ. ಅವರಿಗೂ ಹಿಡಿದು ಯಾರೋ ಕಪಾಳಕ್ಕೆ ಹೊಡೆದರು ಎಂದು ನನಗೂ ಯಾರೋ ಹೇಳಿದರು. ಅದಕ್ಕೆ ಆಧಾರ ಇದೆಯಾ? ಯಾರಿಗೋ ಮೋಸ ಮಾಡಿದ್ದಾರಂತೆ, ಅವರಿಗೂ ಕಪಾಳಕ್ಕೆ ಹೊಡೆದರಂತೆ ಎಂದು ನನಗೂ ಹೇಳಿದರು. ಯಾರೋ ಹೇಳಿದರು ಎಂದು ಅದನ್ನು ನಾನು ನಂಬೋಕಾಗುತ್ತಾ, ಹೇಳೋಕಾಗುತ್ತಾ? ಯಾವ ಸಚಿವರು



ಹೊಡೆದು ಇಲ್ಲಾ ಏನೂ ಇಲ್ಲಾ. ಬರಿ ಹಿಟ್ ಅಂಡ್ ರನ್ ಮಾಡೋಕೆ ಆಗುತ್ತಾ ಎಂದು ಪ್ರಶ್ನಿಸಿದರು. ಮಹಾರಾಷ್ಟ್ರ ಚುನಾವಣೆಗೆ ಕರ್ನಾಟಕ ಸರ್ಕಾರ 700 ಕೋಟಿ ಸಂಗ್ರಹ ಎಂಬ ಪ್ರಧಾನಿ ಮೋದಿ ಆರೋಪಕ್ಕೆ ಪ್ರತಿಕ್ರಿಯಿಸಿದ ಅವರು, ಇದೆಲ್ಲಾ ರಾಜಕೀಯವಾದ ಆರೋಪ. ಆರೋಪ ಸಾಬೀತು ಪಡಿಸಿದರೆ ಸಣ್ಣ ಶಿಕ್ಷೆಗೂ ಗುರಿಯಾಗುತ್ತೇವೆ. ದೊಡ್ಡ ಹುದ್ದೆಯಲ್ಲಿರುವವರು ಆಧಾರ ಇಲ್ಲದೇ ಆರೋಪ ಮಾಡಬಾರದು. ಮಹಾರಾಷ್ಟ್ರದಲ್ಲಿ ಗ್ಯಾರಂಟಿಗಳ ಬಗ್ಗೆ ಸುಳ್ಳು ಹೇಳಿಕೆ ಕೊಟ್ಟಿದ್ದರು. ಅದಕ್ಕಾಗಿ ನಾನು ಪತ್ರ ಬರೆಯುತ್ತಿದ್ದೇನೆ. ವಿಮಾನ, ಬಸ್‌ಗಳ ವ್ಯವಸ್ಥೆ ಮಾಡುತ್ತೇವೆ. ಗ್ಯಾರಂಟಿಗಳು ಜನತೆಗೆ ತಲುಪುತ್ತಿದೆಯಾ ಇಲ್ವಾ ಅಂತ ರಾಜ್ಯದ 30 ಜಿಲ್ಲೆಗಳಲ್ಲಿ ಪ್ರವಾಸ ಮಾಡಿ ಮಾಹಿತಿ ಸಂಗ್ರಹಿಸಲಿ. ನಮ್ಮ ಪಕ್ಷದಿಂದಲೇ ವಿಶೇಷ ವಿಮಾನ ವ್ಯವಸ್ಥೆಯನ್ನು ಮಾಡುತ್ತೇವೆ, ಸಂಪೂರ್ಣ ವೆಚ್ಚವನ್ನು ನಾವೇ ಭರಿಸುತ್ತೇವೆ. ಸುಳ್ಳೇ ಬಿಜೆಪಿವರ ಅಸ್ತ್ರ. ಕರ್ನಾಟಕದಲ್ಲಿ ಇದರ ರುಚಿ ಗೊತ್ತಾಗಿದೆ. ಜನ ಅವರಿಗೆ ಉತ್ತರ ಕೊಟ್ಟಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

# ರಾಷ್ಟ್ರಮಟ್ಟದಲ್ಲಿ ಸದ್ದು ಮಾಡಿದ ರಾಜ್ಯದ ಹಗರಣಗಳು!
# 'ಕೈ' ಸಚಿವರ ವಿರುದ್ಧ ಹೈಕಮಾಂಡ್ ಗರಂ



**ಬೆಂಗಳೂರು:** ರಾಜ್ಯದಲ್ಲಿ ನಡೆದ ಸರಣಿ ಹಗರಣಗಳು ಹಾಗೂ ವಿವಾದಗಳು ಇದೀಗ ರಾಷ್ಟ್ರ ಮಟ್ಟದಲ್ಲಿ ಸದ್ದು ಮಾಡುತ್ತಿವೆ. ಕಾಂಗ್ರೆಸ್ ಹೈಕಮಾಂಡ್‌ಗೆ ಇದರಿಂದ ತೀವ್ರ ಮುಜುಗರ ಉಂಟಾಗಿದೆ. ಈ ಹಿನ್ನೆಲೆಯಲ್ಲಿ ರಾಜ್ಯದ ಕಾಂಗ್ರೆಸ್ ಸಚಿವರಿಗೆ ನೋಟೀಸ್ ಕೊಟ್ಟಿದ್ದು, ವರದಿ ನೀಡಲು ಹೇಳಿದ್ದಾರೆ ಎನ್ನಲಾಗುತ್ತಿದೆ. ಇದರಿಂದ ಮೂವರು ಸಚಿವರಿಗೆ ಸಂಕಷ್ಟ ಎದುರಾಗಿದೆ.

ರಾಜ್ಯದಲ್ಲಿ ಇತ್ತೀಚೆಗೆ ನಡೆದ ವಾಲ್ಮೀಕಿ ನಿಗಮದಲ್ಲಿನ ಹಗರಣ, ಮುಡಾ ಹಗರಣ, ವಕ್ಫ್ ವಿವಾದ, ಅಬಕಾರಿ ಇಲಾಖೆಯಲ್ಲಿ ಸಚಿವರೇ ಲಂಚ ಪಡೆಯುತ್ತಾರೆ ಎನ್ನುವ ಆರೋಪ ಹಾಗೂ ಸಚಿವೆ ಹೆಬ್ಬಾಳ್ಕರ್ ಅವರ ಆಪ್ತನ ಕುರುಕುಳದಿಂದ ಸರ್ಕಾರಿ ನೌಕರರೊಬ್ಬರು ಆತ್ಮಹತ್ಯೆ ಮಾಡಿಕೊಂಡಿರುವ ಆರೋಪದ ಪ್ರಕರಣಗಳು ರಾಜ್ಯ ಸರ್ಕಾರಕ್ಕೆ ಮುಜುಗರ ತಂದೊಡ್ಡಿದೆ. ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಅವರು ಮಹಾರಾಷ್ಟ್ರ ಚುನಾವಣಾ ಪ್ರಚಾರದಲ್ಲಿ ಮಾತನಾಡಿದ್ದಾರೆ. ಹಾಗಾಗಿ ರಾಜ್ಯದಲ್ಲಿ ನಡೆದಿದೆ ಎನ್ನಲಾದ ಹಗರಣಗಳು ಇದೀಗ ರಾಷ್ಟ್ರಮಟ್ಟದಲ್ಲಿ ಸದ್ದು ಮಾಡುತ್ತಿವೆ.

**ಮುಜುಗರಕ್ಕೀಡಾದ 'ಕೈ ಹೈಕಮಾಂಡ್'!:**
ಪ್ರಧಾನಿ ನರೇಂದ್ರ ಮೋದಿ ಅವರು ಮಹಾರಾಷ್ಟ್ರ ಚುನಾವಣಾ ಭಾಷಣದ ವೇಳೆ ಕರ್ನಾಟಕ ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಬೆನ್ನಲ್ಲೇ ಎಚ್ಚರಗೊಂಡ ಕಾಂಗ್ರೆಸ್ ಹೈಕಮಾಂಡ್ ಹಗರಣಗಳ ಆರೋಪಕ್ಕೆ ಸಂಬಂಧಿಸಿದಂತೆ ವರದಿ ಕೇಳಿ ಸೂಚನೆ ನೀಡಿದ್ದಾರೆ ಎಂದು ಹೇಳಲಾಗುತ್ತಿದೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಸಚಿವ ತಿಮ್ಮಾಪುರ, ಜಮೀರ್ ಅಹ್ಮದ್ ಖಾನ್ ಹಾಗೂ ಲಕ್ಷ್ಮೀ ಹೆಬ್ಬಾಳ್ಕರ್ ಅವರಿಗೆ ವಿವರಣೆ ಕೇಳಿ ಸೂಚನೆ ನೀಡಿದ್ದಾರೆ ಎಂದು ಹೇಳಲಾಗಿದೆ.

**ಅಬಕಾರಿ ಇಲಾಖೆಯಲ್ಲಿ ಭ್ರಷ್ಟಾಚಾರ?:** ಅಬಕಾರಿ ಇಲಾಖೆಯಲ್ಲಿ ಭ್ರಷ್ಟಾಚಾರವಿದೆ. ಅಬಕಾರಿ ಸಚಿವರೇ ಕೋಟಿ ಕೋಟಿ ಹಣ ಲಂಚ ಕೇಳ್ತಾರೆ. ಈ ಬಗ್ಗೆ ಅಬಕಾರಿ ಇಲಾಖೆಯ ಅಧಿಕಾರಿಗಳು ನಮ್ಮ ಮುಂದೆ ಹೇಳಿದ್ದಾರೆ ಎಂದು ಮದ್ಯ ಮಾರಾಟಗಾರ ಸಂಘದ ಉಪಾಧ್ಯಕ್ಷ ಕರುಣಾಕರ ಹೆಗಡೆ ಆರೋಪ ಮಾಡಿದ್ದರು.

**ಭ್ರಷ್ಟಾಚಾರದಲ್ಲಿ ಸಚಿವ ತಿಮ್ಮಾಪುರ ಭಾಗಿ:** ವರ್ಗಾವಣೆಗಾಗಿ ಕೋಟಿಗಟ್ಟಲೆ ಹಣ ಕೊಟ್ಟು ಬಂದಿದ್ದೇವೆ ಎಂದು ಹೇಳಿ ಅಧಿಕಾರಿಗಳು ನಮ್ಮ ಮಾರಾಟಗಾರರಿಂದ ಹಣ ಪೀಕುತ್ತಿದ್ದಾರೆ. ಅಬಕಾರಿ ಸಚಿವ ತಿಮ್ಮಾಪುರ ಭ್ರಷ್ಟಾಚಾರದಲ್ಲಿ ಭಾಗಿಯಾಗಿದ್ದಾರೆ. ಇದು ಕೇವಲ ಆರೋಪವಲ್ಲ, ನಾವು ಯಾವುದೇ ಸರ್ಕಾರ ಎಂದಲ್ಲ, ಭ್ರಷ್ಟಾಚಾರದ ವಿರುದ್ಧ ಹೋರಾಟ ಮಾಡುತ್ತೇವೆ ಎಂದು ಕರುಣಾಕರ ಹೆಗಡೆ ಆಕ್ರೋಶ ವ್ಯಕ್ತಪಡಿಸಿದ್ದರು.

**ಲಿಕ್ಕರ್ ಶಾಪ್ ಲೈಸೆನ್ಸ್ ಗೆ 1 ಕೋಟಿ!:** ನಮಗೆ ಸಚಿವ ತಿಮ್ಮಾಪುರ ಬೇಡ, ಸಿಎಂ ನೇತೃತ್ವದಲ್ಲಿ ಸಭೆ ನಡೆಸಿ ನಮ್ಮ ಸಮಸ್ಯೆ ಬಗೆಹರಿಸಬೇಕು. ಅಬಕಾರಿ ಇಲಾಖೆಗೆ ಸಚಿವರನ್ನು ಬದಲಾಯಿಸಿ, ನಮ್ಮ ಒಂದೇ ಒಂದು ಬೇಡಿಕೆ ಈಡೇರಿಸಿಲ್ಲ. ಒಂದು ಲಿಕ್ಕರ್ ಶಾಪ್ ಲೈಸೆನ್ಸ್ ಗೆ ಒಂದು ಕೋಟಿ ಕೊಡಬೇಕು. ಅಬಕಾರಿ ಇಲಾಖೆಯಲ್ಲಿನ ಭ್ರಷ್ಟಾಚಾರ ತಡೆಯಬೇಕಿದೆ. ಈಗಾಗಲೇ ಸಾಮಾಜಿಕ ಕಾರ್ಯಕರ್ತರು ರಾಜ್ಯಪಾಲರಿಗೆ ದೂರು ಕೊಟ್ಟಿದ್ದಾರೆ, ಅದು ಸತ್ಯಾಂಶದಿಂದ ಕೂಡಿದೆ. ಇದೇ 25ರಂದು ಎಲ್ಲ ಲಿಕ್ಕರ್ ಶಾಪ್ ಬಂದ್ ಮಾಡಿ ಹೋರಾಟ ಮಾಡುತ್ತಿದ್ದೇವೆ. ನಮ್ಮ ಬೇಡಿಕೆಗಳನ್ನು ಸಿಎಂ ಈಡೇರಿಸಬೇಕು ಎಂದು ಅವರು ಆಗ್ರಹಿಸಿದ್ದರು.

**ಲಕ್ಷ್ಮೀ ಹೆಬ್ಬಾಳ್ಕರ್ ಆಪ್ತನ ಕಿರುಕುಳದಿಂದ ನೌಕರ ಆತ್ಮಹತ್ಯೆ?:** ಬೆಳಗಾವಿ ತಹಶೀಲ್ದಾರ್ ಕಚೇರಿಯಲ್ಲಿ ದ್ವಿತೀಯ ದರ್ಜೆ ಸಹಾಯಕರಾಗಿ ಸೇವೆ ಸಲ್ಲಿಸುತ್ತಿದ್ದ 35 ವರ್ಷದ ರುದ್ರಣ್ಣ ಯಡಣ್ಣನವರ್ ಆತ್ಮಹತ್ಯಗೆ ಶರಣಾಗಿದ್ದರು. ಈ ಪ್ರಕರಣ ರಾಜ್ಯದಲ್ಲಿ ದೊಡ್ಡ ಸಂಚಲನವನ್ನೇ ಸೃಷ್ಟಿಸಿದೆ. ವರ್ಗಾವಣೆ ದಂಧೆಗೆ ರುದ್ರಣ್ಣ ಬಲಿಯಾದ್ರಾ ಎನ್ನುವ ಅನುಮಾನ ಹುಟ್ಟುವಂತೆ ಮಾಡಿದೆ. ಅದಕ್ಕೆ ಕಾರಣ ರುದ್ರಣ್ಣ ಅವರು ಆತ್ಮಹತ್ಯೆ ಮಾಡಿಕೊಳ್ಳುವ ಹಿಂದಿನ ದಿನ ತಮ್ಮ ವಾಟ್ಸಾಪ್ ಮೆಸೇಜ್‌ನಲ್ಲಿ ಬಹಿರಂಗಪಡಿಸಿದ್ದಾರೆ. ನನ್ನ ಸಾವಿಗೆ ತಹಶೀಲ್ದಾರ್ ಬಸವರಾಜ್ ನಾಗರಾಳ ಹಾಗೂ ಸೋಮು ಇವರೇ ನೇರಕಾರಣ ಎಂದು ಉಲ್ಲೇಖಿಸಿದ್ದರು. ಈ ಸೋಮು ಎಂಬಾತ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರ ಆಪ್ತ ಸಹಾಯಕರಾಗಿದ್ದಾರೆ.

ಎಸ್‌ಡಿಎ ರುದ್ರಣ್ಣ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಆಪ್ತ ಸಹಾಯಕ ಸೋಮು ಸೇರಿ ಮೂರು ಜನರ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ. ಬೆಳಗಾವಿಯ ಖಡೇಬಜಾರ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ತಾಯಿ ಮಲ್ಲವ್ವ ಅವರು ನೀಡಿದ ದೂರಿನನ್ವಯ ಎಫ್‌ಐಆರ್ ದಾಖಲಿಸಲಾಗಿದೆ. ಸರ್ಕಾರದ ವಿರುದ್ಧ ಈ ಹಿಂದಿನ ಹಲವು ಹಗರಣಗಳು ವಿವಾದಗಳು ಇದೀಗ ರಾಷ್ಟ್ರ ಮಟ್ಟದಲ್ಲಿ ಸದ್ದು ಮಾಡುತ್ತಿದ್ದು ಕಾಂಗ್ರೆಸ್ ಹೈಕಮಾಂಡ್‌ಗೆ ತೀವ್ರ ಮುಜುಗರ ತಂದೊಡ್ಡಿವೆ. ಕೇಂದ್ರ, ಬಿಜೆಪಿ ನಾಯಕರು ಮಹಾರಾಷ್ಟ್ರ ಚುನಾವಣೆಗೆ ಈ ರಾಜ್ಯ ಸರ್ಕಾರದ ಮೇಲಿನ ಆರೋಪಗಳನ್ನೇ ಅಸ್ತ್ರ ಮಾಡಿಕೊಂಡಿವೆ.

## ಮುಡಾ ಹಗರಣಕ್ಕೆ ಬಿಗ್ ಟ್ವಿಸ್ಟ್: ಮತ್ತೊಂದು ಸಾಕ್ಷಿ ಬಯಲು ಮಾಡಿದ ಸ್ನೇಹಮಯಿ ಕೃಷ್ಣ

**ಮೈಸೂರು:** ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ದೂರುದಾರ ಸ್ನೇಹಮಯಿ ಕೃಷ್ಣ ಮತ್ತೊಂದು ಸಾಕ್ಷಿ ತೆರೆದಿಟ್ಟಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ನಿ ವಿಚಾರದಲ್ಲಿ ತಹಶೀಲ್ದಾರ್ ಹಣ ಪಾವತಿಸಿದ್ದಾರೆ. ಮುದ್ರಾಂಕ ಶುಲ್ಕವನ್ನು ತಹಶೀಲ್ದಾರ್ ಅವರೇ ಪಾವತಿ ಮಾಡಿದ್ದಾರೆ ಎಂದು ಮತ್ತೊಂದು ಕ್ರಯಪತ್ರದ ಮೂಲಕ ಮಾಹಿತಿ ನೀಡಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ ದೂರುದಾರ ಸ್ನೇಹಮಯಿ ಕೃಷ್ಣ ಸಿಎಂ ಪತ್ನಿ ಪಾರ್ವತಿ ಅವರ ಕ್ರಯಪತ್ರದಲ್ಲಿ ಮುದ್ರಾಂಕ ಶುಲ್ಕ ಪಾವತಿಯನ್ನು ತಹಶೀಲ್ದಾರ್ ಮಾಡಿದ್ದಾರೆ. ನನ್ನ ಆರೋಪಕ್ಕೆ ಇದಕ್ಕಿಂತ ಬೇರೆ ಸಾಕ್ಷಿ ಬೇಕೆ ಎಂದು ಕೇಳಿದ್ದಾರೆ.

ಕ್ರಯಪತ್ರ ನೋಂದಣಿ ಮಾಡಿಸಿಕೊಳ್ಳುವವರು ನೋಂದಣಿಗೆ ಸಂಬಂಧಿಸಿದ ಶುಲ್ಕಗಳನ್ನು ಪಾವತಿ ಮಾಡಬೇಕು, ಅದೇ ರೀತಿ ಎನ್.ಮಂಜುನಾಥ್ ಮುದ್ರಾಂಕ ಶುಲ್ಕ ಪಾವತಿ ಮಾಡಿದ್ದಾರೆ. ಆದರೆ ಸಿದ್ದರಾಮಯ್ಯನವರ ಪತ್ನಿ ಪಾರ್ವತಿ ಕ್ರಯಪತ್ರ ಗಮನಿಸಿ, ಮುಡಾದ ವಿಶೇಷ ತಹಶೀಲ್ದಾರ್ ಮುದ್ರಾಂಕ ಶುಲ್ಕ ಪಾವತಿ ಮಾಡಿದ್ದಾರೆ ಎಂಬುದು ಖಚಿತವಾಗಿ ತಿಳಿದುಬರುತ್ತದೆ.

ಯತೀಂದ್ರ ಸಿದ್ದರಾಮಯ್ಯ ಹೇಳಿದ್ದೇನು? ಮುಡಾ ಹಗರಣದ ಬಗ್ಗೆ ಸ್ನೇಹಮಯಿ ಕೃಷ್ಣ ಮಾಡಿರುವ ಆರೋಪದ ಬಗ್ಗೆ ಮಾತನಾಡಿದ ಅವರು, ಆ ಸಮಯದಲ್ಲಿ ನನ್ನ ತಾಯಿಗೆ ಹುಷಾರಿರಲಿಲ್ಲ, ರಿಜಿಸ್ಟ್ರೇಷನ್ ಫೀ ತುಂಬಿದ್ರೆ ತಪ್ಪೇನು ಎಂದು ಪ್ರಶ್ನಿಸಿದ್ದಾರೆ. ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ಲೋಕಾಯುಕ್ತ ಸಿದ್ದರಾಮಯ್ಯ ಅವರಿಗೆ ಈಗಾಗಲೇ ನೋಟಿಸ್ ಜಾರಿ ಮಾಡಿದೆ. ನನಗೆ ನ್ಯಾಯ ಸಿಗದಿದ್ದರೆ ನಾನು ಕೋರ್ಟ್‌ಗೆ



ಹೋಗುತ್ತೇನೆ ಎಂದು ಸ್ನೇಹಮಯಿ ಎಚ್ಚರಿಕೆ ನೀಡಿದ್ದರು.

ಸಿಎಂ ಸಿದ್ದರಾಮಯ್ಯಗೆ ಲೋಕಾಯುಕ್ತ ನೋಟಿಸ್ ನೀಡಿರುವುದರ ಕುರಿತು ಪ್ರತಿಕ್ರಿಯೆ ನೀಡಿರುವ ಸ್ನೇಹಮಯಿ ಕೃಷ್ಣ, ಮುಡಾ ಹಗರಣ ಸಂಬಂಧ ನನ್ನ ಬಳಿ ಇರುವ ಸಾಕ್ಷ್ಯಗಳನ್ನ ನಾನು ನೀಡಿದ್ದೇನೆ. ಆ ಸಾಕ್ಷ್ಯಗಳ ಆಧಾರದ ಮೇಲೆ ಸಿದ್ದರಾಮಯ್ಯ ಅವರಿಗೆ ಶಿಕ್ಷೆ ಆಗಬಹುದು ಎಂದು ನಂಬಿದ್ದೇನೆ. ಆದರೆ ನನಗೆ ಮೊದಲಿನಿಂದಲೂ ಕೂಡ ಲೋಕಾಯುಕ್ತದ ಮೇಲೆ ನಂಬಿಕೆ ಇಲ್ಲ. ಈಗ ಪ್ರಕರಣವನ್ನ ಸಿಬಿಐಗೆ ವಹಿಸುವಂತೆ ನಾನು ಅರ್ಜಿ ಸಲ್ಲಿಸಿರುವೆ ಎಂದು ಹೇಳಿದ್ದರು. ಮುಡಾ ಹಗರಣ ಸಂಬಂಧ ನಾನು ಆರಂಭದಿಂದಲೂ ತನಿಖೆಗೆ ಒತ್ತಾಯ ಮಾಡುತ್ತಲೇ ಬಂದಿದ್ದೇನೆ. ಕೊನೆಗೂ ಸಿದ್ದರಾಮಯ್ಯ ಅವರ ವಿಚಾರಣೆ ನಡೆಸುತ್ತಿರುವುದು ನನಗೆ ಖುಷಿ ತಂದಿದೆ. ನಾನು ಲೋಕಾಯುಕ್ತ ಅಧಿಕಾರಿಗಳಿಗೆ 50 ಪ್ರಶ್ನೆಗಳ ಮನವಿ ಪತ್ರ ನೀಡಿರುವೆ ಎಂದಿದ್ದರು.



**ಗಾಂಧಿನಗರ ವಿಧಾನಸಭಾ ಕ್ಷೇತ್ರದ ಕಾಟನ್ ಪೇಟೆ ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷರಾದ ಶ್ರೀನಿವಾಸ್ ಮೂರ್ತಿರವರ ಹುಟ್ಟುಹಬ್ಬದ ಅಂಗವಾಗಿ ಚಿಕ್ಕಪೇಟೆ ವಾರ್ಡ್ ಅಧ್ಯಕ್ಷರಾದ ಎ ಕೆಎಸ್ ಚಿನ್ನುಮಣಿ. ವಿ ಸತ್ಯ. ಕಿರಣ್ ಕುಮಾರ್. ವಿಜಯಶಂಕರ್. ಅನೇಕ ಕಾಂಗ್ರೆಸ್ ಮುಖಂಡರು ಹೂಗುಚ್ಛ ನೀಡಿ ಸನ್ಮಾನಿಸಿ ಶುಭಕೋರಿದರು.**

## ಅಬಕಾರಿಯಲ್ಲಿ 700 ಕೋಟಿ ಹಣ ಪಡೆಯೋಕಾಗುತ್ತಾ?

**ಹುಬ್ಬಳ್ಳಿ:** ಅಬಕಾರಿಯಲ್ಲಿ 700 ಕೋಟಿ ಪಡೆಯೋಕೆ ಆಗುತ್ತಾ? ಒಬ್ಬ ಪ್ರಧಾನಿ ಆದವರು ಈ ರೀತಿ ಸುಳ್ಳು ಹೇಳೋದು ಆ ಸ್ಥಾನಕ್ಕೆ ಅಗೌರವ ಎಂದು ಸಿಎಂ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದ್ದಾರೆ.

ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಮದ್ಯದಂಗಡಿ ಮಾಲೀಕರಿಂದ 700 ಕೋಟಿ ರೂ. ಪಡೆದಿದೆ ಎಂಬ ಆರೋಪ ಇದೆ ಅನ್ನೋ ಪ್ರಧಾನಿ ಮೋದಿ ಅವರ ಹೇಳಿಕೆಗೆ ಹುಬ್ಬಳ್ಳಿಯಲ್ಲಿ ಪ್ರತಿಕ್ರಿಯೆ ನೀಡಿದರು.

ಒಬ್ಬ ಪ್ರಧಾನಿ ಆದವರು ಸುಳ್ಳು ಹೇಳೋದು ಆ ಸ್ಥಾನಕ್ಕೆ ಅಗೌರವ. ಯಾರಾದ್ರೂ ಅಬಕಾರಿಯಲ್ಲಿ 700 ಕೋಟಿ ಅಕ್ರಮ ಮಾಡಲು ಆಗುತ್ತಾ? ಒಬ್ಬ ಪ್ರಧಾನಿ ಸುಳ್ಳು ಹೇಳಬೇಕಾದ್ರೆ ಏನು ಹೇಳಬೇಕು? ಯಾಕ್ರಿ ದುಡ್ಡು ಕೊಡ್ತಾರೆ ಅವರು, ಬಿಜೆಪಿಯವರು ರಾಜಕೀಯಗೋಸ್ಕರ ಆರೋಪ ಮಾಡಿದ್ದಾರೆ, ಮದ್ಯದ ಅಂಗಡಿ ವ್ಯಾಪಾರಿಗಳು ರಾಜಕೀಯ ಕಾರಣಕ್ಕೆ ಆರೋಪ ಮಾಡಿರುತ್ತಾರೆ ಎಂದರು.

ಹಿಂದೆ ಶಾಸಕರನ್ನ ಕೊಂಡುಕೊಂಡಿದ್ರಲ್ಲಾ, ಎಷ್ಟು ಕೋಟಿ ಕೊಟ್ಟಿದ್ರು? ಎಲ್ಲಿಂದ ದುಡ್ಡು ಬಂತು ಯತ್ನಾಳ್ ಅವರು, ಸಿಎಂ ಆಗಬೇಕಾದರೆ 2 ಸಾವಿರ ಕೋಟಿಕೊಡಬೇಕು ಅಂದಿದ್ದರು. ಯಾವ ದುಡ್ಡು ಅದು? ಎಂದ ಸಿದ್ದರಾಮಯ್ಯ, ವಿಜಯೇಂದ್ರ ರಾಜ್ಯಾಧ್ಯಕ್ಷ ಆಗಲು ಹಣ ಕೊಟ್ಟ ಬಗ್ಗೆ ಮಾತಾಡಿದ್ದು, ಇದು ನಾನು ಹೇಳಿದ್ದಲ್ಲಾ ಯತ್ನಾಳ ಹೇಳಿದ್ದು. ಅವರು ಕೇಂದ್ರದ ಮಾಜಿ ಮಂತ್ರಿ, ಯಡಿಯೂರಪ್ಪ 2,000 ಕೋಟಿ ರೂ. ಕೊಟ್ಟು ಸಿಎಂ ಆಗಿದ್ದು ಎಂದಿದ್ದಾರೆ. ಬೊಮ್ಮಾಯಿ ಸಿಎಂ ಆಗಲು ಹಣ ಕೊಟ್ಟರು ಎಂದಿದ್ದರು. ಎಲ್ಲಿಂದ ಬಂತು ದುಡ್ಡು? ಎಂದು ಪ್ರಶ್ನೆಗಳ ಸುರಿಮಳೆ ಸುರಿಸಿದರು.

ಇದೇ ವೇಳೆ ಕೋವಿಡ್ ಹಗರಣ ತನಿಖೆ ವಿಚಾರವಾಗಿ ಸಿಎಂ ಸಿದ್ದರಾಮಯ್ಯ ಹುಬ್ಬಳ್ಳಿಯಲ್ಲಿ ಪ್ರತಿಕ್ರಿಯೆ ನೀಡಿದ್ದಾರೆ. ಹಗರಣ ವರದಿ ಇನ್ನೂ ಕ್ಯಾಬಿನೆಟ್ ಎದುರು ಬಂದಿಲ್ಲ, ಎಗ್ಸಾಮಿನ್ ಮಾಡುತಿದ್ದಾರೆ, ಸಬ್ ಕಮಿಟಿ ವರದಿ ಬಂದ ಮೇಲೆ, ಅದರ ಬಗ್ಗೆ ಚರ್ಚೆ ಆಗಲಿದೆ ಎಂದರು.

ಮುಂದುವರಿದು ಗೊಡ್ಡು ಬೆದರಿಕೆಗೆ ಅಂಜಲ್ಲ ಎಂಬ



ಬೊಮ್ಮಾಯಿ ಹೇಳಿಕೆಗೆ ತಿರುಗೇಟು ನೀಡಿ, ಗೊಡ್ಡು ಬೆದರಿಕೆ ಅಲ್ಲಾ ಇದು, ನಾವು ಗುನ್ನಾ ಅವರ ಅಧ್ಯಕ್ಷತೆಯಲ್ಲಿ ಕಮಿಷನ್ ಮಾಡಿದ್ದು, ಅವರು ಕೊಟ್ಟ ವರದಿ ಅದು, ಅದರ ಆಧಾರದ ಮೇಲೆ ಇದು ನಡೆದಿದೆ. ಲೂಟಿ ಹೊಡೆದು ಗೊಡ್ಡು ಎಂದರೆ ಹೇಗೆ? ಕ್ರಿಮಿನಲ್ ಆಕ್ಷನ್ ಆದ ಮೇಲೆ ಏನು ಮಾಡ್ತಾರೆ ನೋಡೋಣ? ಇನ್ನೂ ಸಬ್ ಕಮಟಿ ರಿಪೋರ್ಟ್ ಬಂದಿಲ್ಲ ಎಂದು ಹೇಳಿದರು. ಯಡಿಯೂರಪ್ಪ ಹೇಳಿಕೆಗೆ ಪ್ರತಿಕ್ರಿಯೆ ನೀಡಿ, ನ್ಯಾಯಾಂಗದ ಮೇಲೆ ಭರವಸೆ ಯಡಿಯೂರಪ್ಪ ಅವರಿಗೆ ಮಾತ್ರ ಭರವಸೆ ಇದೆಯಾ? ಉಳಿದವರಿಗೆ ಇಲ್ಲವಾ? ನ್ಯಾಯಾಂಗ ಇರುವುದು ನ್ಯಾಯ ಕೊಡಲಿಕ್ಕೆ, ತಪ್ಪು ಮಾಡಿದವರಿಗೆ ಶಿಕ್ಷೆ ಕೊಡಲು ಅದು ಇರೋದು. ಅವರು ಮಾಡಿರುವುದು ತಪ್ಪು ಎಂದು ಸಾಬಿತಾದರೆ ಯಡಿಯೂರಪ್ಪ ಏನ್ ಮಾಡ್ತಾರೆ? ಎಂದ ಅವರು ಯಡಿಯೂರಪ್ಪ ಅವರಿಗೆ ಕೊಲೆ ಬೆದರಿಕೆ ಬಂದಿತ್ತು ಎಂಬ ವಿಚಾರವಾಗಿ ಮಾತನಾಡಿ, ಕೊಲೆ ಬೆದರಿಕೆ ಹಾಕಿದವರ ಮೇಲೆ ದೂರು ಕೊಡಬೇಕಲ್ಲಾ? ಯಾಕೆ ಕೇಸ್ ಹಾಕಿಲ್ಲಾ? ಈಗ ಅದನ್ನ ಹೇಳಿದರೆ ಹೇಗೆ? ಎಂದು ಪ್ರಶ್ನೆ ಮಾಡಿದರು. ಆರ್‌ಟಿಐ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಮುಡಾ ದಾಖಲೆ ಬಿಡುಗಡೆ ಮಾಡಿದ ವಿಚಾರವಾಗಿ ಮಾತನಾಡಿ, ಹಣ ಚೆಕ್ ಮೂಲಕ ಕೊಟ್ಟಿದಾರೇನ್ರಿ? ಸುಳ್ಳು ಆರೋಪ ಮಾಡಿದರೆ ಏನು, ನನ್ನ ಬಾಮೈದ ಪತ್ನಿಗೆ ಕೊಟ್ಟಿದ್ದಾರೆ, ಅಪರ ಆಯುಕ್ತ ಯಾಕೆ ಕೊಡ್ತಾರೆ? ಉಪ ನೊಂದಣಾಧಿಕಾರಿ ಯಾಕೆ ಕೊಡ್ತಾರೆ? ಸುಮ್ನೆ ಸುಳ್ಳು ಆರೋಪ ಮಾಡ್ತಾರೆ ಎಂದು ಜಾರಿಕೊಂಡರು.

## ದಲ್ಲಾಳಿಗಳಿಂದ ಸಿಗ್ತಿಲ್ಲ ದರ

ಅಳಿದು ಉಳಿದ ಈರುಳ್ಳಿಗೆ ಒಳ್ಳೆಯ ಬೆಲೆ ಬರುತ್ತದೆ ಎಂದು ಕಟಾವು ಮಾಡಿಕೊಂಡು ಬಂದಿದ್ದಾರೆ. ಆದರೆ ಏಕಾಏಕಿ ಈರುಳ್ಳಿ ಬೆಲೆ ಕುಸಿತವಾಗಿದೆ.

ಒಂದು ಎಕರೆ ಈರುಳ್ಳಿ ಬೆಳೆಯಲು 50 ರಿಂದ 60 ಸಾವಿರ ರೂಪಾಯಿ ಖರ್ಚು ಮಾಡಿರುತ್ತಾರೆ. ಐನೂರು, ಸಾವಿರಕ್ಕೆ ಮಾರಾಟ ಮಾಡಿದರೆ ಹಾಕಿದ ಬಂಡವಾಳ ಕೂಡಾ ಬರುವುದಿಲ್ಲ ಎಂದು ರೈತ ಮುತ್ತಪ್ಪ ಹೇಳಿಕೊಂಡಿದ್ದಾರೆ.

**ದಲ್ಲಾಳಿಗಳು ಹೇಳುವುದೇನು?:** ಹಲವೆಡೆ ರೈತರು ಖರೀದಿದಾರರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ, ಈರುಳ್ಳಿಯನ್ನು ವಾಪಸ್ ತೆಗೆದುಕೊಂಡು ಹೋಗಿದ್ದಾರೆ. ಈ ಬಗ್ಗೆ ದಲ್ಲಾಳಿಗಳನ್ನು ಪ್ರಶ್ನಿಸಿದರೆ, ಈರುಳ್ಳಿ ದರ ದಿಢೀರ್ ಕಡಿಮೆಯಾಗಿಲ್ಲ. ಗುಣಮಟ್ಟದ ಈರುಳ್ಳಿಗೆ ಒಳ್ಳೆಯ ಬೆಲೆ ಇದೆ. ಆದರೆ ಗುಣಮಟ್ಟ ಇಲ್ಲದ ಈರುಳ್ಳಿ ಕಡಿಮೆ ಬೆಲೆಗೆ ಟೆಂಡರ್ ಆಗಿದೆ ಎನ್ನುತ್ತಾರೆ.

ರೈತರಿಗೆ ಇಷ್ಟೆಲ್ಲಾ ಅನ್ಯಾಯವಾಗುತ್ತಿದೆ ಎಂಬ ಆರೋಪಗಳು ಕೇಳಿಬಂದರೂ ಎಪಿಎಂಸಿ ಅಧಿಕಾರಿಗಳು ಮಾತ್ರ ಅತ್ತಕಡೆ ಗಮನ ಹರಿಸುತ್ತಲೇ ಇಲ್ಲ. ಇದಕ್ಕೂ ರೈತರಿಂದ ಆಕ್ರೋಶ ವ್ಯಕ್ತವಾಗಿದೆ.

## ಕರಿಯ ಕುಮಾರಸ್ವಾಮಿ ಎಂದ ಜಮೀರ್

**ಜಮೀರ್ ಹೇಳಿಕೆ:** ''ಯೋಗೇಶ್ವರ್ ನಮ್ಮ ಪಕ್ಷದಿಂದ ರಾಜಕೀಯ ಪ್ರಾರಂಭ ಮಾಡಿದರು. ಕೆಲವು ವ್ಯತ್ಯಾಸಗಳಾಗಿ ಬಿಜೆಪಿಗೆ ಹೋದರು. ಜೆಡಿಎಸ್ ಹೋಗಬೇಕು ಅಂತ ಅಂದುಕೊಂಡಿದ್ದರು, ಆದರೆ ಕರಿಯ ಕುಮಾರಸ್ವಾಮಿ, ಬಿಜೆಪಿಗಿಂತ ಡೇಂಜರ್ ಅಂತ ಜೆಡಿಎಸ್ ಗೆ ಹೋಗಿಲ್ಲ. ಈ ಹಿಂದೆ ಹಿಜಾಬ್ ಬೇಡ ಅಂದಿದ್ದೀರಿ. ಈಗ ನಿನಗೆ ಮುಸಲ್ಮಾನರ ಮತ ಬೇಕಾ ಕುಮಾರಸ್ವಾಮಿ ಬಿಜೆಪಿಗೆ ಹೋಗಿ ಮುಸಲ್ಮಾನರನ್ನು ಖರೀದಿ ಮಾಡ್ತಾನಂತೆ. ಏ ಕುಮಾರಸ್ವಾಮಿ ನಿನ್ ರೇಟು ಹೇಳು, ಮುಸಲ್ಮಾನರು ಒಂದೊಂದ್ ಪೈಸೆ ಹಾಕಿ ಇಡೀ ನಿನ್ನ ಕುಟುಂಬವನ್ನೇ ಖರೀದಿ ಮಾಡುತ್ತಾರೆ'' ಎಂದು ವಾಗ್ದಾಳಿ ಮಾಡಿದ್ದಾರೆ.

ಜಮೀರ್ ಅಹ್ಮದ್ ಈ ಹಿಂದೆಯೂ ಇದೇ ರೀತಿಯಾದ ಹೇಳಿಕೆ ನೀಡಿದ್ದರು. 2021ರಲ್ಲಿ ಬೀದರ್ ಜಿಲ್ಲೆಯ ಬಸವಕಲ್ಯಾಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣಾ ಪ್ರಚಾರದ ಬಹಿರಂಗ ಸಭೆಯಲ್ಲಿ ಹೆಚ್ ಡಿ ಕುಮಾರಸ್ವಾಮಿ ಅವರನ್ನು ಜಮೀರ್ ಅಹ್ಮದ್ ಕಾಲಾ ಕುಮಾರಸ್ವಾಮಿ (ಕರಿಯ ಕುಮಾರಸ್ವಾಮಿ) ಎಂದು ಉರ್ದು ಭಾಷೆಯಲ್ಲಿ ನಿಂದಿಸಿದ್ದರು.

## 2 ಪ್ರಬಲ ಭೂಕಂಪ

ಹಲವಾರು ಮನೆಗಳು ಹಾನಿಗೊಳಗಾಗಿವೆ. ಅಲ್ಲದೇ ವಿದ್ಯುತ್ ಸಂಪರ್ಕ ಕಡಿತಗೊಂಡಿದೆ. ಈ ಸಮಯದಲ್ಲಿ ನಮ್ಮ ಮೊದಲ ಆದ್ಯತೆ ಜನರ ಜೀವಗಳನ್ನು ಉಳಿಸುವುದು ಎಂದು ಕ್ಯೂಬಾದ ಅಧ್ಯಕ್ಷ ಮಿಗುಯೆಲ್ ಡಯಾಜ್-ಕ್ಯಾನೆಲ್ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ಭೂಕಂಪ ಸಂಭವಿಸಿದ ಪ್ರದೇಶದ ಹಳೆಯದಾದ ಕಟ್ಟಡಗಳು ತೀವ್ರ ಹಾನಿಗೆ ಒಳಗಾಗಿವೆ ಎಂದು ಸ್ಥಳೀಯ ಮಾಧ್ಯಮಗಳು ಪ್ರಕಟಿಸಿವೆ. ಇನ್ನೂ ಇತ್ತೀಚೆಗೆ ಸಂಭವಿಸಿದ್ದ ಚಂಡಮಾರುತದಿಂದ ಚೇತರಿಸಿಕೊಳ್ಳಲು ಕ್ಯೂಬಾ ಹೆಣಗಾಡುತ್ತಿದೆ. ಇದರ ನಡುವೆಯೇ ಭೂಕಂಪ ಸಂಭವಿಸಿದ್ದು ಜನ ಪರದಾಡುತ್ತಿದ್ದಾರೆ. ಇನ್ನೂ ಕ್ಯೂಬಾದ ರಾಜಧಾನಿ ಹವಾನಾದಲ್ಲಿ ಭೂಕಂಪನದಿಂದ ಯಾವುದೇ ಹಾನಿಯಾಗಿಲ್ಲ ಎಂದು ವರದಿಯಾಗಿದೆ.

## ಕಡ್ಡಾಯಗೊಳಿಸಿದ ಪೊಲೀಸರು

ಸ್ವ-ಇಚ್ಛೆಯಿಂದ ಕೆಲವರು ಮಾತ್ರ ಹೆಲ್ಮೆಟ್ ಧರಿಸುತ್ತಿದ್ದರು. ಆದರೆ, ರಾಯಚೂರು ಜಿಲ್ಲೆಯಲ್ಲಿ ಅಪಘಾತಗಳ ಸಂಖ್ಯೆ ಹೆಚ್ಚಾಗಿದ್ದು ಸಾವಿನ ಸಂಖ್ಯೆಯೂ ಜಾಸ್ತಿ ಆಗಿದೆ. ಹೀಗಾಗಿ ಪೊಲೀಸ್ ಇಲಾಖೆ ರಾಯಚೂರಲ್ಲಿ ಹೆಲ್ಮೆಟ್ ಬಳಕೆ ಕಡ್ಡಾಯಗೊಳಿಸಿದೆ.

ಹೆಲ್ಮೆಟ್ ಧರಿಸದ ಬೈಕ್ ಸವಾರರಿಗೆ 500 ರೂ. ದಂಡ ವಿಧಿಸಲಾಗುತ್ತಿದೆ. ನ.1 ರಿಂದ ಟಫ್ ರೂಲ್ಸ್ ಜಾರಿ ಮಾಡಲಾಗಿದೆ. ಕಳೆದ 9 ದಿನಗಳಲ್ಲಿ 6,632 ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು, 33,17,500 ರೂ. ದಂಡ ವಸೂಲಿ ಮಾಡಿದ್ದಾರೆ. ಪ್ರತಿದಿನ ಸರಾಸರಿ 740 ಪ್ರಕರಣ ದಾಖಲಾಗುತ್ತಿದೆ. 3 ಲಕ್ಷ ರೂಪಾಯಿಗೂ ಅಧಿಕ ದಂಡ ವಸೂಲಿಯಾಗುತ್ತಿದೆ. ಹೀಗಾಗಿ ಜಿಲ್ಲೆಯಲ್ಲಿ ಹೆಲ್ಮೆಟ್ ವ್ಯಾಪಾರವೂ ಜೋರಾಗಿದ್ದು, ದಿನದಿಂದ ದಿನಕ್ಕೆ ಹೆಲ್ಮೆಟ್ ಧರಿಸುವವರ ಸಂಖ್ಯೆ ಹೆಚ್ಚಾಗಿದೆ.

ಕಳೆದ 3 ವರ್ಷಗಳಲ್ಲಿ ಅಪಘಾತಗಳಿಂದ ಜಿಲ್ಲೆಯಲ್ಲಿ 1,184 ಜನ ಸಾವನ್ನಪ್ಪಿದ್ದಾರೆ. 2024ರಲ್ಲಿ 300ಕ್ಕೂ ಹೆಚ್ಚು ಜನ ಸಾವನ್ನಪ್ಪಿರುವುದರಿಂದ ಪೊಲೀಸ್ ಇಲಾಖೆ ಬೈಕ್ ಸವಾರರ ಸುರಕ್ಷತೆ ದೃಷ್ಟಿಯಲ್ಲಿ ಹೆಲ್ಮೆಟ್ ಕಡ್ಡಾಯಗೊಳಿಸಿದೆ. ಹೆಲ್ಮೆಟ್ ಕಡ್ಡಾಯಗೊಳಿಸುವ ಜೊತೆಗೆ ಸರ್ಕಾರ ರಸ್ತೆಗಳ ಸುಧಾರಣೆಗೂ ಮುಂದಾಗಬೇಕು ಅಂತಾ ಜಿಲ್ಲೆಯ ಜನ ಆಗ್ರಹಿಸಿದ್ದಾರೆ. ಹದಗೆಟ್ಟ ರಸ್ತೆಗಳಿಂದ ಅಪಘಾತಗಳು ಹೆಚ್ಚಾಗುತ್ತಿವೆ ಎಂದು ಆರೋಪಿಸಿದ್ದಾರೆ.

ಹೆಲ್ಮೆಟ್ ಕಡ್ಡಾಯಗೊಳಿಸಿರುವುದಕ್ಕೆ ಜಿಲ್ಲೆಯಲ್ಲಿ ಮಿಶ್ರ ಪ್ರತಿಕ್ರಿಯೆಗಳು ವ್ಯಕ್ತವಾಗುತ್ತಿದೆ. ಬೈಕ್ ಸವಾರರು ದಂಡಕ್ಕೆ ಹೆದರಿದ್ದಾರೆ. ಬೇಸಿಗೆಯಲ್ಲಿ ವಿನಾಯಿತಿ ಕೊಡಬೇಕು ಎಂದು ಕೇಳುತ್ತಿದ್ದಾರೆ. ಅಪಘಾತಗಳ ನಿಯಂತ್ರಣ ಮಾಡುವ ನಿಟ್ಟಿನಲ್ಲಿ ಹೆಲ್ಮೆಟ್ ಕಡ್ಡಾಯ ಜೊತೆಗೆ ರಸ್ತೆ ಸುರಕ್ಷಿತ ನಿಯಮಗಳ ಪಾಲನೆಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲೆಯ ಜನ ಆಗ್ರಹಿಸಿದ್ದಾರೆ.

## ಡ್ಯಾನ್ಸ್ ಮಾಸ್ಟರ್ ಅಂದರ್!

**ವ್ಯಾಪಾರದ ನೆಪದಲ್ಲಿ ಚೈನ್ ಕಳ್ಳತನ:** ಗದಗ ಜಿಲ್ಲೆ ಲಕ್ಷ್ಮೇಶ್ವರ ತಾಲ್ಲೂಕಿನ ಹುಲ್ಲೂರು ಗ್ರಾಮದ ನಿವಾಸಿ ಸೈಯ್ಯದ್ ಅಲಿ ಬಾಳಸಾಹೇಬ್ ನಡಾಫ್ ಬಂಧಿತ ಆರೋಪಿಯಾಗಿದ್ದಾನೆ. ಸೈಯ್ಯದ್ ಕಳೆದ ಆಗಸ್ಟ್ ತಿಂಗಳಿನಲ್ಲಿ ಬೆಂಗಳೂರು ಹೊರವಲಯದ ಆನೇಕಲ್ ತಾಲ್ಲೂಕಿನ ಜಿಗಣಿ ಬಳಿ ಸತ್ತಾರ್ ಸಾಬ್ ದಿಣ್ಣೆ ಬಳಿ ರತ್ನಮ್ಮ ಎಂಬುವವರ ಸರ ಎಗರಿಸಿದ್ದ. ಬುಲೆಟ್ ಬೈಕ್‌ನಲ್ಲಿ ಸಿಗರೇಟ್ ಖರೀದಿ ನೆಪದಲ್ಲಿ ಬಂದಿದ್ದ ಆರೋಪಿ ಮಹಿಳೆಯ ಕತ್ತಿನಲ್ಲಿದ್ದ ಎರಡು ಚೈನ್ ಎಗರಿಸಿ ಪರಾರಿಯಾಗಿದ್ದ. ಘಟನೆ ಸಂಬಂಧ ಮಹಿಳೆ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಿದ ಪೊಲೀಸರು ಆರೋಪಿಯನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಬಂಧಿತ ಆರೋಪಿಯಿಂದ 8 ಲಕ್ಷ ಮೌಲ್ಯದ ಚಿನ್ನಾಭರಣ, 2 ಬೈಕ್‌ಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

**ಪ್ರೇಯಸಿ, ಆಕೆಯ ತಾಯಿಗಾಗಿ ಕಳ್ಳತನ!:** ಆರೋಪಿಯು

### ಮೊದಲನೇ ಪುಟದಿಂದ...

ಗದಗ ಜಿಲ್ಲೆ ಲಕ್ಷ್ಮೇಶ್ವರ ತಾಲ್ಲೂಕಿನವನಾಗಿದ್ದು ಡ್ಯಾನ್ಸ್ ಮಾಸ್ಟರ್ ಆಗಿ ಕೆಲಸ ಮಾಡಿಕೊಂಡಿದ್ದ. ವಿಲಾಸಿ ಜೀವನ ನಡೆಸುವುದನ್ನು ರೂಢಿಗತ ಮಾಡಿಕೊಂಡಿದ್ದ ಈ ಆರೋಪಿಯ ವಿರುದ್ಧ, ಬೆಂಗಳೂರು ನಗರ, ತುಮಕೂರ, ತುಮಕೂರು, ರಾಮನಗರ, ದಾವಣಗೆರೆ ಜಿಲ್ಲೆಗಳಲ್ಲಿ 8 ದ್ವಿಚಕ್ರವಾಹನ ಮತ್ತು ಚಿನ್ನದ ಸರ ಸುಲಿಗೆ ಪ್ರಕರಣಗಳು ದಾಖಲಾಗಿವೆ. ಆರೋಪಿಯು ತನ್ನ ಪ್ರೇಯಸಿಯ ಜೊತೆ ವಿಲಾಸಿ ಜೀವನ ನಡೆಸಲು ಮತ್ತು ಆಕೆಯ ಪೋಷಕರ ಆಸ್ಪತ್ರೆ ವೆಚ್ಚಗಳನ್ನು ಪೂರೈಸಲು ದ್ವಿಚಕ್ರವಾಹನ ಕಳ್ಳತನ ಮತ್ತು ಚಿನ್ನದ ಸರ ಸುಲಿಗೆ ಮಾಡುತ್ತಿದ್ದ ಎಂದು ತನಿಖೆಯಿಂದ ತಿಳಿದುಬಂದಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

## ಹೀಟರ್ ವ್ಯವಸ್ಥೆ

ಅದನ್ನು ಬೆಚ್ಚಗಿಡಲಾಗುತ್ತದೆ. ಹವಾಮಾನ ವೈಪರೀತ್ಯದ ಸಮಯದಲ್ಲಿ ಗರ್ಭಗುಡಿಯಲ್ಲಿ ಬ್ಲೋವರ್‌ನಿಂದ ಬೆಚ್ಚಗಿನ ಗಾಳಿಯನ್ನು ಸಹ ಒದಗಿಸಲಾಗುತ್ತದೆ.

ರಾಮಲಲ್ಲಾ ಬಾಲಕ. ಹೀಗಾಗಿ, ಅವನ ಆರೈಕೆ ಮುಖ್ಯವಾಗುತ್ತದೆ. ಇದನ್ನು ಗಮನದಲ್ಲಿಟ್ಟುಕೊಂಡು ಚಳಿಗಾಲದಲ್ಲಿ ಬಾಲಕ ರಾಮನಿಗೆ ವಿಶೇಷ ಗಮನ ಕೊಡಲಾಗುವುದು.

ದೇವಾಲಯದ ಟ್ರಸ್ಟ್‌ನ ವಕ್ತಾರ ಓಂಕಾರ್ ಸಿಂಗ್, ರಾಮಲಲ್ಲಾ ರಾಮಮಂದಿರದಲ್ಲಿ ರಾಜಕುಮಾರನಾಗಿ ಕುಳಿತಿದ್ದಾನೆ. ಆದ್ದರಿಂದ ಅವನ ಬಟ್ಟೆಗಳು ಅವನ ರಾಜಪ್ರಭುತ್ವಕ್ಕೆ ಹೊಂದಿಕೆಯಾಗಬೇಕು ಎಂದು ಸಿಂಗ್ ಹೇಳಿದರು.

## ಪಿಎಸ್‌ಐ ಪರೀಕ್ಷೆ

**ಅಭ್ಯರ್ಥಿಗಳ ಆಕ್ರೋಶಕ್ಕೆ ಕಾರಣವೇನು?:** ಈಗಾಗಲೇ ಸ್ಪರ್ಧಾತ್ಮಕ ನೇಮಕಾತಿ ಪರೀಕ್ಷೆಗಳ ಶುಲ್ಕವನ್ನು ಏರಿಕೆ ಮಾಡಲಾಗಿದೆ. ಇದು ಸಾಲದು ಎಂಬಂತೆ, ಕೆಇಎ ತಾನು ಪರೀಕ್ಷೆಗಳಲ್ಲಿ ಎಡವಟ್ಟು ಮಾಡಿ ಹಾಗೂ ತಪ್ಪಾದ ಪ್ರಶ್ನೆಗಳನ್ನು ನೀಡಿ ಸುಲಿಗೆಗೆ ಮುಂದಾಗಿದೆ! ಆಕ್ಷೇಪಣೆಯ ಹೆಸರಲ್ಲಿ ಕೋಟ್ಯಂತರ ರೂಪಾಯಿ ಹಣ ವಸೂಲಿ ಮಾಡಲಾಗುತ್ತಿದೆ. ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಕಳೆದ ವಾರ 402 ಪಿಎಸ್‌ಐ ಹುದ್ದೆಗಳ ನೇಮಕಾತಿ ಪರೀಕ್ಷೆಯಲ್ಲಿ 10ಕ್ಕೂ ಹೆಚ್ಚು ತಪ್ಪಾದ ಪ್ರಶ್ನೆಗಳನ್ನು ಕೇಳಿದೆ. ಈ ಪ್ರಶ್ನೆಗಳಿಗೆ ಅಭ್ಯರ್ಥಿಗಳು ಆಕ್ಷೇಪಣೆಗಳಿದ್ದರೆ ಸಲ್ಲಿಸುವಂತೆ ಕೋರಿದೆ. ಆದರೆ, ಆಕ್ಷೇಪಣೆ ಸಲ್ಲಿಸುವ ಪ್ರತಿ ಒಂದು ಪ್ರಶ್ನೆಗೂ ನೂರು ರೂಪಾಯಿ ಶುಲ್ಕ ವಿಧಿಸಿದೆ.

**ತಪ್ಪು ಪ್ರಶ್ನೆ ನೀಡಿ, ಆಕ್ಷೇಪಣೆಗಳಿಗೆ ಹಣ ವಸೂಲಿ!:** ಪ್ರತಿಯೊಂದು ತಪ್ಪಾದ ಪ್ರಶ್ನೆಗೆ ಆಕ್ಷೇಪಣೆ ಸಲ್ಲಿಸಲು 100 ರೂಪಾಯಿ ಹಣ ಕಟ್ಟಬೇಕು. ಅಂದರೆ, 10 ತಪ್ಪಾದ ಪ್ರಶ್ನೆಗಳಿಗೆ, ಪರೀಕ್ಷೆ ಬರೆದ ಲಕ್ಷಾಂತರ ಅಭ್ಯರ್ಥಿಗಳು 1,000 ರೂ.ನಷ್ಟು ಹೆಚ್ಚು ಹಣ ಪಾವತಿಸಿ ಆಕ್ಷೇಪಣೆ ಸಲ್ಲಿಸಬೇಕಾದ ದುಸ್ಥಿತಿ ನಿರ್ಮಾಣವಾಗಿದೆ.

ಪರೀಕ್ಷಾ ಪ್ರಾಧಿಕಾರದಿಂದ ನಡೆದ ಎಡವಟ್ಟಿಗೂ ತಪ್ಪಾದ ಪ್ರಶ್ನೆಗಳಿಗೆ ಆಕ್ಷೇಪಣೆ ಸಲ್ಲಿಸಬೇಕು ಎಂದರೂ ಸಾವಿರಾರೂ ರೂಪಾಯಿ ಶುಲ್ಕ ಕಟ್ಟಬೇಕಾಗಿದ್ದು, ಅಭ್ಯರ್ಥಿಗಳು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಕೇಂದ್ರ ಸರ್ಕಾರ ನಡೆಸುವ ಐಎಎಸ್ ಹಾಗೂ ಇತರ ಪರೀಕ್ಷೆಗಳಿಗೆ ಇರುವಂತೆ ಶುಲ್ಕ ಕಡಿಮೆ ಮಾಡಬೇಕು, ಆಕ್ಷೇಪಣೆ ಶುಲ್ಕವನ್ನು ತೆಗದು ಹಾಕಬೇಕೆಂದು ಒತ್ತಾಯಿಸಿದ್ದಾರೆ.

ಒಟ್ಟಿನಲ್ಲಿ ಸ್ಪರ್ಧಾತ್ಮಕ ಪರೀಕ್ಷೆ ನಡೆಸುವ ಪ್ರಾಧಿಕಾರಗಳು ಒಂದಲ್ಲ ಒಂದು ಎಡವಟ್ಟುಗಳನ್ನು ಮಾಡುತ್ತಲೇ ಇವೆ. ಮಂಡಳಿ ಮಾಡುವ ತಪ್ಪುಗಳಿಗೂ ಅಭ್ಯರ್ಥಿಗಳಿಂದ ಹಣ ಸುಲಿಗೆ ಮಾಡುತ್ತಿರುವುದು ಅಭ್ಯರ್ಥಿಗಳ ಪಾಲಿಗೆ ಸಂಕಷ್ಟ ತಂದಿದೆ. ಇನ್ನಾದರೂ ಸರ್ಕಾರದ ಇತ್ತ ಗಮನಹರಿಸಬೇಕಿದೆ.

## ಅಮಾನತುಗೊಳಿಸಿದ ಕಾಂಗ್ರೆಸ್

ಎಂದು ಕಾಂಗ್ರೆಸ್ ಹೇಳಿಕೆ ತಿಳಿಸಿದೆ. ಮಹಾರಾಷ್ಟ್ರ ವಿಧಾನಸಭೆ ಚುನಾವಣೆಗೆ ಕಾಂಗ್ರೆಸ್ ತನ್ನ ಪ್ರಣಾಳಿಕೆಯನ್ನು ಭಾನುವಾರ ಬಿಡುಗಡೆ ಮಾಡಿತ್ತು.

ಸಂಘಟನೆಯ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಮತ್ತು ರಾಜ್ಯ ಕಾಂಗ್ರೆಸ್ ಸಮಿತಿ ಅಧ್ಯಕ್ಷ ನಾನಾ ಪಟೋಳೆ ಉಪಸ್ಥಿತಿಯಲ್ಲಿ ಪಕ್ಷದ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಈ ಪ್ರಣಾಳಿಕೆಯನ್ನು ಬಿಡುಗಡೆ ಮಾಡಿದರು.

ಪ್ರಣಾಳಿಕೆಯ ಪ್ರಮುಖ ಅಂಶಗಳು ಪ್ರಣಾಳಿಕೆಯ ಮುಖ್ಯಾಂಶಗಳು ಮಹಾಲಕ್ಷ್ಮಿ ಯೋಜನೆ ಅಡಿಯಲ್ಲಿ ಮಹಿಳೆಯರಿಗೆ ಪ್ರತಿ ತಿಂಗಳು 3,000 ರೂ. ಪ್ರಣಾಳಿಕೆಯು ಮಹಾರಾಷ್ಟ್ರದ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣದ ಭರವಸೆ ನೀಡುತ್ತದೆ. ಒಗಿಂ ಸರ್ಕಾರವು ಜಾತಿ ಗಣತಿಯನ್ನು ನಡೆಸುತ್ತದೆ ಮತ್ತು ಮೀಸಲಾತಿ ಮೇಲಿನ 50% ಮಿತಿಯನ್ನು ತೆಗೆದುಹಾಕುತ್ತದೆ.

ನಿರುದ್ಯೋಗಿ ಯುವಕ-ಯುವತಿಯರಿಗೆ ಮಾಸಿಕ 4,000 ಸ್ಟೈಫಂಡ್ ನೀಡುವುದಾಗಿಯೂ ಭರವಸೆ ನೀಡಲಾಗಿದೆ. 3 ಲಕ್ಷದವರೆಗಿನ ರೈತರ ಸಾಲ ಮನ್ನಾ ಮಾಡುವುದಾಗಿ ಪ್ರಣಾಳಿಕೆಯಲ್ಲಿ ಭರವಸೆ ನೀಡಲಾಗಿದೆ. ಸಕಾಲದಲ್ಲಿ ಸಾಲ ಮರುಪಾವತಿ ಮಾಡುವ ರೈತರಿಗೆ 50,000 ಪ್ರೋತ್ಸಾಹ ಧನ ಸಿಗಲಿದೆ.

ಮಹಾರಾಷ್ಟ್ರದಲ್ಲಿ ನವೆಂಬರ್ 20 ರಂದು ಒಂದೇ ಹಂತದಲ್ಲಿ ವಿಧಾನಸಭೆ ಚುನಾವಣೆ ನಡೆಯಲಿದೆ. ನವೆಂಬರ್ 23 ರಂದು ರಾಜ್ಯದ ಮತಗಳ ಎಣಿಕೆ ನಡೆಯಲಿದೆ. 2019ರ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ 105, ಶಿವಸೇನೆ 56, ಕಾಂಗ್ರೆಸ್ 44. 2014ರಲ್ಲಿ ಬಿಜೆಪಿ 122, ಶಿವಸೇನೆ 63, ಕಾಂಗ್ರೆಸ್ 42 ಸ್ಥಾನ ಗಳಿಸಿತ್ತು.

## ಪ್ರಮಾಣವಚನ

ಸೋಮವಾರ ಅಧಿಕಾರ ಸ್ವೀಕರಿಸಲಿರುವ ನ್ಯಾ.ಖನ್ನಾ 2025ರ ಮೇ.31ರವರೆಗೆ ಅಧಿಕಾರದಲ್ಲಿರಲಿದ್ದಾರೆ.

2019ರ ಜನವರಿಯಿಂದ ಸುಪ್ರೀಂ ಕೋರ್ಟ್‌ನ ನ್ಯಾಯಧೀಶರಾಗಿ ಸೇವೆ ಸಲ್ಲಿಸಿದ ನ್ಯಾ.ಖನ್ನಾ ಅವರು, ಸುಪ್ರೀಂ ಕೋರ್ಟ್‌ನ ಭಾಗವಾಗಿ ಹಲವಾರು ಪ್ರಮುಖ ತೀರ್ಪುಗಳನ್ನು ನೀಡಿದ್ದಾರೆ. ಚುನಾವಣಾ ಬಾಂಡ್‌ಗಳ ಯೋಜನೆ ರದ್ದು, ಭಾರತದ ಸಂವಿಧಾನದ 370ನೇ ವಿಧಿಯ ರದ್ದತಿಯನ್ನು ಎತ್ತಿಹಿಡಿದ ಸಂವಿಧಾನ ಪೀಠದ ಭಾಗವಾಗಿದ್ದರು.

ಇನ್ನೂ ಜುಲೈನಲ್ಲಿ ಅವರ ನೇತೃತ್ವದ ಪೀಠವು ದೆಹಲಿ ಮದ್ಯ ನೀತಿ ಪ್ರಕರಣಕ್ಕೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಆಗಿನ ದೆಹಲಿ ಮುಖ್ಯಮಂತ್ರಿಯಾಗಿದ್ದ ಎಎಪಿ ಮುಖ್ಯಸ್ಥ ಅರವಿಂದ್ ಕೇಜ್ರಿವಾಲ್ ಅವರಿಗೆ ಮಧ್ಯಂತರ ಜಾಮೀನು ನೀಡಿತ್ತು.

## ಬಂಧನ

**ಆರೋಪಿಗಳ ವಿವರ:** ಶಿವಕುಮಾರ್ ಗೌತಮ್ ಅಲಿಯಾಸ್ ಶಿವ, ಗಂದಾರಾ ಜಿಲ್ಲೆಯ ಬಹ್ರೈಚ್ ಗ್ರಾಮದ ನಿವಾಸಿ, ಅನುರಾಗ್ ಕಶ್ಯಪ್, ಬಹ್ರೈಚ್ ಜಿಲ್ಲೆಯ ಗಂದಾರಾ ಗ್ರಾಮದ ನಿವಾಸಿ, ಜ್ಞಾನ್ ಪ್ರಕಾಶ್ ತ್ರಿಪಾಠಿ, ಬಹ್ರೈಚ್ ಜಿಲ್ಲೆಯ ಗಂದಾರಾ ಗ್ರಾಮದ ನಿವಾಸಿ, ಆಕಾಶ್ ಶ್ರೀವಾಸ್ತವ, ಬಹ್ರೈಚ್ ಜಿಲ್ಲೆಯ ಗಂದಾರಾ ಗ್ರಾಮದ ನಿವಾಸಿ, ಅಖಿಲೇಂದ್ರ ಪ್ರತಾಪ್ ಸಿಂಗ್, ಬಹ್ರೈಚ್ ಜಿಲ್ಲೆಯ ಗಂದಾರಾ ಗ್ರಾಮದ ನಿವಾಸಿ.

ಎನ್‌ಸಿಪಿ ಮುಖಂಡ ಸಿದ್ದಿಕ್ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಗುರುವಾರ ಮತ್ತೆ ಇಬ್ಬರನ್ನು ಬಂಧಿಸಲಾಗಿದೆ. ಪ್ರಕರಣದಲ್ಲಿ ಇದುವರೆಗೆ 23 ಮಂದಿಯನ್ನು ಬಂಧಿಸಲಾಗಿದೆ. ಪುಣೆ ನಗರದ ಕರ್ವೆನಗರ ಪ್ರದೇಶದ ನಿವಾಸಿಗಳಾದ ಆದಿತ್ಯ ಗುಲಾಂಕರ್ (22) ಮತ್ತು ರಫೀಕ್ ನಿಯಾಜ್ ಶೇಖ್ (22) ಆರೋಪಿಗಳ ಪೈಕಿ ಒಬ್ಬ ಆರೋಪಿ ಪ್ರವೀಣ್ ಲೋಂಕರ್ ಮತ್ತು ಇನ್ನೊಬ್ಬ ಆರೋಪಿ ರೂಪೇಶ್ ಮೊಹೋಲ್ ಜೊತೆ ಸಂಪರ್ಕದಲ್ಲಿದ್ದ ಕಾರಣ ಅವರನ್ನು ಬಂಧಿಸಲಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಈಗಾಗಲೇ ಬಂಧಿತರಾಗಿರುವ ಲೋಂಕರ್ ಮತ್ತು ಮೊಹೋಲ್ ಅವರು ಗುಲಾಂಕರ್ ಮತ್ತು ಶೇಖ್‌ಗೆ ಮದ್ದುಗುಂಡುಗಳೊಂದಿಗೆ 9 ಎಂಎಂ ಪಿಸ್ತೂಲ್ ಅನ್ನು ಹಸ್ತಾಂತರಿಸಿದ್ದಾರೆ ಎಂದು ಅವರು ಹೇಳಿದರು, ಅವರನ್ನು ಅಪರಾಧದಲ್ಲಿ ಬಳಸಲಾಗುವುದು ಎಂದು ಅವರು ಹೇಳಿದರು.

ಮದ್ದುಗುಂಡುಗಳನ್ನು ಪತ್ತೆ ಹಚ್ಚುವ ಪ್ರಯತ್ನ ನಡೆಯುತ್ತಿರುವಾಗಲೇ ತನಿಖೆಯ ವೇಳೆ ಪಿಸ್ತೂಲ್ ಪತ್ತೆಯಾಗಿದೆ. ಅಕ್ಟೋಬರ್ 12 ರಂದು ಮುಂಬೈನ ಬಾಂದ್ರಾ ಪ್ರದೇಶದಲ್ಲಿ ಮೂವರು ಬಂದೂಕುಧಾರಿಗಳಿಂದ ಗುಂಡಿಕ್ಕಿ ಕೊಂದಿದ್ದ ಮಹಾರಾಷ್ಟ್ರದ ಮಾಜಿ ಸಚಿವ ಸಿದ್ದಿಕ್ ಹತ್ಯೆಯ ಹಿಂದೆ ಜೈಲಿನಲ್ಲಿರುವ ಗ್ಯಾಂಗ್‌ಸ್ಟರ್ ಲಾರೆನ್ಸ್ ಬಿಷ್ಣೋಯ್ ಅವರ ಕಿರಿಯ ಸಹೋದರ ಅನ್ಮೋಲ್ ಕೆನಡಾದಲ್ಲಿ ವಾಸಿಸುತ್ತಿದ್ದಾರೆ.

## ಅವಕಾಶ

ಆದರೂ ದಿನಕ್ಕೆ ಐದಾರು ಪ್ರಕರಣಗಳು ವರದಿಯಾಗುತ್ತಿದೆ. ನಗರದಲ್ಲಿರುವ ಭಾರೀ ಟ್ರಾಫಿಕ್ ಜಾಮ್ ಇದಕ್ಕೆ ಪ್ರಮುಖ ಕಾರಣವಾಗಿದೆ.

ಸದ್ಯ ರೋಡ್ ರೇಜ್ ಪ್ರಕರಣಗಳನ್ನು ತಡೆಯುವ ಕೆಲಸವನ್ನು ಟ್ರಾಫಿಕ್ ಪೊಲೀಸರಿಗೆ ಕೊಡುವ ಬಗ್ಗೆ ಚಿಂತನೆ ನಡೆದಿದೆ. ಲಾ ಅಂಡ್ ಆರ್ಡರ್ ಪೊಲೀಸರಿಗೆ ದೂರು ಕೊಟ್ಟರೆ ಅವರು ಎಫ್‌ಐಆರ್ ದಾಖಲಿಸಿ, ಸ್ಥಳಕ್ಕೆ ಬಂದು ಪರಿಶೀಲನೆ ನಡೆಸಬೇಕು. ಸಾಕ್ಷ್ಯಗಳು, ಸಿಸಿಟಿವಿ ದೃಶ್ಯಗಳ ಆಧಾರದ ಮೇಲೆ ತನಿಖೆ ನಡೆಸಬೇಕಿದೆ. ಇದಕ್ಕೆಲ್ಲಾ ಅಲ್ಲಿನ ಟ್ರಾಫಿಕ್ ಪೊಲೀಸರ ಸಹಾಯಬೇಕಾಗುತ್ತದೆ. ಹಾಗಾಗಿ ಭಾರತೀಯ ನ್ಯಾಯ ಸಂಹಿತೆಯ 132, 118 ಅಡಿಯಲ್ಲಿ ತನಿಖೆ ನಡೆಸಲು ಅವಕಾಶ ನೀಡುವಂತೆ ಗೃಹ ಇಲಾಖೆಗೆ ಪತ್ರ ಬರೆಯಲಾಗಿದ್ದು, ಅವಕಾಶ ಸಿಕ್ಕರೆ ಟ್ರಾಫಿಕ್ ಪೊಲೀಸರು ರೋಡ್ ರೇಜ್ ಪ್ರಕರಣಗಳ ತನಿಖೆ ನಡೆಸಲಿದ್ದಾರೆ.

## ಬಿಜೆಪಿ ಎಂದರೆ ಭಾರತೀಯ ಜೂಟಾ ಪಾರ್ಟಿ– ಸಚಿವ ಖಂಡ್ರೆ ವ್ಯಾಖ್ಯಾನ

**ಹುಬ್ಬಳ್ಳಿ :** ಕೋವಿಡ್ ಹಗರಣದ ತನಿಖೆಯ ವಿಚಾರವು ಸದ್ಯ ರಾಜ್ಯ ರಾಜಕಾರಣದಲ್ಲಿ ಸದ್ದು ಮಾಡುತ್ತಿದ್ದು ಬಿಜೆಪಿ ವಿರುದ್ಧ ಕಾಂಗ್ರೆಸ್ ನಾಯಕರು ಮುಗಿಬಿದ್ದು ಹರಿಹಾಯ್ದಿದ್ದಾರೆ. ಬಿಜೆಪಿ ಎಂದರೆ ಭಾರತೀಯ ಜನತಾ ಪಾರ್ಟಿ ಅಲ್ಲ.. ಅದು ಭಾರತೀಯ ಜೂಟಾ ಪಾರ್ಟಿ (ಸುಳ್ಳಿನ ಪಕ್ಷ) ಎಂದು ಸಚಿವ ಈಶ್ವರ್ ಖಂಡ್ರೆ ಅವರು ವ್ಯಾಖ್ಯಾನಿಸಿದ್ದಾರೆ.



ಕೋವಿಡ್ ವೇಳೆ ಈ ಹಿಂದಿನ ಬಿಜೆಪಿಯ ಆಡಳಿತದಲ್ಲಿ ಬ್ರಹ್ಮಾಂಡ ಭ್ರಷ್ಟಾಚಾರ ಆಗಿದೆ. 2,000 ಬೆಲೆಯ ಇಂಜೆಕ್ಷನ್ ಅನ್ನು ಕಾಳ ಸಂತೆಯಲ್ಲಿ 30 ಸಾವಿರಕ್ಕೆ ಮಾರಾಟವಾಗಿದೆ ಎಂದು ಸಚಿವರು ಗಂಭೀರ ಆಪಾದನೆ ಮಾಡಿದ್ದಾರೆ. ಬಿಜೆಪಿಯವರು ತಪ್ಪಿನ ಬಗ್ಗೆ ಪ್ರಶ್ನಿಸಿದರೆ ಭ್ರಷ್ಟಾಚಾರ ನಡೆದಿಲ್ಲ ಎಂದು ಅವರು ಸುಳ್ಳು ಹೇಳುತ್ತಿದ್ದಾರೆ. ಇವರ ದುಷ್ಟ ಆಡಳಿತದಿಂದ ಸಾವಿರಾರು ಜನ ಸತ್ತೇ ಹೋಗಿದ್ದಾರೆ. ಹೀಗಿರುವಾಗ ಈ ಜನರ ಶಾಪ ಬಿಜೆಪಿಗರಿಗೆ ತಟ್ಟೇ ತಟ್ಟುತ್ತದೆ ಎಂದು ಖಂಡ್ರೆ ಗುಡುಗಿದ್ದಾರೆ.

## ಸಚಿವ ಚಲುವರಾಯಸ್ವಾಮಿ ವಿರುದ್ಧ ಜೆಡಿಎಸ್ ಕಿಡಿ

**ರಾಮನಗರ:** ಹೆಚ್.ಡಿ.ಕುಮಾರಸ್ವಾಮಿ ಅವರ ಬಗ್ಗೆ ಸುಳ್ಳು ಆರೋಪಗಳನ್ನು ಮಾಡುವುದು ನಿಮಗೂ ಹಾಗೂ ಕಾಂಗ್ರೆಸ್ ಪಕ್ಷಕ್ಕೆ ಅಂಟಿರುವ ಬಾಯಿರೋಗ ಎಂದು ಸಚಿವ ಚೆಲುವರಾಯಸ್ವಾಮಿ ವಿರುದ್ಧ ಜೆಡಿಎಸ್ ತೀವ್ರವಾಗಿ ಕುಟುಕಿದೆ. ಈ ಬಗ್ಗೆ ಟ್ವೀಟ್ ಮಾಡಿ, ಮಾಕಳಿಯಲ್ಲಿ 70 ಕೋಟಿ ಮೌಲ್ಯದ ಕೆರೆ ನುಂಗಿದ ನೀನೊಬ್ಬ ಖತರ್ನಾಕ್ ಕಳ್ಳ. ಮಂಡ್ಯ ಲೋಕಸಭಾ ಚುನಾವಣೆ ವೇಳೆ ಕಾಂಟ್ರ್ಯಾಕ್ಟರ್ ಒಬ್ಬರಿಗೆ ಟಿಕೆಟ್ ಕೊಡಿಸಿ, ಎಷ್ಟು ಹಣ ಸಂಪಾದಿಸಿದ್ದೀಯಾ ಎಲ್ಲರಿಗೂ ಗೊತ್ತಿದೆ ಎಂದು ಜೆಡಿಎಸ್ ಆರೋಪಿಸಿದೆ. ನಿನ್ನ ಹಣದಾಹಕ್ಕೆ ಆ ವ್ಯಕ್ತಿಯನ್ನು ಬೀದಿಗೆ ತಂದಿದ್ದೀಯ. ಕೃಷಿ ಸಚಿವನಾಗಿ ಇಲಾಖೆಯಲ್ಲಿ ಅಕ್ರಮ ವರ್ಗಾವಣೆ ದಂಧೆ, ಕೃಷಿ ಯಂತ್ರೋಪಕರಣಗಳ ಖರೀದಿಯಲ್ಲಿ ಅಕ್ರಮ, ರೈತರಿಗೆ ಪರಿಹಾರ ಹಣ ಕೊಡದೆ ವಂಚಿಸುತ್ತಿರುವ ವಂಚಕ ಮಂತ್ರಿ ನೀನು ಎಂದು ಟೀಕಿಸಿದೆ. ಕುಮಾರಸ್ವಾಮಿ ಚುನಾವಣೆಯ ಕೊನೆಯಲ್ಲಿ ಬರುವುದನ್ನು ಕಲಿತಿದ್ದಾರೆ. ಚುನಾವಣೆಗೆ ಹಣ, ಆಮಿಷ, ಕಣ್ಣೀರು ಕೆಲಸ ಮಾಡಲ್ಲ. ಅಭಿವೃದ್ಧಿ ಮಾಡಿದ್ದರೆ ಜನರೇ ಕೈಹಿಡಿಯುತ್ತಾರೆ.ಕುಮಾರಸ್ವಾಮಿ ರಾಮನಗರ, ಚನ್ನಪಟ್ಟಣದಲ್ಲಿಗೆದ್ದೂ ಅಭಿವೃದ್ಧಿ ಮಾಡಿಲ್ಲ ಎಂದು ಚಲುವರಾಯಸ್ವಾಮಿ ಹೇಳಿಕೆ ವಿರುದ್ಧ ವಾಗ್ದಾಳಿ ನಡೆಸಿದ್ದರು.



## ಕೆ.ಜಿ.ಹಳ್ಳಿ ಮತಗಟ್ಟೆಗಳಿಗೆ ಟೇಕಲ್ ನಾಡಕಛೇರಿ ಉಪತಹಸೀಲ್ದಾರ್ ಮಮತಾದೇವಿ ಭೇಟಿ

**ಟೇಕಲ್:** ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ, ತಿದ್ದುಪಡಿ, ಬದಲಾವಣೆ ಮಾಡ ಬಯಸಿದ್ದಲ್ಲಿ ವೋಟರ್ ಹೆಲ್ಪ್‌ಲೈನ್‌ಗೆ ಅಥವಾ ಆನ್‌ಲೈನ್ ಮೂಲಕ ಇಲ್ಲವೆ ಸಂಬಂಧಿಸಿದ ಬೂತ್ ಮಟ್ಟದ ಅಧಿಕಾರಿ ಅಥವಾ ಮತದಾರರ ನೋಂದಾವಣಿಧಿಕಾರಿ ಕಛೇರಿಗೆ ಬೇಟಿ ನೀಡಿ ಎಂದು ಟೇಕಲ್ ನಾಡಕಛೇರಿಯ ಉಪತಹಶೀಲ್ದಾರ್ ಮಮತಾದೇವಿ ತಿಳಿಸಿದರು. ಅವರು ಟೇಕಲ್‌ನ ಕೆ.ಜಿ.ಹಳ್ಳಿಯ ಮತಗಟ್ಟೆ 105 ಮತ್ತು 106 ಬೇಟಿ ನೀಡಿ ಮತದಾರರ ಪಟ್ಟಿಯ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ 2025 ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡುತ್ತಿದ್ದರು. ಎಲ್ಲಾ ಮತಗಟ್ಟೆ ಕೇಂದ್ರಗಳಲ್ಲಿ ನವೆಂಬರ್ 9, 10, 23, 24 ರ ಬೆಳಿಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆವರೆಗೆ ನೋಂದಣಿಯ ಅಭಿಯಾನ ನಡೆಯಲಿದ್ದು ಭಾವಹಿಸಿ ಎಂದರು. ಇದೇ ವೇಳೆ ಕೇಲವರು ಅರ್ಜಿಗಳನ್ನು ನೀಡಿದರು. ಈ ಸಂದರ್ಭದಲ್ಲಿ ಗ್ರಾಮಲೆಕ್ಕಿಗರಾದ ರಘುವೀರ್, ಮತಗಟ್ಟೆ ಅಧಿಕಾರಿಗಳಾದ ಕೆ.ಎನ್.ಮಂಜುನಾಥ, ಶಶಿಧರ ಉಪಸ್ಥಿತರಿದ್ದರು.





**ಬಿರುಸಿನ ಪ್ರಚಾರ**

ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದಲ್ಲಿ ನಡೆಯಲಿರುವ ಉಪಚುನಾವಣೆಯಲ್ಲಿ ಎನ್ ಡಿ ಎ ಅಭ್ಯರ್ಥಿಯಾಗಿ ಸ್ಪರ್ಧಿಸಿರುವ ನಿಖಿಲ್ ಕುಮಾರಸ್ವಾಮಿಯವರ ಪರವಾಗಿ ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ ಗೋಪಾಲಯ್ಯ ಅವರು ಚನ್ನಪಟ್ಟಣದಲ್ಲಿ ಬಿರುಸಿನ ಪ್ರಚಾರ ನಡೆಸಿದರು ಜೆಡಿಎಸ್ ಬಿಜೆಪಿ ಕಾರ್ಯಕರ್ತರು ಪ್ರಚಾರದಲ್ಲಿ ಪಾಲ್ಗೊಂಡಿದ್ದರು.

## ವಾಲಿಬಾಲ್ ಪಂದ್ಯಾವಳಿಗೆ ಚಾಲನೆ

**ಬೆಂಗಳೂರು:** ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದ ನಂದಿನಿ ಬಡಾವಣೆಯಲ್ಲಿರುವ ವೀರರಾಣಿ ಕಿತ್ತೂರು ಚೆನ್ನಮ್ಮ ಆಟದ ಮೈದಾನದಲ್ಲಿ ಕನ್ನಡ ರಾಜ್ಯೋತ್ಸವದ ಅಂಗವಾಗಿ ನಂದಿನಿ ವಾಲಿಬಾಲ್ ಅಸೋಸಿಯೇಷನ್ ವತಿಯಿಂದ ಆಯೋಜಿಸಿದ್ದ ವಾಲಿಬಾಲ್ ಪಂದ್ಯಾವಳಿಯನ್ನು ಮಾಜಿ ಸಚಿವರು ಹಾಗೂ ಸ್ಥಳೀಯ ಶಾಸಕರಾದ ಕೆ ಗೋಪಾಲಯ್ಯ ಚೆಂಡು ಎಸೆಯುವ ಮೂಲಕ ಉದ್ಘಾಟಿಸಿದರು.

ನಂತರ ಕ್ರೀಡಾಪಟುಗಳಿಗೆ ಶುಭ ಕೋರಿ ಮಾತನಾಡಿದ ಶಾಸಕರು ಸುಮಾರು 12 ಕ್ಕೂ ಹೆಚ್ಚು ತಂಡಗಳು ಭಾಗವಹಿಸಿ ಒಂದು ದಿನದ ಪಂದ್ಯಾವಳಿಯನ್ನು ನಡೆಸುತ್ತಿದ್ದೀರಾ ಇದು ನಮ್ಮ ಕ್ಷೇತ್ರದ ಎಲ್ಲಾ ವಾರ್ಡ್ ಗಳಲ್ಲಿಯೂ ನಡೆಯಬೇಕು ವಾರ್ಡ್ಗಳಲ್ಲಿ ಎಲ್ಲೆಲ್ಲಿ ಕ್ರೀಡಾಂಗಣಗಳಿಗೆ ಅಲ್ಲಿ ಪಂದ್ಯಾವಳಿಗಳನ್ನು ಆಯೋಜಿಸಿಕೊಳ್ಳಿ ಎಂದು ಕರೆ ನೀಡಿದರು.



ಶಾಲಾ ಮಕ್ಕಳು ಹಿರಿಯರು ಹಾಗೂ ವಿಶೇಷವಾಗಿ ಶಾಲೆಗಳಿಗೆ ಮಹಿಳೆಯರು ಬರುತ್ತಾರೆ ಅವರಿಗಳಿಗೂ ತರಬೇತಿ ನೀಡುವಂತಹ ಕೆಲಸವಾಗಬೇಕು ಪಂದ್ಯಗಳಲ್ಲಿ ಎಲ್ಲರೂ ಗೆಲ್ಲಲು ಸಾಧ್ಯವಾಗುವುದಿಲ್ಲ ಸೋಲು ಗೆಲುವು ಇದ್ದೇ ಇರುತ್ತದೆ ನಿಮ್ಮೆಲ್ಲರಿಗೂ ಶುಭವಾಗಲಿ ನಮ್ಮ ಕ್ಷೇತ್ರದಲ್ಲಿ ಇನ್ನು ಹೆಚ್ಚು ಹೆಚ್ಚು ಕ್ರೀಡೆಗಳು ನಡೆಯಲಿ ಎಂದು ಆಶಿಸುತ್ತೇನೆ ಎಂದರು. ಮಾಜಿ ಪಾಲಿಕೆ ಸದಸ್ಯ ರಾಜೇಂದ್ರ ಕುಮಾರ್ ಬಿಜೆಪಿ ಮುಖಂಡರುಗಳಾದ ವೆಂಕಟೇಶ್ ಮೂರ್ತಿ ಶಿವಾನಂದ್ ಮೂರ್ತಿ ಉಪಸ್ಥಿತರಿದ್ದರು.

### ಡ್ರಗ್ಸ್‌ಗೆ ದಾಸನಾದ ಮಗ

## ಕೊಲ್ಲಲು ಅನುಮತಿ ಕೇಳಿದ ತಾಯಿ!

**ತುರುವೇಕೆರೆ:** ಮಾದಕ ವಸ್ತುಗಳಿಗೆ ಮಗ ವ್ಯಸನಿಯಾದ ಹಿನ್ನೆಲೆಯಲ್ಲಿ ಬೇಸತ್ತ ತಾಯಿಯೊಬ್ಬರು, ದಯಮಾಡಿ ಪುತ್ರನನ್ನು ಜೈಲಿಗೆ ಹಾಕಿ, ಇಲ್ಲವೇ ಅವನನ್ನು ಸಾಯಿಸಲು ನನಗೆ ಅನುಮತಿ ಕೊಡಿ ಎಂದು ಪೊಲೀಸರನ್ನು ಬೇಡಿಕೊಂಡಿರುವುದು ತುಮಕೂರು ಜಿಲ್ಲೆಯ ತುರುವೇಕರೆಯಲ್ಲಿ ನಡೆದಿದೆ.



ತುರುವೇಕೆರೆಯಲ್ಲಿ ಸಣ್ಣ ಹೋಟೆಲ್ ಇಟ್ಟುಕೊಂಡಿರುವ ರೇಣುಕಮ್ಮ ಎಂಬುವವರ ಪುತ್ರ ಅಭಿ (20) ಮಾದಕ ವಸ್ತುಗಳ ವ್ಯಸನಿಯಾಗಿದ್ದಾನೆ. ಹೀಗಾಗಿ ಬೇಸತ್ತ ತಾಯಿ, ಮಗನನ್ನು ಬಂಧಿಸಲು ಕೋರಿದ್ದಾರೆ. ಇಲ್ಲದಿದ್ದರೆ ಅವನನ್ನು ಕೊಲ್ಲಲು ನನಗೆ ಅನುಮತಿ ನೀಡಿ ಎಂದು ಪೊಲೀಸರಿಗೆ ಮನವಿ ಮಾಡಿದ್ದಾರೆ.

ಸಾರ್ ನನ್ನ ಮಗ ಸರಿಯಿಲ್ಲ, ಗಾಂಜಾ ಹೊಡೀತಾನೆ, ಡ್ರಗ್ಸ್ ತಗೋತಾನೆ, ಸಿಕ್ಕ ಸಿಕ್ಕವರ ಮೇಲೆ ಗಲಾಟೆಗೆ ಹೋಗುತ್ತಾನೆ. ಹೆಣ್ಣು ಮಕ್ಕಳ ಬಗ್ಗೆ ಲಘುವಾಗಿ ಮಾತನಾಡುತ್ತಾನೆ, ಕೀಟಲೆ ಮಾಡ್ತಾನೆ, ಜನರ ಕೈಲಿ ಒದೆ ತಿಂತಾನೆ. ಅದನ್ನು ನಾನು ನೋಡಕ್ಕೆ ಆಗಲ್ಲ. ಜನರು ಇವನ ಕೈ ಕಾಲು ಮುರಿದು ಹಾಕ್ತಾರೆ, ನಮ್ಮ ಮನೆ ಮುಂದೆ ಬಂದು ಗಲಾಟೆ ಮಾಡುತ್ತಾರೆ. ಹೀಗಾಗಿ ದಯಮಾಡಿ ನನ್ನ ಮಗನ್ನ ಜೈಲಿಗೆ ಹಾಕಿ. ಇಲ್ಲವೆಂದರೆ ನನಗೆ ಅವನನ್ನು ಸಾಯಿಸಲು ಪರ್ಮಿಷನ್ ಕೊಡಿ ಎಂದು ತಾಯಿ ಅಳಲು ತೋಡಿಕೊಂಡಿದ್ದಾರೆ.

ಪಟ್ಟಣದಲ್ಲಿ ಗಾಂಜಾ ಸೇರಿದಂತೆ ಹಲವಾರು ಮಾದಕ ವಸ್ತುಗಳು ಮಾರಾಟವಾಗುತ್ತಿವೆ. ಇದು ಯುವಕರನ್ನು ಹಾಳು ಮಾಡುತ್ತಿದೆ. ನನ್ನ ಮಗನೂ ಇಂತಹ ಜಾಲಕ್ಕೆ ಬಿದ್ದು ತನ್ನ ಜೀವನವನ್ನು ಹಾಳು ಮಾಡಿಕೊಂಡಿದ್ದಾನೆ. ಹೀಗೇ ಪಟ್ಟಣದಲ್ಲಿ ಸಾಕಷ್ಟು ಯುವಕರಿದ್ದಾರೆ. ಇವರಿಗೆ ಮಾದಕ ವಸ್ತುಗಳನ್ನು ಸಪ್ಪೆ ಮಾಡುತ್ತಿರುವವರು ಯಾರು ಎಂಬುದನ್ನು ದಯಮಾಡಿ ಪತ್ತೆ ಹಚ್ಚಿ ಅಮಾಯಕರನ್ನು ಕಾಪಾಡಿ ಎಂದು ಪೊಲೀಸರಿಗೆ ಮನವಿ ಮಾಡಿದ್ದಾರೆ.

## ನಿರ್ವಹಣೆ ಇಲ್ಲದ ಕೆರೆಯಲ್ಲಿ ತುಕ್ಕು ಹಿಡಿದ ದೋಣಿಗಳು!



**ಯಾದಗಿರಿ :** ಸರ್ಕಾರದ ಗ್ಯಾರಂಟಿ ಯೋಜನೆಗಳಿಂದ ಅಭಿವೃದ್ಧಿ ಕಾರ್ಯದ ಮೇಲೆ ಪರಿಣಾಮ ಬೀರಿತ್ತು. ಆದರೆ ಇದೀಗ ಗ್ಯಾರಂಟಿ ಯೋಜನೆಯಿಂದಾಗಿ ಲುಂಬಿನಿ ಗಾರ್ಡನ್ ಅಭಿವೃದ್ಧಿ ಕಾಣದೇ ನಲುಗಿ ಹೋಗಿದೆ. ಯಾದಗಿರಿ ನಗರದ ಹೃದಯ ಭಾಗದಲ್ಲಿ ಸುಮಾರು 55 ಎಕರೆಯಲ್ಲಿ ಕೋಟ್ಯಂತರ ರೂಪಾಯಿ ಖರ್ಚು ಮಾಡಿ ಪ್ರವಾಸೋದ್ಯಮ ಇಲಾಖೆಯಿಂದ ಗಾರ್ಡನ್ ನಿರ್ಮಾಣ ಮಾಡಲಾಗಿದೆ. ಆದರೆ ಬೋಟ್‌ಗಳು ಮಾತ್ರ ಕೆರೆಯಲ್ಲಿ ಸಂಚಾರ ಮಾಡದೆ ನಿಂತಲ್ಲೆ ನಿಂತು ಸಂಪೂರ್ಣವಾಗಿ ತುಕ್ಕು ಹಿಡಿದಿದ್ದು, ಸರಿಯಾದ ನಿರ್ವಹಣೆ ಇಲ್ಲದೆ ಕಾಡು ಬೆಳೆದಿದೆ, ಇದರಿಂದ ಪ್ರವಾಸಿಗರಲ್ಲಿ ನಿರಾಶೆ, ಮೂಡಿಸಿದೆ. ಸದ್ಯ ಸ್ಥಳೀಯರು ಸೇರಿದಂತೆ ಪ್ರವಾಸಿಗರು ಇದಕ್ಕೆಲ್ಲ ಪ್ರವಾಸೋದ್ಯಮ ಇಲಾಖೆ ಅಧಿಕಾರಿಗಳ ಬೇಜವ್ದಾರಿತನವೇ ಕಾರಣ ಎಂದು ಸಾರ್ವಜನಿಕರು ಆಕ್ರೋಶ ಹೊರಹಾಕಿದ್ದು, ಆದಷ್ಟು ಬೇಗ ಪುನಃನಿರ್ಮಾಣ ಮಾಡುವಂತೆ ಆಗ್ರಹಿಸಿದ್ದಾರೆ.

## ಹಿಂದೂಗಳೂ, ಮಹಿಳೆಯರೇ ನಿಜವಾದ ಬಲಿಪಶುಗಳು

**ಉಡುಪಿ:** ಈ ದೇಶದಲ್ಲಿ ನಡೆಯುತ್ತಿರುವ ಬಲಪಂಥೀಯ ರಾಜಕೀಯದಿಂದ ಕಳೆದ 50 ವರ್ಷಗಳಿಂದ ಗೌರವ, ಹಕ್ಕುಗಳನ್ನು ಪಡೆದುಕೊಂಡ ಶೇ.80ರಷ್ಟಿರುವ ಹಿಂದುಗಳು ಹಾಗೂ ಶೇ . 50 ಇರುವ ಮಹಿಳೆಯರೇ ನಿಜವಾದ ಬಲಿಪಶುಗಳು. ಅದಕ್ಕಾಗಿ ಅವರು ಸಂವಿಧಾನವನ್ನು ನಾಶ ಮಾಡಲು ಹುನ್ನಾರ ನಡೆಸುತ್ತಿದ್ದಾರೆ.

ಬಲಪಂಥೀಯ ರಾಜಕೀಯದಿಂದ ಕೇವಲ ಮುಸ್ಲಿಮರಿಗೆ ಮಾತ್ರ ಅಪಾಯ ಅಲ್ಲ. ಹಿಂದುಗಳಿಗೂ, ಮಹಿಳೆಯರಿಗೂ ಅಪಾಯ ಇದೆ ಎಂದು ಮಾಜಿ ಐಎಎಸ್ ಅಧಿಕಾರಿ ಹಾಗೂ ತಿರುವಳ್ಳೂರು ಸಂಸದ ಸಸಿಕಾಂತ್ ಸೆಂಥಿಲ್ ಹೇಳಿದ್ದಾರೆ. ಉಡುಪಿ ಜಿಲ್ಲಾ ಮುಸ್ಲಿಮ್ ಒಕ್ಕೂಟದ ವತಿಯಿಂದ ಉಡುಪಿಯ ಬಾಸೆಲ್ ಮಿಷನ್ ಮೆಮೋರಿಯಲ್ ಆಡಿಟೋರಿಯಂನಲ್ಲಿ ರವಿವಾರ ಆಯೋಜಿಸಲಾದ ವಿವಿಧ ಸಮುದಾಯಗಳ ಸ್ನೇಹ ಸಮಾವೇಶ ಮತ್ತು ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾನವ ರತ್ನ ಪ್ರಶಸ್ತಿ ಸ್ವೀಕರಿಸಿ ಅವರು ಮಾತನಾಡುತ್ತಿದ್ದರು.

ಸಮಾನತೆ ಒಪ್ಪದ ಶೇ.20ರಷ್ಟು ಜನರ ಗುಂಪು ನಮ್ಮ ದೇಶದಲ್ಲಿದೆ. ಅದೇ ರೀತಿ ಈ ದೇಶದಲ್ಲಿ ಸಂವಿಧಾನ ಬಂದ ನಂತರ ಶೇ.80 ಹಿಂದುಗಳಿಗೆ ಗೌರವಯುತ ಜೀವನ ಹಾಗೂ ಶಿಕ್ಷಣ ದೊರೆತಿದೆ. ಹೀಗಾಗಿ ಇದೀಗ ನಮ್ಮ 80–20 ರಾಜಕೀಯ ನಡೆಯುತ್ತಿದೆ. ಈ ರಾಜಕೀಯದಿಂದ ಅಧಿಕಾರಕ್ಕೆ ಬರುವುದು ಮತ್ತು ಅಧಿಕಾರಕ್ಕೆ ಬಂದ ನಂತರ ಶೇ.80ರಷ್ಟಿರುವ ಹಿಂದುಗಳಿಗೆ ತುಳಿಯುವುದಾಗಿದೆ ಎಂದರು.

80–20 ಬಲಪಂಥೀಯ ರಾಜಕೀಯವು ದ್ವೇಷದ ರಾಜಕೀಯ ಅಲ್ಲ, ಬದಲು ಭಯದ ರಾಜಕೀಯ ನಡೆಸುತ್ತಿದೆ. ಜನರನ್ನು ಭಯ ಪಡಿಸಿ ಮತ ಪಡೆದು ಅಧಿಕಾರಕ್ಕೇರುವುದೇ ಅದರ ಉದ್ದೇಶವಾಗಿದೆ. ಇದೇ ಭಯದಿಂದ ಅಭದ್ರತೆ ಮೂಡಿ ಸಮಾಜದಲ್ಲಿ ಸಂಘರ್ಷ ಉಂಟಾಗುತ್ತದೆ. ಈ ಸಂಘರ್ಷ ಇಡೀ ಸಮಾಜಕ್ಕೆ ಅಪಾಯಕಾರಿಯಾಗಿ ಪರಿಣಮಿಸಲಿದೆ. ಆದುದರಿಂದ ಇದನ್ನು ತಪ್ಪಿಸುವ ಜವಾಬ್ದಾರಿ ಎಲ್ಲರ ಮೇಲಿದೆ. ಅದರಲ್ಲೂ ಬಹುಸಂಖ್ಯಾತರಿಗೆ ಇದೆ. ಸಂವಿಧಾನದ ಮೂಲಕ ಈ ಭಯದ ರಾಜಕೀಯವನ್ನು ವಿರೋಧಿಸಬೇಕು. ಇಲ್ಲದಿದ್ದರೆ ನಿಮ್ಮ ಮನೆಗೆ ನೀವೇ ಬೆಂಕಿ ಇಟ್ಟ ಹಾಗೆ ಆಗುತ್ತದೆ. ಬಲಪಂಥೀಯ ರಾಜಕೀಯ ಬೆಳೆಯುಲು ಬಹುಸಂಖ್ಯಾತ ಸಮುದಾಯದ ಮೌನವೇ ಮುಖ್ಯ ಕಾರಣ ಎಂದು ಅವರು ತಿಳಿಸಿದರು.



## ಡಿಕೆಶಿ ಹೇಳಿಕೆ ಮಾನವ–ವನ್ಯಜೀವಿ ಸಂಘರ್ಷಕ್ಕೆ ಎಡೆ– ಯದುವೀರ್

**ಮೈಸೂರು :** ಬಂಡಿಪುರ ಅಭಯಾರಣ್ಯದ ಮಧ್ಯೆ ಹಾದು ಹೋಗುವ ಓಊ 766 ರ ರಾತ್ರಿ ಪ್ರಯಾಣ ನಿಷೇಧ ತೆಗೆದುಹಾಕುವುದಾಗಿ ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿದ್ದು ಖಂಡನೀಯ ಎಂದು ಮೈಸೂರು ಸಂಸದ ಯದುವೀರ್ ವಡೇಯರ್ ಆಕ್ಷೇಪ ವ್ಯಕ್ತಪಡಿಸಿದ್ದಾರೆ.





ಈ ಕುರಿತು ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿರುವ ಅವರು, ಕೇರಳದ ವಯನಾಡ್ ಉಪಚುನಾವಣೆಯಲ್ಲಿ ರಾಜಕೀಯ ಲಾಭಕ್ಕಾಗಿ ನಮ್ಮ ರಾಜ್ಯದ ನೈಸರ್ಗಿಕ ಸಂಪತ್ತಾದ ಬಂಡಿಪುರ ಅಭಯಾರಣ್ಯದ ಮಧ್ಯೆ ರಾತ್ರಿ ಪ್ರಯಾಣ ನಿಷೇಧವನ್ನು ತೆಗೆದುಹಾಕುವೆ ಎಂಬ ಡಿಕೆಶಿ ಅವರ ಹೇಳಿಕೆ ಬೇಜವಾಬ್ದಾರಿಯಿಂದ ಕೂಡಿದೆ.

ಬಂಡೀಪುರದ ನೈಸರ್ಗಿಕ ಸೌಂದರ್ಯ ಮತ್ತು ಪರಿಸರ ವೈವಿಧ್ಯತೆಯು ಅದರೊಳಗೆ ಅಭಿವೃದ್ಧಿ ಹೊಂದುತ್ತಿರುವ ವಿವಿಧ ಪ್ರಭೇದಗಳ ವನ್ಯಜೀವಿಗಳಿಗೆ ಸೇರಿದ ಸಂಪತ್ತು.

ಹೀಗಾಗಿ ಈ ಅಭಯಾರಣ್ಯದ ಮೂಲಕ ರಾತ್ರಿ ಪ್ರಯಾಣಕ್ಕೆ ಅವಕಾಶ ನೀಡುವುದರಿಂದ ವನ್ಯಜೀವಿಗಳಿಗೆ ಅಪಾಯವಿದೆ ಮತ್ತು ಮಾನವ–ವನ್ಯಜೀವಿ ಸಂಘರ್ಷಕ್ಕೆ ಇದು ಎಡೆ ಮಾಡಿಕೊಡುತ್ತದೆ. ಬೇರೆ ರಾಜ್ಯದಲ್ಲಿನ ಚುನಾವಣಾ ಲಾಭಕ್ಕಾಗಿ ಕರ್ನಾಟಕದ ವನ್ಯಜೀವಿಗಳಿಗೆ ಧಕ್ಕೆ ತರುವುದು ಸಮಂಜಸವಲ್ಲ ಎಂದು ಕಿಡಿಕಾರಿದ್ದಾರೆ.

## ಸಚಿವ ಜಮೀರ್ ಅಹ್ಮದ್ ವಿರುದ್ಧ ಸೂಕ್ತ ಕ್ರಮ

**ಬೆಂಗಳೂರು:** ಮುಡಾ ಹಗರಣ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಪ್ರಾಸಿಕ್ಯೂಷನ್ ಗೆ ಅನುಮತಿಯನ್ನು ರಾಜ್ಯಪಾಲರು ನೀಡಿದ್ದರು. ಮುಡಾ ಕುರಿತಂತೆ ಸಚಿವ ಜಮೀರ್ ಅಹ್ಮದ್ ಖಾನ್ ಆಕ್ಷೇಪಾರ್ಹ ಹೇಳಿಕೆಯನ್ನು ನೀಡಿದ್ದರು. ಈ ಹೇಳಿಕೆ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಸೂಚಿಸಿದ್ದಾರೆ. ಈ ಮೂಲಕ ಸಚಿವ ಜಮೀರ್ ಅಹ್ಮದ್ ಗೆ ಬಿಗ್ ಶಾಕ್ ನೀಡಲಾಗಿದೆ.



ಸಚಿವ ಜಮೀರ್ ಅಹ್ಮದ್ ಅವರು ಆಕ್ಷೇಪಾರ್ಹ ಹೇಳಿಕೆಯನ್ನು ನೀಡಿದ್ದಾರೆ. ಅವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಟಿ.ಜೆ ಅಬ್ರಾಹಂ ಅವರು ರಾಜ್ಯಪಾಲರಿಗೆ ದೂರು ನೀಡಿದ್ದರು. ಮುಡಾ ಹಗರಣ ಸಂಬಂಧ ನ್ಯಾಯಾಲಯದ ಆದೇಶವನ್ನು ಪ್ರಶ್ನಿಸಿದ್ದು ಆಕ್ಷೇಪಾರ್ಹವಾಗಿದೆ ಎಂಬುದಾಗಿ ತಿಳಿಸಿದ್ದರು. ಈ ದೂರಿನ ಹಿನ್ನಲೆಯಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು,ರಾಜ್ಯ ಸರ್ಕಾರದ ಅಡ್ವೋಕೇಟ್ ಜನರಲ್ ಅವರಿಗೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಲು ಸೂಚಿಸಿದ್ದಾರೆ. ಹೀಗಾಗಿ ಸಚಿವ ಜಮೀರ್ ಅಹ್ಮದ್ ಗೆ ಸಂಕಷ್ಟ ಎದುರಾದಂತೆ ಆಗಿದೆ.

## ಸಿಎಂಗೆ ಪತ್ರ ಬರೆದ ಮುಸ್ಲಿಂ ವಿದ್ಯಾರ್ಥಿಗಳು

**ಹಾಸನ:** ಹೊಳೇ ನರಸೀಪುರದ ನರ್ಸಿಂಗ್ ಕಾಲೇಜಿನಲ್ಲಿ ಗಡ್ಡ ಬೋಳಿಸುವಂತೆ ವಿದ್ಯಾರ್ಥಿಗಳಿಗೆ ಉಪನ್ಯಾಸಕರು ತಾಕೀತು ಮಾಡಿದ್ದು, ಇದಕ್ಕೆ ಒಪ್ಪದ ಮುಸ್ಲಿಂ ವಿದ್ಯಾರ್ಥಿಗಳು ಸಿಎಂ ಸಿದ್ದರಾಂಯ್ಯಗೆ ಪತ್ರ ಬರೆದಿದ್ದಾರೆ.



ಗಡ್ಡ ತೆಗೆಯುವಂತೆ ಆಡಳಿತ ಮಂಡಳಿ ತಮಗೆ ಸೂಚನೆ ನೀಡಿದೆ ಎಂದು ಜಮ್ಮುಕಾಶ್ಮೀರದ 13ಕ್ಕೂ ಹೆಚ್ಚು ಮುಸ್ಲಿಂ ವಿದ್ಯಾರ್ಥಿಗಳು ಟ್ವೀಟ್ ಮೂಲಕ ಹೊಳೆನರಸೀಪುರ ಸರ್ಕಾರಿ ನರ್ಸಿಂಗ್ ಕಾಲೇಜಿನ ವಿರುದ್ಧ ಅಸಮಾಧಾನ ಹೊರ ಹಾಕಿದ್ದಾರೆ.

ಪಿಎಂಎಸ್‌ಎಸ್ ಯೋಜನೆಯಡಿ ನರ್ಸಿಂಗ್ ಓದಲು ಜಮ್ಮು–ಕಾಶ್ಮೀರದಿಂದ 13ಕ್ಕೂ ಹೆಚ್ಚು ಮುಸ್ಲಿಂ ಯುವಕರು ಹೊಳೆನರಸೀಪುರಕ್ಕೆ ಬಂದಿದ್ದಾರೆ. ವಿದ್ಯಾರ್ಥಿಗಳು ಹೊಳೆನರಸೀಪುರ ಸರ್ಕಾರಿ ನರ್ಸಿಂಗ್ ಕಾಲೇಜಿನಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದಾರೆ. ಈ ವಿದ್ಯಾರ್ಥಿಗಳಿಗೆ ಪ್ರಾಂಶುಪಾಲರು ಗಡ್ಡ ತೆಗೆದು ಕಾಲೇಜು ಚಟುವಟಿಕೆಗಳಲ್ಲಿ ಭಾಗವಹಿಸುವಂತೆ ಮೌಖಿಕವಾಗಿ ಸೂಚನೆ ನೀಡಿದ್ದಾರೆ ಎಂದು ವಿದ್ಯಾರ್ಥಿಗಳು ಆರೋಪ ಮಾಡಿದ್ದಾರೆ.




ವಿದ್ಯಾರ್ಥಿಗಳು ಗಡ್ಡ ತೆಗೆಯಲು ನಿರಾಕರಿಸಿದ್ದು, ನಮ್ಮ ಸಂಪ್ರದಾಯದಂತೆ ಗಡ್ಡ ಬಿಡುವುದು ನಮ್ಮ ಹಕ್ಕು. ಗಡ್ಡ ತೆಗೆಯುವಂತೆ ಸೂಚನೆ ನೀಡಿದ್ದು, ನಮ್ಮ ವಿದ್ಯಾಭ್ಯಾಸದ ಮೇಲೆ ಪರಿಣಾಮ ಬೀರುತ್ತಿದೆ. ಕೂಡಲೇ ಮಧ್ಯಪ್ರವೇಶಿಸಿ ಸಮಮಸ್ಯೆ ಬಗೆಹರಿಸುವಂತೆ ವಿದ್ಯಾರ್ಥಿಗಳು ಟ್ವಿಟರ್ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ, ಜಮ್ಮು–ಕಾಶ್ಮೀರ ಮುಖ್ಯಮಂತ್ರಿ ಹಾಗೂ ಅಲ್ಲಿನ ಪ್ರಮುಖ ನಾಯಕರಿಗೆ ಮನವಿ ಮಾಡಿದ್ದಾರೆ.

## ಯಲುವಗುಳಿಯಲ್ಲಿ ಅಪರೂಪದ ಚಿಟ್ಟೆ ಒತ್ತೆ

**ಟೇಕಲ್:** ಚಿಟ್ಟೆಗಳು ತನ್ನ ಬಣ್ಣಗಳಿಂದಲೇ ಹೆಸರು ವಾಸಿಯಾಗಿವೆ ನಮ್ಮ ಊಹೆಗೂ ನಿಲುಕದಷ್ಟು ಬಣ್ಣಗಳು ಚಿಟ್ಟೆಯ ಮೈಮೇಲಿವೆ ಅದರಂತೆಯೆ ಟೇಕಲ್‌ನ ಯಲುವಗುಳಿಯ ಗ್ರಾಮದ ಕೀರ್ತಿ ಎಂಬುವರ ಮನೆಯಲ್ಲಿ ಶನಿವಾರ ಮುಂಜಾನೆ ಕೇಸರಿಯುಕ್ತ ಬಣ್ಣದ ಚಿಟ್ಟೆಯೊಂದು ಅತಿಥಿಯಾಗಿ ಬಂದಿತ್ತು. ಮನೆಯಂಗಳಕ್ಕೆ ಇದ್ದಕ್ಕಿದ್ದಂತೆ ಕಂಡ ಚಿಟ್ಟೆಯು ಬಹಳ ಸುಂದರವಾಗಿತ್ತು ಅದನ್ನು ಕಂಡು ಕೀರ್ತಿ ಕುಟುಂಬಸ್ಥರು ಅದನ್ನು ಕೈಯಲ್ಲಿ ಹಿಡಿದು ಅದರ ಅಂದವನ್ನು ನೋಡಿದರು. ಇದೊಂದು ಅಪರೂಪದ ಚಿಟ್ಟೆಯಾಗಿದ್ದು ಶನಿವಾರ ಮಂಜು ಮುಸುಕಿದ ವಾತಾವರಣದಲ್ಲಿ ತಂಗಾಳಿ ತಂಪಿಗೆ ಅಪರೂಪದ ಚಿಟ್ಟೆ ಬಂದಿದ್ದು ಅದನ್ನು ಅವರ ಮೊಬೈಲ್ ಕ್ಯಾಮೆರಾದಲ್ಲಿ ಕ್ಲಿಕ್ಕಿಸಿದರು. ಚಿಟ್ಟೆಯ ಎರಡು ಕಡೆ ರೆಕ್ಕೆಯಲ್ಲಿ ಕೇಸರಿಯುಕ್ತ ಬಿಳಿ ಕಲೆಯಿತ್ತು. ಎರಡು ಕಡೆ ಹಾವಿನ ಆಕಾರವಿದ್ದು ನೋಡಲು ಸುಂದರವಾಗಿತ್ತು. ಸ್ವಲ್ಪ ಸಮಯ ಅವರ ಮನೆಯಲ್ಲಿ ಹಾರಾಡಿದ ಚಿಟ್ಟೆಯು ನಂತರ ಹೊರಕ್ಕೆ ಹೋಯಿತು.



## ಟೇಕಲ್ ಸರ್ಕಲ್‌ನಲ್ಲಿ ರಾಜ್ಯೋತ್ಸವ



**ಟೇಕಲ್:** ಇಂದು ರಾಜ್ಯದಲ್ಲಿ ಕನ್ನಡ ಉಳಿಯಬೇಕಾದರೆ ಅದನ್ನು ಕಟ್ಟಿ ಪೋಷಿಸಿ ಬೆಳೆಸುತ್ತಿರುವವರು ಆಟೋ ಚಾಲಕರು ಅವರು ಪ್ರತಿದಿನ ದುಡಿಮೆಯನ್ನು ನಂಬಿ ತಾಯಿ ಭುವನೇಶ್ವರಿಯನ್ನು ಆರಾಧಿಸುತ್ತಾ ಕನ್ನಡವನ್ನು ಪ್ರೋತ್ಸಾಹಿಸುತ್ತಿದ್ದಾರೆ ಎಂದು ಯುವ ಕಾಂಗ್ರೆಸ್ ಮುಖಂಡ ಹಾಗೂ ಸಮಾಜಸೇವಕ ಗ್ರಾ.ಪಂ.ಸದಸ್ಯ ಕೆ.ಎಸ್.ವೆಂಕಟೇಶಗೌಡರು ತಿಳಿಸಿದರು. ಅವರು ಟೇಕಲ್ ಸರ್ಕಲ್‌ನಲ್ಲಿ ಎಲ್ಲಾ ಆಟೋ ಚಾಲಕರ ಸಂಘ ಹಾಗೂ ಮಾಲೀಕರು ಏರ್ಪಡಿಸಿದ 69ನೇ ಕನ್ನಡ ರಾಜ್ಯೋತ್ಸವ ಹಾಗೂ ಶಂಕರ್‌ನಾಗ್‌ರವರ ಹುಟ್ಟಿದ ಪ್ರಯುಕ್ತ ತಾಯಿ ಭುವನೇಶ್ವರಿಗೆ ಪೂಜೆ ಸಲ್ಲಿಸಿ ಮಾತನಾಡುತ್ತಿದ್ದರು.

ಇಂದು ಟೇಕಲ್ ಅಭಿವೃದ್ಧಿ ಪಥದತ್ತ ಸಾಗಲು ಶಾಸಕ ಕೆ.ವೈ.ನಂಜೇಗೌಡರು ಹಲವಾರು ರೀತಿಯ ಕೊಡುಗೆಯನ್ನು ನೀಡುತ್ತಾ ಬಂದಿದ್ದು ಇದೀಗ ಸರ್ಕಲ್‌ನಲ್ಲಿ ಆಟೋ ನಿಲ್ಲಿಸಲು ವಾಹನಗಳು ಓಡಾಡಲು ಗುಣಮಟ್ಟದ ಸಿಮೆಂಟ್ ರಸ್ತೆಯನ್ನು ಮಾಡಿಸಿ ಕೊಟ್ಟಿದ್ದಾರೆ ಶಾಸಕರು ಎಂದರು.

ಶಾಸಕರ ಸಹೋದರ ಹಾಗೂ ನೂಟುವೆ ಗ್ರಾ.ಪಂ.ಮಾಜಿ ಅಧ್ಯಕ್ಷ, ಹಾಲಿ ಸದಸ್ಯ ಕೆ.ವೈ. ಈರೇಗೌಡ ಮಾತನಾಡಿ ನಮ್ಮ ಶಾಸಕರು ನಿಮ್ಮೆಲ್ಲರ ಆಟೋ ಚಾಲಕರ ಸಮಸ್ಯೆ ಸ್ಪಂಧಿಸಿ ಹಂತ ಹಂತವಾಗಿ ನಿಮ್ಮ ಬೇಡಿಕೆಗಳನ್ನು ಈಡೇರಿಸುತ್ತಿದ್ದಾರೆ. ಯಾವ ರೀತಿ ಸಮಸ್ಯೆ ಬಂದರೂ ಅದಕ್ಕೆ ನಾವೆಲ್ಲ ಬೆನ್ನೆಲುಬಾಗಿ ನಿಂತಿದ್ದು ನಾವು ಜೀವನದಲ್ಲಿ ಸ್ವಾಭಿಮಾನಿಯಾಗಿ ಬದುಕಬೇಕು, ಪ್ರತಿಯೊಬ್ಬರು ಸ್ವಾಭಿಮಾನಿಗಳಂತೆ ಬದುಕೋಣ ಅದಕ್ಕೆ ಧಕ್ಕೆ ಬಾರದಂತೆ ನಡೆಯಬೇಕು. ಏಕೆಂದರೆ ಇತ್ತೀಚಿನ ದಿನದಲ್ಲಿ ಕೆಲವರು ಚುನಾವಣೆಗಳು ಬಂತೆಂದರೆ ಎಲ್ಲಿಂದಲೋ ಬಂದು ಮಣೆ ಹಾಕುವ ಪ್ರವೃತ್ತಿ ಮಾಡುತ್ತಾರೆ. ಅದಕ್ಕೆ ಬೆಲೆ ಕೊಡಬೇಡಿ ಸ್ಥಳೀಯವಾಗಿ ನಿಮಗೆ ಕೈಗೆ ಸಿಗುವ ಹಾಗೂ ಅಭಿವೃದ್ಧಿಗೆ ಸಹಕರಿಸುವವರಿಗೆ ನಿಮ್ಮ ಸಹಕಾರವಿರಲಿ ಎಂದರು.

ಈ ಸಂದರ್ಭದಲ್ಲಿ ಮಾಜಿ ಗ್ರಾ.ಪಂ.ಅಧ್ಯಕ್ಷ ಎಸ್.ಜಿ.ರಾಮಮೂರ್ತಿ, ದರಕಾಸ್ತು ಸಮಿತಿ ಬಿ.ಜಿ.ಸತೀಶ್‌ಬಾಬು, ಗ್ಯಾರೆಂಟಿ ಯೋಜನೆಗಳ ತಾ॥ ಉಪಾಧ್ಯಕ್ಷ ವೆಂಕಟಪ್ಪ, ಸೀನಣ್ಣ, ಆಟೋ ಚಾಲಕರ ಸಂಘದ ನಾರಾಯಣಸ್ವಾಮಿ, ಅಶೋಕ್, ರವಿ, ಕೃಷ್ಣಯ್ಯಶೆಟ್ಟಿ, ರವಿ ಜೈಭುವನೇಶ್ವರಿ ಆಟೋ ಚಾಲಕರು, ಶ್ರೀ ಮುನೇಶ್ವರ ಆಟೋ ಚಾಲಕರ ಬಳಗ, ಸ್ಥಳೀಯ ಆಟೋ ಚಾಲಕರು, ಮಾಲೀಕರು ಉಪಸ್ಥಿತರಿದ್ದರು.

## ಪೊಲೀಸ್ ವಶದಲ್ಲಿದ್ದ ಆರೋಪಿ ಠಾಣೆಯಲ್ಲಿ ಸಾವು

**ಉಡುಪಿ:** ಮಹಿಳೆ ಮತ್ತು ಮಕ್ಕಳಿಗೆ ಕಿರುಕುಳ ನೀಡಿದ ಆರೋಪದಲ್ಲಿ ಪೊಲೀಸ್ ವಶದಲ್ಲಿದ್ದ ವ್ಯಕ್ತಿಯೊಬ್ಬರು ಠಾಣೆಯಲ್ಲೇ ಸಾವಿಗೀಡಾಗಿರುವ ಘಟನೆ ಉಡುಪಿ ಜಿಲ್ಲೆಯ ಬ್ರಹ್ಮಾವರ ಪೊಲೀಸ್ ಠಾಣೆಯಲ್ಲಿ ನಡೆದಿದೆ.

ಕೇರಳದ ಕೊಲ್ಲಂ ಮೂಲದ ಬಿಜು ಮೋಹನ್ ಮೃತಪಟ್ಟವರು.

ಮಹಿಳೆ ಮತ್ತು ಮಕ್ಕಳಿಗೆ ಕಿರುಕುಳ ನೀಡಿದ ಪ್ರಕರಣದಲ್ಲಿ ಬಂಧನಕ್ಕೊಳಗಾಗಿದ್ದ. ಠಾಣೆಗೆ ಕರೆಸಿ ಪ್ರಾಥಮಿಕ ತನಿಖೆ ನಡೆಸಿದ ಬ್ರಹ್ಮಾವರ ಪೊಲೀಸರು, ಲಾಕಪ್ನಲ್ಲಿ ಇರಿಸಿದ್ದರು. ಮುಂಜಾನೆ ಕುಸಿದು ಬಿದ್ದ ಸ್ಥಿತಿಯಲ್ಲಿದ್ದ ಆತನನ್ನು ಪೊಲೀಸರೇ ಆಸ್ಪತ್ರೆಗೆ ಸಾಗಿಸಿದ್ದಾರೆ. ಚಿಕಿತ್ಸೆ ನೀಡುವ ಮೊದಲೇ ಆತ ಕೊನೆಯುಸಿರೆಳೆದಿದ್ದಾನೆ.




ಉಡುಪಿ ಜಿಲ್ಲೆಯ ಬ್ರಹ್ಮಾವರ ತಾಲೂಕಿನ ಕೊಚ್ಚಿನ್ ಶಿಪ್ ವಾರ್ಡಿನಲ್ಲಿ ಕೂಲಿ ಕೆಲಸಕ್ಕೆ ಬಂದಿದ್ದ. ವಿಪರೀತ ಕುಡಿತದ ಚಟ ಇರುವ ಬಿಜು, ಕಳೆದ ಸಂಜೆ ಚೇರ್ಕಾಡಿ ಗ್ರಾಮದಲ್ಲಿ ಮನೆಗೆ ಹೋಗಿ ಮಹಿಳೆ ಮತ್ತು ಆಕೆಯ ಮಕ್ಕಳನ್ನು ಚುಡಾಯಿಸಿದ್ದ. ಸ್ಥಳೀಯರು ಈ ಕುರಿತು ಬ್ರಹ್ಮಾವರ ಪೊಲೀಸ್ ಠಾಣೆಗೆ ಫೋನ್ ಮಾಡಿ ಮಾಹಿತಿ ನೀಡಿದ್ದರು. ತಕ್ಷಣ ಸಿಬ್ಬಂದಿ ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಿ ವ್ಯಕ್ತಿಯನ್ನು ವಶಕ್ಕೆ ಪಡೆದಿದ್ದರು. ಶನಿವಾರ ರಾತ್ರಿ ಈ ಕುರಿತು ಬ್ರಹ್ಮಾವರ ಠಾಣೆಯಲ್ಲಿ ದೂರು ದಾಖಲಾಗಿತ್ತು.

ಪೊಲೀಸರು ಈ ಬಗ್ಗೆ ರಾತ್ರಿಯೇ ಪ್ರಾಥಮಿಕ ತನಿಖೆಯನ್ನು ಮಾಡಿ ಮಾಹಿತಿ ದಾಖಲು ಮಾಡಿಕೊಂಡಿದ್ದರು. ಕಳೆದ ರಾತ್ರಿ ಲಾಕಪ್ನಲ್ಲೇ ಇರಿಸಿದ್ದರು. ಕಳೆದ ರಾತ್ರಿ 3:45 ಸುಮಾರಿಗೆ ಕರ್ತವ್ಯದಲ್ಲಿದ್ದ ಸಿಬ್ಬಂದಿ ಆರೋಪಿ ಕುಸಿದು ಬಿದ್ದಿರೋದನ್ನು ಗಮನಿಸಿದ್ದಾರೆ. ಎಸ್‌ಐ ಗೆ ಮಾಹಿತಿ ನೀಡಿ, ತಕ್ಷಣ ಅಂಬುಲೆನ್ಸ್ ಮೂಲಕ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ರವಾನಿಸಿದ್ದಾರೆ. ಆಸ್ಪತ್ರೆಗೆ ಸಾಗಿಸುವಷ್ಟರಲ್ಲಿ ಬಿಜು ಮೃತಪಟ್ಟಿರುವುದಾಗಿ ವೈದ್ಯರು ತಿಳಿಸಿದ್ದಾರೆ. ಪೊಲೀಸರು ಆತನ ಕುಟುಂಬಕ್ಕೆ ಮಾಹಿತಿ ನೀಡಿದ್ದಾರೆ.

# ಸಂಜೆ ಟಿಪ್ಸ್

## ಸಕ್ಕರೆ-ಎಥೆನಲ್ ಉದ್ಯಮೆ ಕ್ಷೇತ್ರದ ಮತ್ತು ರೈತರ ರಕ್ಷಣೆ

ಸಕ್ಕರೆ ಉದ್ಯಮಕ್ಕೆ ಕೇಂದ್ರ ಸರ್ಕಾರವು ಉತ್ತೇಜನ ಕೊಡುತ್ತಿದ್ದು ಕಾರ್ಖಾನೆಗಳು ಈ ಪ್ರೋತ್ಸಾಹ ಯೋಜನೆಗೆ ಸ್ಪಂದಿಸಿ ಎಥಿನಾಲ್ ಉತ್ಪಾದನಾ ಸಾಮರ್ಥ್ಯವನ್ನ ಹೆಚ್ಚಿಸಿವೆ. ಇತ್ತಿಚಿನ ದಿನಗಳಲ್ಲಿ ಇದರ ಉತ್ಪಾದನಾ ಸಾಮಾರ್ಥ್ಯವು ದ್ವಿಗುಣಗೊಂಡಿದೆ. ಈ ಪ್ರೋತ್ಸಾಹದ ಯೋಜನೆಯ ಪರಿಣಾಮವಾಗಿ ಎಥಿನಾಲ್ ಉತ್ಪಾದನೆಗೆ ಕಚ್ಚಾವಸ್ತುವಾದ ಕಬ್ಬು ಕಳೆದ ವರ್ಷದಲ್ಲಿ ಲಾಭದಾಯಕ ಬೆಲೆಯನ್ನ(ಎಫ್.ಆರ್.ಪಿ) 100/- ಹೆಚ್ಚಿಸುವ ಮೂಲಕ ಮುಂಬರುವ ವರ್ಷಗಳಲ್ಲಿ 250/ಎಂ.ಟಿ ಆಗಲಿದೆ. ಇಂಥಹ ಸುಧಾರಿತ ಯೋಜನೆಗಳ ಕಬ್ಬಿನ ಬೆಲೆಗಳು ಗ್ರಾಮೀಣ ಆರ್ಥಿಕತೆಯ ಬೆಳವಣಿಗೆಯನ್ನ ಬೆಂಬಲಿಸುತ್ತದೆ ಇದರಿಂದ ಕಬ್ಬಿನ ಉತ್ಪಾದನೆ ಹೆಚ್ಚಾಗುತ್ತದೆ. ಆದಾಗ್ಯೂ ಇಂತಹ ಪರಿಸ್ಥಿತಿಯಲ್ಲಿ ಉದ್ಯಮದ ಕಚ್ಚಾ ವಸ್ತುವಾದ ಕಬ್ಬಿನ ಬೆಲೆಗೆ ಅನುಗುಣವಾಗಿ ಸಕ್ಕರೆ ಮತ್ತು ಎಥಿನಲ್ ಬೆಲೆಗಳನ್ನ ಪರಿಷ್ಕರಿಸಬೇಕಗುತ್ತದೆ. 2024-25ರಲ್ಲಿ ಸಕ್ಕರೆ ಉದ್ಯಮವು ಸುಮಾರು 500 ಕೋಟಿ ಲೀಟರ್ ಎಥೇನಾಲನ್ನು ಉತ್ಪಾದಿಸಿ ಓ.ಎಂ.ಸಿ ಗಳಿಗೆ ಸರಬರಾಜು ಮಾಡುವ ನಿರೀಕ್ಷೆವಿದೆ. ಇದು ಕಚ್ಚಾ ತೈಲದ ಆಮದನ್ನ ಕಡಿಮೆಮಾಡಿ ವಿದೇಶಿ ವಿನಿಮಯ ಉಳಿತಾಯವಾಗಲು ಕಾರಣವಾಗುತ್ತದೆ.

ಪ್ರತಿವರ್ಷವು ಉತ್ಪಾದನೆ ಕಾರ್ಯ ಪ್ರಾರಂಭವಾಗುತ್ತಿದ್ದಂತೆ ಎಥಿನಾಲ್ ಬೆಲೆ ಪರಿಸ್ಕರಣೆಯಾಗುತ್ತದೆ. ಸಕ್ಕರೆ ಉದ್ಯಮ ಮತ್ತು ರೈತರನ್ನ ರಕ್ಷಿಸಲು ಎಂ.ಎಸ.ಪಿ ನಿರ್ಣಾಯಕ ಪಾತ್ರ ವಹಿಸುತ್ತದೆ.

ಮಾಸಿಕ ಕೋಟಾ ವ್ಯವಸ್ಥೆಯಿಂದಾಗಿ ಸಕ್ಕರೆ ಬೆಲೆಗಳು ಉತ್ಪದನಾ ವೆಚ್ಚಕ್ಕಿಂತ ಕಡಿಮೆಯಾಗಿ ನಷ್ಟದ ಪರಿಸ್ಥಿತಿ ಬರುತ್ತದೆ ಇಂಥಹ ಸಂದರ್ಭದಲ್ಲಿ ಎಂ.ಎಸ್.ಪಿ ರೈತರು ಉದ್ಯಿಮೆ ಮತ್ತು ಇತರೆ ಮಧ್ಯಸ್ಥಗಾರನ್ನ ರಕ್ಷಿಸುತ್ತದೆ. ಕಬ್ಬಿನ ಬೆಲೆ ಮತ್ತು ಎಥಿನಾಲ್ ಬೆಲೆಯಲ್ಲಿನ ಅಸಮತೋಲನದಿಂದಾಗಿ ರೈತರಿಗೆ ಪಾವತಿಗಳು, ವೇತನಗಳು, ಬ್ಯಾಂಕ್ ಸಾಲದ ಕಂತನ್ನ ಮರುಪಾವತಿಸುವುದು ಕಷ್ಟವಾಗುತ್ತದೆ. ಕಟಾವು, ಸಾಗಣೆ ಮತ್ತು ನಿರ್ವಹಣೆ ವೆಚ್ಚಗಳನ್ನ ನಿಭಾಯಿಸುವುದು ಕಷ್ಟವಾಗುತ್ತದೆ. ಇಂತಹ ನಷ್ಟವು ಕರ್ನಾಟಕದಲ್ಲಿ ಸಕ್ಕರೆ ಮತ್ತು ಎಥಿನಾಲ್ ಉದ್ಯಮವು ರೈತರ ಮೇಲೆ ಮತ್ತು ಈ ಕ್ಷೇತ್ರದ ಎಲ್ಲರ ಮೇಲೆ ಬೀರಬಹುದಾದ ಸಾಂಭವ್ಯ ಸಂಕಷ್ಟವನ್ನ ತಡೆಗಟ್ಟುವುದು ಅತ್ಯಗತ್ಯವಾಗಿದೆ. ಆದ್ದರಿಂದ ಎಥಿನಾಲ್ ಬೆಲೆ ಮತ್ತು ಸಕ್ಕರೆಗೆ ಎಂ.ಎಸ್.ಪಿನಲ್ಲಿ ಪರಿಷ್ಕರಣೆ ಮಾಡುವಂತೆ ಸರ್ಕಾರಕ್ಕೆ ಮತ್ತು ಇದರ ನೀತಿ ನಿರೋಪಕರಿಗದೆ ಸೌತ್ ಇಂಡಿಯನ್ ಶುಗರ್ ಮಿಲ್ಸ ಅಸೋಶಿಯೇಷನ್ ಅತ್ಯಂತ ಗೌರವಯುತವಾಗಿ ವಿನಂತಿಸುತ್ತದೆ.

## ಚಿತ್ರಾನ್ನ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಅನ್ನ, ಸಾಸಿವೆ, ಕಡಲೆ ಬೇಳೆ, ಎಣ್ಣೆ, ಉದ್ದಿನ ಬೇಳೆ, ಕಡಲ ಬೀಜ, ಅರಶಿನ ಪುಡಿ, ಅರಶಿನ ಪುಡಿ, ಉಪ್ಪು, ನಿಂಬೆ, ತೆಂಗಿನ ತುರಿ, ಕೊತ್ತಂಬರಿ ಸೊಪ್ಪು, ಕರಿಬೇವು, ಹಸಿಮೆಣಸು

### ಮಾಡುವ ವಿಧಾನ

ಮೊದಲು ಒಂದು ಪಾತ್ರೆ, ಒಲೆ ಮೇಲೆ ಇಟ್ಟು ನಂತರ ಅದಕ್ಕೆ ಎಣ್ಣೆ ಹಾಕಿಕೊಳ್ಳಿ, ಎಣ್ಣೆ ಸ್ವಲ್ಪ ಹೆಚ್ಚಾಗಿ ಬಳಸಿ. ಎಣ್ಣೆ ಬಿಸಿಯಾದ ಬಳಿಕ ಇದಕ್ಕೆ ಸಾಸಿವೆ ಹಾಕಿ. ಅನಂತರ ಉದ್ದಿನ ಬೇಳೆ, ಕಡಲೆ ಬೇಳೆ, ಕಡಲೆ ಬೀಜ ಹಾಕಿ ಹುರಿದುಕೊಳ್ಳಿ. ಚೆನ್ನಾಗಿ ಅಂಶ ಕೆಂಪಗಾಗಲು ಬಿಡಬೇಕು.

ಈಗ ಇದಕ್ಕೆ ಅರಶಿನ, ಕರಿಬೇವು, ಹಸಿ ಮೆಣಸು ಹಾಕಿಕೊಂಡು ಮತ್ತೆ ಫ್ರೈ ಮಾಡಿ. 1 ನಿಮಿಷ ಫ್ರೈ ಮಾಡಿದ ಬಳಿಕ ಹಿಂದಿನ ದಿನ ಮಾಡಿದ್ದ ಅನ್ನ ಅಥವಾ ಚಿತ್ರಾನ್ನಕ್ಕೆಂದೇ ಮಾಡಿರುವ ಅನ್ನವನ್ನು ಇದಕ್ಕೆ ಹಾಕಿ ಚೆನ್ನಾಗಿ ಮಿಕ್ಸ್ ಮಾಡಿಕೊಳ್ಳಿ. ಮಿಕ್ಸ್ ಮಾಡುವಾಗ ರುಚಿಗೆ ತಕ್ಕಷ್ಟು ಉಪ್ಪು ಹಾಕಿಕೊಂಡು ಮಿಕ್ಸ್ ಮಾಡಿಕೊಳ್ಳಬೇಕು.

ಅನಂತರ ಕತ್ತರಿಸಿಕೊಂಡಿರುವ ಕೊತ್ತಂಬರಿ ಸೊಪ್ಪನ್ನು ಕೂಡ ಹಾಕಿ ಕಲಸಿಕೊಳ್ಳಿ. ಕೊನೆಯಾದಾಗಿ ತೆಂಗಿನ ತುರಿ ಹಾಕಿ ಮಿಕ್ಸ್ ಮಾಡಿಕೊಂಡರೆ ಸಾಕು. ಇಷ್ಟಾದರೆ ನಿಮ್ಮ ಮುಂದೆ ರುಚಿ ರುಚಿಯ ಚಿತ್ರಾನ್ನ ರೆಡಿಯಾಗುತ್ತದೆ. ಇದು ಮಾಮೂಲಿಯಾಗಿ ಮಾಡುವುದಕ್ಕಿಂತ 2 ನಿಮಿಷದೊಳಗೆ ಒಳ್ಳೆಯ ಒಗ್ಗರಣೆ ಹಾಕಿ ಮಾಡಬಹುದು. ಮನೆ ಮಂದಿಯಲ್ಲ ಈ ಚಿತ್ರಾನ್ನವನ್ನ ಬಾಯಿ ಚಪ್ಪರಿಸಿ ಸವಿಯುತ್ತಾರೆ. ನೀವು ಕೂಡ ಒಮ್ಮೆ ಮನೆಯಲ್ಲಿ ಇದನ್ನು ಟ್ರೈ ಮಾಡಿ ನೋಡಿ. ಬೆಳಗ್ಗೆ ಸಮಯವಿಲ್ಲದಾಗ ಈ ರೀತಿ 2 ನಿಮಿಷದಲ್ಲಿ ಮಾಡುವ ಚಿತ್ರಾನ್ನ ಮಾಡಿ ಸವಿದು ನೋಡಿ.

## ರಾಖಿ ಸಾವಂತ್ ಕಣ್ಣೀರ ಕಥೆ



ಬಾಲಿವುಡ್ ಡ್ರಾಮಾ ಕ್ವೀನ್ ರಾಖಿ ಸಾವಂತ್ ಸದ್ಯ ದುಬೈನಲ್ಲಿದ್ದಾರೆ. ಭಾರತದಲ್ಲಿ ಐಷಾರಾಮಿ ಜೀವನ ನಡೆಸುತ್ತಿದ್ದ ನಟಿ ಇದೀಗ ದುಬೈನಲ್ಲಿ ತೀರ ಹೀನಾಯ ಬದುಕು ಬದುಕುತ್ತಿರುವುದಾಗಿ ಹೇಳಿಕೊಂಡಿದ್ದಾರೆ. ಅವರೇ ಮಾಧ್ಯಮಗಳಿಗೆ ಹೇಳಿರುವಂತೆ, ದುಬೈನಲ್ಲಿ ಅವರು ಭಿಕ್ಷುಕಿಯಂತೆ ಬದುಕಿದ್ದಾರಂತೆ.

ಇಷ್ಟಕ್ಕೆಲ್ಲ ಕಾರಣ ಅವರ ಮಾಜಿ ಪತಿ, ಮೈಸೂರಿನ ಆದಿಲ್ ನೀಡಿರುವ ದೂರು ಎನ್ನಲಾಗಿದೆ. ರಾಖಿ ಸಾವಂತ್ ಮಾಜಿ ಪತಿ ಆದಿಲ್, ರಾಖಿ ವಿರುದ್ಧ ವಂಚನೆ, ಕಳ್ಳತನ, ಮಾನಹಾನಿ ಇನ್ನಿತರೆ ದೂರುಗಳನ್ನು ದಾಖಲಿಸಿದ್ದಾರೆ. ಹೀಗಾಗಿ ಭಾರತಕ್ಕೆ ಬಂದರೆ ಪೊಲೀಸರು ತಮ್ಮನ್ನು ಬಂಧಿಸುವ ಸಾಧ್ಯತೆ ಇರುವ ಕಾರಣದಿಂದಾಗಿ ರಾಖಿ ಸಾವಂತ್ ದುಬೈಗೆ ಪಲಯಾನ ಮಾಡಿದ್ದಾರೆ. ಅಲ್ಲಿ ಕಳೆದ ಕೆಲ ವಾರಗಳಿಂದಲೂ ವಾಸವಿದ್ದು, ಅವರೇ ಹೇಳಿರುವಂತೆ ಹಣ ಇಲ್ಲದ ಕಾರಣ ಭಿಕ್ಷುಕಿಯಂತೆ ಜೀವನ ನಡೆಸುತ್ತಿದ್ದಾರಂತೆ. 'ಎಷ್ಟು ದಿನ ನಾನು ಸಹಾಯಕ್ಕೆ ಕೇಳುತ್ತಾ ಇರಲಿ, ಎಷ್ಟು ಜನರನ್ನು ಕೇಳಲಿ, ನನ್ನ ಜೀವನ ಭಿಕ್ಷುಕಿಯಂತೆ ಆಗಿಬಿಟ್ಟಿದೆ. ನನಗೆ ಭಾರತೀಯ ಕಾನೂನಿನ ಮೇಲೆ ವಿಶ್ವಾಸವಿದೆ, ನಾನು ಭಾರತಕ್ಕೆ ಮರಳಲಿದ್ದೇನೆ' ಎಂದಿದ್ದಾರೆ. ದಶಕಗಳಿಂದಲೂ ಬಾಲಿವುಡ್ನಲ್ಲಿರುವ ರಾಖಿ ಸಾವಂತ್, ಸಲ್ಮಾನ್ ಖಾನ್, ಫರ್ಹಾನ್ ಖಾನ್, ಶಾರುಖ್ ಖಾನ್ ಅವರ ಸಹಾಯವನ್ನೇಕೆ ಕೇಳಬಾರದು ಎಂಬ ಮಾಧ್ಯಮದವರ ಪ್ರಶ್ನೆಗೆ, 'ನಾನು ಯಾರನ್ನೂ ಸಹ ಸಹಾಯಕ್ಕಾಗಿ ಕೇಳುವುದಿಲ್ಲ. ಇದು ನನ್ನ ಯುದ್ಧ ನಾನೇ ಹೋರಾಡುತ್ತೇನೆ. ಶಾರುಖ್, ಸಲ್ಮಾನ್ ಅವರನ್ನು ಕೇಳಿದೆ ಎಂದರೆ ಕೇವಲ ಒಂದು ನಿಮಿಷದಲ್ಲಿ ನನಗೆ ಜಾಮೀನು ಕೊಡಿಸಬಲ್ಲರು, ಆದರೆ ನಾನು ಹಾಗೆ ಮಾಡುವುದಿಲ್ಲ, ಈ ಯುದ್ಧವನ್ನು ನಾನೇ ಹೋರಾಡುತ್ತೀನಿ' ಎಂದು ಹೇಳಿಕೊಂಡಿದ್ದಾರೆ. 2022 ರ ಮೇ ತಿಂಗಳಲ್ಲಿ ರಾಖಿ ಸಾವಂತ್ ಹಾಗೂ ಮೈಸೂರಿನ ಉದ್ಯಮಿ ಆದಿಲ್ ಖಾನ್ ವಿವಾಹ ಆಗಿದ್ದರು. ಆದಿಲ್, ಐಶಾರಾಮಿ ಕಾರುಗಳನ್ನು ರಾಖಿಗೆ ಉಡುಗೊರೆಯಾಗಿ ಕೊಟ್ಟಿದ್ದರು. ಆದರೆ ಮದುವೆಯಾದ ಕೆಲವೇ ದಿನಕ್ಕೆ ಆದಿಲ್ ವಿರುದ್ಧ ರಾಖಿ ಸಾವಂತ್ ದೂರು ನೀಡಿದ್ದರು. ಲೈಂಗಿಕ ದೌರ್ಜನ್ಯ ಪ್ರಕರಣ ದಾಖಲಿಸಿದ್ದರು. ಇದರಿಂದಾಗಿ ಆದಿಲ್ ಕೆಲ ಸಮಯ ಜೈಲಿನಲ್ಲಿ ಸಮಯ ಕಳೆಯಬೇಕಾಯ್ತು. ಜೈಲಿನಿಂದ ಹೊರಬಂದ ಬಳಿಕ ಆದಿಲ್, ರಾಖಿ ವಿರುದ್ಧ ವಂಚನೆ, ಕಳ್ಳತನ ಇನ್ನಿತರೆ ಪ್ರಕರಣ ದಾಖಲಿಸಿದ್ದು, ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಇದರ ನಡುವೆ ರಾಖಿ ಸಾವಂತ್ ದುಬೈಗೆ ಪಲಾಯನಗೊಂಡಿದ್ದು ಅಲ್ಲಿ ಭಿಕ್ಷುಕಿಯಂತೆ ಜೀವನ ನಡೆಸುತ್ತಿದ್ದಾರೆ.

## ನೆಗಡಿಗೆ ಸಿಂಪಲ್ ಟಿಪ್ಸ್



### ಹೆಲ್ತ್ ಟಿಪ್ಸ್

ಚಳಿಗಾಲದಲ್ಲಿ ತಪ್ಪದೇ ಎಲ್ಲರನ್ನು ಕಾಡೋ ಸಮಸ್ಯೆ ಅಂದ್ರೆ, ನೆಗಡಿ. ಒಬ್ಬರಿಂದ ಮತ್ತೊಬ್ಬರಿಗೆ ಹರಡೋ ನೆಗಡಿಗೆ ವೈರಾಣುಗಳು ಕಾರಣವೆಂದು ಹೇಳಲಾಗಿದೆ.

ನೆಗಡಿಯಿರುವ ವ್ಯಕ್ತಿ ಕೆಮ್ಮಿದಾಗ, ಸೀನಿದಾಗ ವೈರಾಣುಗಳು ಗಾಳಿಯಲ್ಲಿ ಹರಡಿ ಮತ್ತೊಬ್ಬ ವ್ಯಕ್ತಿಯ ದೇಹವನ್ನು ಸೇರುತ್ತದೆ. ನೆಗಡಿ ಸಾಮಾನ್ಯವಾಗಿ 4 ರಿಂದ 6 ದಿನಗಳೊಳಗೆ ತನ್ನಷ್ಟಕ್ಕೆ ತಾನೇ ಗುಣವಾಗುತ್ತದೆ. ದೇಹದ ರೋಗ ನಿರೋಧಕ ಶಕ್ತಿಯು ವೈರಾಣುವಿನ ವಿರುದ್ಧ ಹೋರಾಡಲು ಪ್ರತಿಬಂಧಕಗಳನ್ನು ಸೃಷ್ಟಿಸಿ ದೇಹದಿಂದ ಹೊರಹಾಕುತ್ತದೆ. ಆದ್ರೂ, ನೆಗಡಿಯ ಕಿರಿಕಿರಿಯಿಂದ ದೂರವಿರಲು ಕೆಲ ಮನೆ ಮದ್ದುಗಳನ್ನು ಪಾಲಿಸಿ. ಹುಳಿ ಮೊಸರು, ಕರಿದ ಆಹಾರ, ತಂಪು ಪಾನೀಯ ಕಡಿಮೆಗೊಳಿಸಿ. ಒಂದು ಲೋಟ ಬೆಚ್ಚಗಿನ ಹಾಲಿಗೆ ಅರಿಶಿನ ಮತ್ತು ಬೆಲ್ಲವನ್ನು ಬೆರೆಸಿ ರಾತ್ರಿ, ಮಲಗುವ ಮುನ್ನ ಕುಡಿದರೆ ಕಫ ಮತ್ತು ನೆಗಡಿ ಕಮ್ಮಿಯಾಗುತ್ತದೆ. ದಿನಕ್ಕೆ 2 ರಿಂದ 3 ಬಾರಿ ಹತ್ತು ನಿಮಿಷಗಳ ಕಾಲ ಮುಖಕ್ಕೆ ಹಬೆಯನ್ನು ತೆಗೆದುಕೊಳ್ಳಬೇಕು.

ತುಳಸಿ, ಶುಂಠಿ ಕಷಾಯ ಸೇವಿಸಬೇಕು.

ದಾಲ್ಚಿನ್ನಿ, ಜೇನುತುಪ್ಪ ಮತ್ತು ನಿಂಬೆ ರಸವನ್ನು ಸೇವಿಸಿದರೆ ನೆಗಡಿ ಮತ್ತು ಕಫ ನಿವಾರಣೆಯಾಗುತ್ತದೆ.

ಬೆಳ್ಳಿಗೆ ಎದ್ದ ತಕ್ಷಣ ಬಿಸಿ ನೀರು ಕುಡಿಯುವ ಅಭ್ಯಾಸವನ್ನು ರೂಢಿಸಿಕೊಳ್ಳಬೇಕು.

## ಯಶ್ ಮಗನ ಗ್ರ್ಯಾಂಡ್ ಬರ್ತ್‌ಡೇ ಪಾರ್ಟಿ: ವಿಡಿಯೋ ಹಂಚಿಕೊಂಡ ರಾಧಿಕಾ ಪಂಡಿತ್



ನ್ಯಾಷನಲ್ ಸ್ಟಾರ್ ಯಶ್ ಅವರು ಇತ್ತೀಚೆಗೆ ಮಗನ 5ನೇ ವರ್ಷದ ಹುಟ್ಟುಹಬ್ಬವನ್ನು ಗ್ರ್ಯಾಂಡ್ ಆಗಿ ಆಚರಿಸಿದರು. ಇಬ್ಬರೂ ಮುದ್ದಾದ ಮಕ್ಕಳ ಜೊತೆ ಯಶ್ ದಂಪತಿ ಕುಣಿದು ಕುಪ್ಪಳಿಸಿರುವ ಬರ್ತ್‌ಡೇ ಸಂಭ್ರಮದ ವಿಡಿಯೋವನ್ನು ರಾಧಿಕಾ ಪಂಡಿತ್ ಹಂಚಿಕೊಂಡಿದ್ದಾರೆ.

ಯಶ್ ಅವರು ಪಕ್ಕಾ ಫ್ಯಾಮಿಲಿ ಮ್ಯಾನ್. ಸಿನಿಮಾ ಕೆಲಸ ಅಂತ ಅದೆಷ್ಟೇ ಬ್ಯುಸಿ ಇದ್ದರೂ ಕೂಡ ಫ್ಯಾಮಿಲಿ ಸಮಯ ಮೀಸಲಿಡುತ್ತಾರೆ. ಪತ್ನಿ, ಮಕ್ಕಳ ಜೊತೆ ಕಾಲ ಕಳೆಯುತ್ತಾರೆ. ಇದೀಗ ಮಗ ಯಥರ್ವ್ 5ನೇ ವರ್ಷದ ಹುಟ್ಟುಹಬ್ಬವನ್ನು ಅದ್ದೂರಿಯಾಗಿ ಆಚರಿಸಿದ್ದಾರೆ.

ಯಥರ್ವ್ ಮತ್ತು ಐರಾ ಜೊತೆ ತಾವು ಮಕ್ಕಳಂತೆಯೇ ಯಶ್, ರಾಧಿಕಾ ಕುಣಿದು ಎಂಜಾಯ್ ಮಾಡಿದ್ದಾರೆ. 'ಟಗರು' ಸಿನಿಮಾದ ಹಾಡಿಗೆ ಮಸ್ತ್ ಆಗಿ ಕುಣಿದು ಕುಪ್ಪಳಿಸಿದ್ದಾರೆ. ಇಬ್ಬರೂ ಜೀನ್ಸ್- ಟೀ ಶರ್ಟ್‌ನಲ್ಲಿ ಮಿಂಚಿದ್ದಾರೆ. ಬಳಿಕ ಯಥರ್ವ್ ಕೈಯಲ್ಲಿ ಕೇಕ್ ಕತ್ತರಿಸಿ ಸಂಭ್ರಮಿಸಿದ್ದಾರೆ. ಯಶ್ ಮಗನ ಬರ್ತ್‌ಡೇ ಸಂಭ್ರಮದಲ್ಲಿ ಕೆವಿಎನ್ ಪ್ರೊಡಕ್ಷನ್ಸ್ ನಿರ್ಮಾಪಕ ವೆಂಕಟ್ ಅವರು ಕುಟುಂಬದ ಜೊತೆ ಭಾಗಿಯಾಗಿದ್ದಾರೆ. ನಟನ ಕುಟುಂಬದ ಆಪ್ತರಿಗಷ್ಟೇ ಆಹ್ವಾನ ನೀಡಲಾಗಿತ್ತು.

ಅಂದಹಾಗೆ, 2016ರ ಡಿ.9ರಂದು ಯಶ್ ಮತ್ತು ರಾಧಿಕಾ ದಾಂಪತ್ಯ ಜೀವನಕ್ಕೆ ಕಾಲಿಟ್ಟರು. ಈ ದಂಪತಿಯ ದಾಂಪತ್ಯಕ್ಕೆ ಇಬ್ಬರೂ ಮಕ್ಕಳು ಸಾಕ್ಷಿಯಾಗಿದ್ದಾರೆ.

## ಬಿಳಿ ಕೂದಲಿಗೆ ನೈಸರ್ಗಿಕ ಡೈ

### ಬ್ಯೂಟಿ ಟಿಪ್ಸ್



ಹಿಂದಿನ ಕಾಲದಲ್ಲಿ 60 ವರ್ಷದ ನಂತರ ಬಿಳಿ ಕೂದಲು ಕಾಣಿಸಿಕೊಳ್ಳುತ್ತಿತ್ತು. ಆದರೆ ಇತ್ತೀಚಿನ ದಿನಗಳಲ್ಲಿ ಯುವಕರು ಮತ್ತು ಚಿಕ್ಕ ಮಕ್ಕಳಲ್ಲೂ ಬಿಳಿ ಕೂದಲಿನ ಸಮಸ್ಯೆ ಕಾಡುತ್ತಿದೆ. ಇದಕ್ಕೆ ಮುಖ್ಯ ಕಾರಣ ಒತ್ತಡದ ಜೀವನ ಶೈಲಿ. ಬಿಳಿ ಕೂದಲನ್ನು ಕಪ್ಪಾಗಿಸಲು ರಾಸಾಯನಿಕಯುಕ್ತ ಹೇರ್ ಡೈ ಗಳನ್ನು ಬಳಸುವುದರಿಂದ ಕೂದಲು ಮೃದುತ್ವವನ್ನು ಕಳೆದುಕೊಂಡು ಹಾನಿಗೊಳಗಾಗುತ್ತದೆ. ನೈಸರ್ಗಿಕವಾಗಿ ಬಿಳಿಕೂದಲನ್ನು ಕಪ್ಪಾಗಿಸುವುದರಿಂದ ಕೂದಲ ಮೇಲಾಗುವ ಅಡ್ಡ ಪರಿಣಾಮಗಳನ್ನು ತಪ್ಪಿಸಬಹುದು. ಕೂದಲನ್ನು ನೈಸರ್ಗಿಕವಾಗಿ ಕಪ್ಪಾಗಿಸಲು ಇಲ್ಲಿದೆ ಸುಲಭ ವಿಧಾನ.

**ವಿಧಾನ1:** ಇಂಡಿಗೋ ಪೌಡರ್ ಅನ್ನು ಕೂದಲಿನ ಅಳತೆಗೆ ಅನುಗುಣವಾಗಿ ತೆಗೆದುಕೊಂಡು ನೀರಿನಲ್ಲಿ ಕಲಸಿ ತಕ್ಷಣವೇ ಕೂದಲಿಗೆ ಲೇಪಿಸಿಕೊಳ್ಳಬೇಕು. ಒಂದು ಗಂಟೆಯ ನಂತರ ಬರೀ ನೀರಿನಲ್ಲಿ ಕೂದಲನ್ನು ತೊಳೆಯಬೇಕು. 48 ಗಂಟೆಗಳ ಬಳಿಕ ಕೂದಲಿಗೆ ಎಣ್ಣೆಯನ್ನು ಲೇಪಿಸಿ ಶ್ಯಾಂಪೂವಿನಿಂದ ಕೂದಲನ್ನು ತೊಳೆಯಬೇಕು.

**ವಿಧಾನ 2:** 7ರಿಂದ8 ಟೇಬಲ್ ಸ್ಪೂನ್ ಮೆಹಂದಿ ಪುಡಿಯನ್ನು ತೆಗೆದುಕೊಂಡು ಬಿಸಿ ನೀರಿನ ಜೊತೆ ಕಲಿಸಿಡಬೇಕು ತಲೆಗೆ ಹಚ್ಚುವ ಮುನ್ನ ಅದಕ್ಕೆ 2 ಟೇಬಲ್ ಸ್ಪೂನ್ ಇಂಡಿಗೋ ಪೌಡರ್ ಅನ್ನು ಬೆರೆಸಿ ಈ ಪೇಸ್ಟನ್ನು ಲೇಪಿಸಿಕೊಂಡು 3 ಗಂಟೆಗಳ ನಂತರ ಬರೀ ನೀರಿನಿಂದ ಕೂದಲನ್ನು ತೊಳೆಯಬೇಕು. ಎರಡು ದಿನದ ಬಳಿಕ ಎಣ್ಣೆಯನ್ನು ಲೇಪಿಸಿ ಶಾಂಪೂವಿನಿಂದ ಕೂದಲನ್ನು ತೊಳೆದರೆ ನೈಸರ್ಗಿಕವಾಗಿ ಕೂದಲು ಕಪ್ಪಾಗುತ್ತದೆ.

## ಮಣಿಪಾಲ್ ಅಕಾಡೆಮಿ ಆಫ್ ಹೈಯರ್ ಎಜುಕೇಶನ್ ಪರಿಗಣಿತ ವಿಶ್ವವಿದ್ಯಾನಿಲಯ ಘಟಿಕೋತ್ಸವ




ಮಣಿಪಾಲ್ ಅಕಾಡೆಮಿ ಆಫ್ ಹೈಯರ್ ಎಜುಕೇಶನ್ ಪರಿಗಣಿತ ವಿಶ್ವವಿದ್ಯಾನಿಲಯ, ಇದು ಭಾರತದ ಪ್ರಮುಖ ಸಂಶೋಧನಾ-ಕೇಂದ್ರಿತ ಶಿಕ್ಷಣ ಸಂಸ್ಥೆಗಳಲ್ಲಿ ಒಂದಾಗಿದೆ, ಇದು ನವೆಂಬರ್ 9 ರಂದು ಕೆ ಎಂ ಸಿ ಗ್ರೀನ್ಸ್‌ನಲ್ಲಿ ತನ್ನ 32 ನೇ ಘಟಿಕೋತ್ಸವ ಸಮಾರಂಭದ 2 ನೇ ದಿನವನ್ನು ಆಚರಿಸಿತು . ಘಟಿಕೋತ್ಸವವು ಪದವೀಧರರ ಸಾಧನೆಗಳನ್ನು ಆಚರಿಸಿತು ಮತ್ತು ಶೈಕ್ಷಣಿಕ ಉತ್ಕೃಷ್ಟತೆಗೆ ಅವರ ಬದ್ಧತೆಯನ್ನು ಗೌರವಿಸಿತು. ಈ ಪ್ರತಿಷ್ಠಿತ ಕಾರ್ಯಕ್ರಮವು ವಿದ್ಯಾರ್ಥಿಗಳ ಶೈಕ್ಷಣಿಕ ಸಾಧನೆಗಳನ್ನು ಗೌರವಿಸಲು ಗೌರವಾನ್ವಿತ ಅಧ್ಯಾಪಕರು, ಗಣ್ಯ ಅತಿಥಿಗಳು ಮತ್ತು ಕುಟುಂಬಗಳನ್ನು ಒಟ್ಟುಗೂಡಿಸಿತು.

ಸಮಾರಂಭವು ನವೆಂಬರ್ 8 ರಿಂದ ನವೆಂಬರ್ 10 ರವರೆಗೆ ಮೂರು ದಿನಗಳ ಕಾಲ ನಡೆಯುತ್ತಿದ್ದು, ಮೊದಲ ದಿನದ ಮುಖ್ಯ ಅತಿಥಿಯಾಗಿ ಯುಜಿಸಿ ಅಧ್ಯಕ್ಷರಾದ ಪ್ರೊ.ಮಾಮಿದಾಳ ಜಗದೇಶ್ ಕುಮಾರ್; ಎರಡನೇ ದಿನದ ಮುಖ್ಯ ಅತಿಥಿಯಾಗಿ ಡಾ. ಇಂದ್ರಜಿತ್ ಭಟ್ಟಾಚಾರ್ಯ, ಡೈರೆಕ್ಟರ್ ಜನರಲ್, ನೀರಾ, ನವದೆಹಲಿ; ಮತ್ತು ಮೂರನೇ ದಿನದ ಮುಖ್ಯ ಅತಿಥಿಯಾಗಿ ಡಾ ರಾಜೀವ್ ಬಹ್ಲ್, ಭಾರತ ಸರ್ಕಾರದ ಕಾರ್ಯದರ್ಶಿ, ಆರೋಗ್ಯ ಸಂಶೋಧನಾ ಇಲಾಖೆ ಮತ್ತು ಮಹಾನಿರ್ದೇಶಕರು, ಇಂಡಿಯನ್ ಕೌನ್ಸಿಲ್ ಆಫ್ ಮೆಡಿಕಲ್ ರಿಸರ್ಚ್ (ಖಅಒಖ) ಭಾಗವಹಿಸಲಿದ್ದಾರೆ. ಮೂರು ದಿನಗಳ ಘಟಿಕೋತ್ಸವ ಸಮಾರಂಭದಲ್ಲಿ 5767 ಮಾಹೆ ವಿದ್ಯಾರ್ಥಿಗಳಿಗೆ ಪದವಿ ನೀಡಲಾಗುತ್ತಿದೆ.

ವಿಶ್ವವಿದ್ಯಾನಿಲಯದ ಪ್ರತಿನಿಧಿಗಳಲ್ಲಿ ಶ್ರೀಮತಿ ವಸಂತಿ ಆರ್ ಪೈ, ಟ್ರಸ್ಟಿ, ಮಾಹೆ ಟ್ರಸ್ಟ್; ಡಾ ಎಚ್ ಎಸ್ ಬಲ್ಲಾಳ್, ಸಹ ಕುಲಾಧಿಪತಿ ; ಲೆಫ್ಟಿನೆಂಟ್ ಜನರಲ್ (ಡಾ) ಎಂ ಡಿ ವೆಂಕಟೇಶ್, ವಿಎಸ್‌ಎಂ (ನಿವೃತ್ತ), ಉಪಕುಲಪತಿ; ಡಾ ನಾರಾಯಣ ಸಭಾಹಿತ್, ಸಹ ಉಪ ಕುಲಪತಿ (ತಂತ್ರಜ್ಞಾನ ಮತ್ತು ವಿಜ್ಞಾನ); ಡಾ ಶರತ್ ಕೆ ರಾವ್, ಸಹ ಉಪ ಕುಲಪತಿ (ಆರೋಗ್ಯ ವಿಜ್ಞಾನ); ಡಾ ದಿಲೀಪ್ ಜಿ ನಾಯಕ್, ಸಹ ಉಪ ಕುಲಪತಿ ; ಡಾ ಪಿ ಗಿರಿಧರ್ ಕಿಣಿ, ಕುಲಸಚಿವರು ; ಮತ್ತು ಡಾ ವಿನೋದ್ ವಿ ಥಾಮಸ್, ಕುಲಸಚಿವರು ಮೌಲ್ಯಮಾಪನ ((ಪರೀಕ್ಷಾಂಗ) ಮತ್ತು ಅವರ ಜೊತೆ ಎಲ್ಲಾ ಮಾಹೆ ಸಂಸ್ಥೆಗಳ ಮುಖ್ಯಸ್ಥರು ಹಾಜರಿದ್ದರು.

ಘಟಿಕೋತ್ಸವದ 2ನೇ ದಿನದಂದು ವಿದ್ಯಾರ್ಥಿಗಳು ಮತ್ತು ಅತಿಥಿಗಳನ್ನು ಉದ್ದೇಶಿಸಿ ಮಾತನಾಡಿದ ನವದೆಹಲಿಯ ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ರೊಬೊಟಿಕ್ಸ್ ಮತ್ತು ಆರ್ಟಿಫಿಶಿಯಲ್ ಇಂಟೆಲಿಜೆನ್ಸ್ (ನೀರಾ) ಮಹಾನಿರ್ದೇಶಕ ಡಾ. ಇಂದ್ರಜಿತ್ ಭಟ್ಟಾಚಾರ್ಯ, ''ಐವತ್ತು ವರ್ಷಗಳ ಹಿಂದೆ ಬದಲಾವಣೆಯನ್ನು ಪ್ರತಿಬಿಂಬಿಸುತ್ತಾ, ನಾನು ಬಯಸಿದ್ದೆ , ಸಾಧಾರಣ ಸ್ಥಳೀಯ ಮಾರುಕಟ್ಟೆಗಳ ರೂಪಾಂತರ-ಮತ್ತು ಇಂದು, ಅಮೆಜಾನ್ ಮತ್ತು ಸ್ವಿಗ್ಗಿ ನಂತಹ ಕೃತಕ ಬುದ್ಧಿಮತ್ತೆ - ಚಾಲಿತ ಪ್ಲಾಟ್‌ಫಾರ್ಮ್‌ಗಳು ಅವುಗಳನ್ನು ಹೊಸ ಎತ್ತರಕ್ಕೆ ಕೊಂಡೊಯ್ಯುತ್ತವೆ. ತಾಂತ್ರಿಕ ವಿಕಾಸದ ಪ್ರಯಾಣವು ಕೈಗಾರಿಕಾ ಕ್ರಾಂತಿಗಳನ್ನು ಪ್ರತಿಬಿಂಬಿಸುತ್ತದೆ, ಸ್ಟೀಮ್ ಇಂಜಿನ್‌ಗಳಿಂದ ಸೈಬರ್-ಭೌತಿಕ ವ್ಯವಸ್ಥೆಗಳವರೆಗೆ. ಈಗ, ಕೃತಕ ಬುದ್ಧಿಮತ್ತೆ ಬೆಂಕಿಯಂತೆಯೇ ಪರಿವರ್ತಕ ಶಕ್ತಿಯನ್ನು ಹೊಂದಿದೆ, ಜಾಗತಿಕ ಆರ್ಥಿಕತೆಗೆ 15 ಟ್ರಿಲಿಯನ್ ಸೇರಿಸಲು ಮತ್ತು 2030 ರ ವೇಳೆಗೆ ಲಕ್ಷಾಂತರ ಉದ್ಯೋಗಗಳನ್ನು ಸೃಷ್ಟಿಸಲು ಹೊಂದಿಸಲಾಗಿದೆ. ನಮ್ಮ ಆಲೋಚನೆ ಸ್ಪಷ್ಟವಾಗಿದೆ: ಕೃತಕ ಬುದ್ಧಿಮತ್ತೆ ನಿಮ್ಮ ಕೆಲಸವನ್ನು ತೆಗೆದುಕೊಳ್ಳುವುದಿಲ್ಲ, ಆದರೆ ನೀವು ಮತ್ತು ನಿಮ್ಮ ತಂಡ ಉತ್ಪಾದಕತೆ ಹೆಚ್ಚಿಸಲು ಸುಧಾರಿತ ಕೃತಕ ಬುದ್ಧಿಮತ್ತೆಅನ್ನು ಸ್ವೀಕರಿಸಬಹುದು.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಅನಿರೀಕ್ಷಿತ ಧನ ಲಾಭ, ವಿದ್ಯಾರ್ಥಿಗಳಲ್ಲಿ ಪ್ರಗತಿ, ಮನಶಾಂತಿ, ಮಾತಿನಿಂದ ಕಲಹ.

**ವೃಷಭ:** ಕುತಂತ್ರದಿಂದ ಹಣ ಸಂಪಾದನೆ, ಮೂಗಿನ ಮೇಲೆ ಕೋಪ, ವ್ಯಾಪಾರ ವ್ಯವಹಾರಗಳಲ್ಲಿ ಏರುಪೇರು.

**ಮಿಥುನ:** ಗುರುಗಳಿಂದ ಬೋಧನೆ, ವಾಹನ ಯೋಗ, ಹಿತ ಶತ್ರುಗಳಿಂದ ದೂರವಿರಿ, ಧನ ಲಾಭ.

**ಕಟಕ:** ಸ್ವಲ್ಪ ಹಣ ಬಂದರೂ ಉಳಿಯುವುದಿಲ್ಲ, ವಿದ್ಯಾಭ್ಯಾಸದಲ್ಲಿ ಆಸಕ್ತಿ, ಶತ್ರು ನಾಶ, ಅನಾರೋಗ್ಯ, ಮಿತ್ರರ ಭೇಟಿ.

**ಸಿಂಹ:** ಸ್ತ್ರೀಯರಿಗೆ ವಸ್ತ್ರಾಭರಣ ಪ್ರಾಪ್ತಿ, ದೃಷ್ಟಿ ದೋಷ, ಅಲ್ಪ ಕಾರ್ಯಸಿದ್ಧಿ, ಚೋರ ಭಯ, ವಿನಾಕಾರಣ ಅನ್ಯರನ್ನ ದ್ವೇಷಿಸುವಿರಿ.

**ಕನ್ಯಾ:** ಮಾತಿನ ಚಕಮಕಿ, ಸಹಕಾರ ಸಿಕ್ಕರೆ ಉನ್ನತ ಮಟ್ಟಕ್ಕೇರುವಿರಿ, ತಾಳ್ಮೆಯಿಂದ ಇರಿ.

**ತುಲಾ:** ಎಲ್ಲರ ಮನಸ್ಸನ್ನು ಗೆಲ್ಲುವಿರಿ, ಬಾಕಿ ಹಣ ಕೈಸೇರುವುದು, ರಾಜ ವಿರೋಧ, ನಾನಾ ವಿಚಾರಗಳಲ್ಲಿ ಆಸಕ್ತಿ.

**ವೃಶ್ಚಿಕ:** ನಿಮ್ಮ ಸೋಲಿಗೆ ಇನ್ನೊಬ್ಬರನ್ನ ದೂರುವಿರಿ, ಮನಕ್ಲೇಶ, ಪರರ ಕಷ್ಟಕ್ಕೆ ಸ್ಪಂದಿಸುವಿರಿ.

**ಧನಸ್ಸು:** ಕಾರ್ಯಕ್ಷೇತ್ರದಲ್ಲಿ ಪ್ರಗತಿ, ನಿರೀಕ್ಷಿತ ಫಲ, ಅನಾವಶ್ಯಕ ಮಾತುಗಳಿಂದ ದೂರವಿರಿ, ಕೆಲಸ ಕಾರ್ಯಗಳಲ್ಲಿ ಜಯ.

**ಮಕರ:** ವಿಪರೀತ ವ್ಯಸನ, ಶರೀರದಲ್ಲಿ ತಳಮಳ, ಪತ್ರ ವ್ಯವಹಾರಗಳಲ್ಲಿ ಮೋಸ, ಹಿತೈಷಿಗಳಿಂದ ಬೆಂಬಲ, ಅನಗತ್ಯ ಖರ್ಚು, ರೋಗಭಾದೆ.

**ಕುಂಭ:** ಸಾಲ ಮಾಡುವ ಸಾಧ್ಯತೆ, ವಿವಾಹಕ್ಕೆ ಅಡಚಣೆ, ವ್ಯಾಸಂಗಕ್ಕೆ ತೊಂದರೆ, ಯೋಚಿಸಿ ಕೆಲಸ ಮಾಡುವುದು ಉತ್ತಮ.

**ಮೀನ:** ಕುಟುಂಬ ಸೌಖ್ಯ, ಸ್ನೇಹಿತರೊಡನೆ ವ್ಯವಹಾರದ ಮಾತುಕತೆ, ದ್ರವ್ಯ ಲಾಭ, ಖರ್ಚು ವೆಚ್ಚಗಳಲ್ಲಿ ಹಿಡಿತವಿರಲಿ.

## ವಿಶ್ವವಿಜ್ಞಾನದಿನ




ನವೆಂಬರ್ 11 ರಂದು ಆಚರಿಸಲಾಗುವ ವಿಶ್ವ ಅನಾಥರ ದಿನವು ಅಮೆರಿಕನ್ನರು ಒಟ್ಟಾಗಿ ಸೇರಲು ಮತ್ತು ತಮ್ಮ ಸಮುದಾಯದಲ್ಲಿ ಅನಾಥರ ಬಗ್ಗೆ ಕಾಳಜಿ ವಹಿಸುತ್ತದೆ ಎಂದು ತೋರಿಸಲು ಪ್ರಮುಖ ದಿನಾಂಕವಾಗಿದೆ. ಲಕ್ಷಾಂತರ ಚಿಕ್ಕ ಮಕ್ಕಳು ಸಮಸ್ಯೆಗಳನ್ನು ಎದುರಿಸುತ್ತಾರೆ ಏಕೆಂದರೆ ಅವರ ಹೆತ್ತವರಲ್ಲಿ ಒಬ್ಬರು ಅಥವಾ ಇಬ್ಬರೂ ಈ ಜಗತ್ತಿನಲ್ಲಿ ಇಲ್ಲ. ಸಮುದಾಯವು ಅವರ ಶಿಕ್ಷಣ, ಆರೋಗ್ಯ, ವಸತಿ, ಆಹಾರ ಮತ್ತು ಸಾಮಾಜಿಕ ಯೋಗಕ್ಷೇಮಕ್ಕಾಗಿ ವ್ಯವಸ್ಥೆ ಮಾಡುವುದು ಮುಖ್ಯವಾಗಿದೆ. ವಿಶ್ವ ಅನಾಥರ ದಿನವು ಒಳ್ಳೆಯ ಉದ್ದೇಶ ಮತ್ತು ಸಾಮಾಜಿಕವಾಗಿ ಜವಾಬ್ದಾರಿಯುತ ಅಮೇರಿಕನ್ನರಿಗೆ ತಮ್ಮ ಅಗತ್ಯದ ಸಮಯದಲ್ಲಿ ಅನಾಥರೊಂದಿಗೆ ನಿಲ್ಲುವುದನ್ನು ತೋರಿಸಲು ಪರಿಪೂರ್ಣ ಅವಕಾಶವಾಗಿದೆ.

ವಿಶ್ವದ ಮೊದಲ ಅನಾಥಾಶ್ರಮವನ್ನು ರೋಮನ್ನರು 400 ಂಆ ಯಲ್ಲಿ ಸ್ಥಾಪಿಸಿದರು, ಅನಾಥಾಶ್ರಮವನ್ನು ತೆರೆಯಲು ಮುಖ್ಯ ಕಾರಣವೆಂದರೆ ತಮ್ಮ ಪೋಷಕರನ್ನು ಕಳೆದುಕೊಂಡಿರುವ ಮತ್ತು ಅವರನ್ನು ನೋಡಿಕೊಳ್ಳಲು ಯಾವುದೇ ಆರೈಕೆದಾರರನ್ನು ಹೊಂದಿಲ್ಲದ ಮಕ್ಕಳಿಗೆ ಆಹಾರ, ಆಶ್ರಯ ಮತ್ತು ಇತರ ಆರೋಗ್ಯ ರಕ್ಷಣೆಯ ಅಗತ್ಯತೆಗಳನ್ನು ಒದಗಿಸುವುದು.

ಅನಾಥ ಮಕ್ಕಳನ್ನು ನೋಡಿಕೊಳ್ಳುವ ಆಲೋಚನೆ ಹೊಸದಲ್ಲ. ಗ್ರೀಕ್ ಕಾನೂನು ವ್ಯವಸ್ಥೆಯು ಅನಾಥರಿಗೆ 18 ವರ್ಷದವರೆಗೆ ಹಣಕಾಸಿನ ನೆರವು ನೀಡುವುದನ್ನು ಕಡ್ಡಾಯಗೊಳಿಸಿದೆ. ಮಧ್ಯಯುಗದಲ್ಲಿ ಚರ್ಚುಗಳು ಮಕ್ಕಳಿಗಾಗಿ ಆಶ್ರಯ ಮತ್ತು ಅನಾಥಾಶ್ರಮಗಳನ್ನು ಸ್ಥಾಪಿಸಿದವು.

1900 ರ ದಶಕದಲ್ಲಿ, ಇಂಗ್ಲೆಂಡಿನಲ್ಲಿ ಅನಾಥರ ಜೀವನ ಪರಿಸ್ಥಿತಿಗಳು ಹದಗೆಟ್ಟವು. ಆರೈಕೆ ಸೌಲಭ್ಯಗಳಲ್ಲಿ ಆಹಾರ ಮತ್ತು ಸರಿಯಾದ ವೈದ್ಯಕೀಯ ಆರೈಕೆಯ ಕೊರತೆಯಿಂದಾಗಿ ಅನೇಕ ಮಕ್ಕಳು ಅಪೌಷ್ಟಿಕತೆಯಿಂದ ಬಳಲುತ್ತಿದ್ದಾರೆ. ಶೀಘ್ರದಲ್ಲೇ, ಅನಾಥಾಶ್ರಮಗಳು ಅನಾಥರಿಗೆ ಅಗತ್ಯವಾದ ಕಾಳಜಿ ಮತ್ತು ಗಮನವನ್ನು ನೀಡದಿದ್ದಕ್ಕಾಗಿ ಕೆಟ್ಟ ಖ್ಯಾತಿಯನ್ನು ಗಳಿಸಿದವು. ಈ ಕಾರಣದಿಂದಾಗಿ, ಪಾಶ್ಚಿಮಾತ್ಯ ದೇಶಗಳಲ್ಲಿನ ಜನರು ಅನಾಥ ಮಕ್ಕಳನ್ನು ಕಾನೂನುಬದ್ಧವಾಗಿ ದತ್ತು ಪಡೆಯಲು ಅವರಿಗೆ ಉತ್ತಮ ಭವಿಷ್ಯವನ್ನು ಒದಗಿಸಲು ಮತ್ತು ಅವರ ಆರೋಗ್ಯ ಮತ್ತು ಶಿಕ್ಷಣದ ಬಗ್ಗೆ ಕಾಳಜಿ ವಹಿಸಲು ಪ್ರೋತ್ಸಾಹಿಸಲಾಯಿತು.

2006 ರಲ್ಲಿ, ಸ್ಟಾರ್ಸ್ ಫೌಂಡೇಶನ್ - ನಿಧಿಯನ್ನು ಸಂಗ್ರಹಿಸುವ ಮತ್ತು ಬಡತನ, ಯುದ್ಧ, ಏಡ್ಸ್ ಮತ್ತು ನೈಸರ್ಗಿಕ ವಿಪತ್ತುಗಳಿಂದ ಅನಾಥವಾಗಿರುವ ಅಥವಾ ಸ್ಥಳಾಂತರಗೊಂಡ ಮಕ್ಕಳ ಬಗ್ಗೆ ತಿಳುವಳಿಕೆಯನ್ನು ಮೂಡಿಸುವ ಮನರಂಜನಾ ಸಂಸ್ಥೆ - ಮೊದಲ ವಿಶ್ವ ಅನಾಥರ ದಿನವನ್ನು ಆಚರಿಸಿತು. ಪ್ರಪಂಚದಾದ್ಯಂತ ಅನಾಥರ ಪ್ರಸ್ತುತ ಪರಿಸ್ಥಿತಿಯ ಬಗ್ಗೆ ಜಾಗೃತಿ ಮೂಡಿಸುವುದು ಮುಖ್ಯ ಆಲೋಚನೆಯಾಗಿದೆ.

# ಜಮ್ಮು ಕಾಶ್ಮೀರದಲ್ಲಿ ಎನ್‌ಕೌಂಟರ್; ಸೇನಾಧಿಕಾರಿ ಹುತಾತ್ಮ

**ಶ್ರೀನಗರ:** ಜಮ್ಮು ಮತ್ತು ಕಾಶ್ಮೀರ ದ ಕಿಶ್ತ್ವಾರ್ ಜಿಲ್ಲೆಯಲ್ಲಿ ನ. 10ರಂದು ಭಯೋತ್ಪಾದಕರೊಂದಿಗೆ ನಡೆದ ಗುಂಡಿನ ಚಕಮಕಿಯಲ್ಲಿ ಸೇನಾಧಿಕಾರಿಯೊಬ್ಬರು ಹುತಾತ್ಮರಾಗಿದ್ದು, ಮೂವರು ಸೈನಿಕರು ಗಾಯಗೊಂಡಿದ್ದಾರೆ. ಕಿಶ್ತ್ವಾರ್‌ನ ಭರ್ತ್ ರಿಡ್ಜ್‌ನಲ್ಲಿ ನಡೆದ ಜಂಟಿ ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಯಲ್ಲಿ ಜೂನಿಯರ್ ಕಮಿಷನ್ಡ್ ಆಫೀಸರ್ ನೈಬ್ ಸುಬೇದಾರ್ ರಾಕೇಶ್ ಕುಮಾರ್ ಹುತಾತ್ಮರಾಗಿದ್ದಾರೆ ಎಂದು ಸೇನೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದೆ

ರಾಕೇಶ್ ಕುಮಾರ್ ಅವರು 2 ಪ್ಯಾರಾ (ಎಸ್‌ಎಫ್)ಗೆ ಸೇರಿದವರು. ಕಾರ್ಯಾಚರಣೆ ಮುಂದುವರಿದಿದ್ದು, 3-4 ಉಗ್ರರು ಅವಿತಿದ್ದಾರೆ ಎನ್ನಲಾಗಿದೆ. ಹೆಚ್ಚಿನ ಮಾಹಿತಿ ನಿರೀಕ್ಷಿಸಲಾಗುತ್ತಿದೆ.

ಕಿಶ್ತ್ವಾರ್ ಜಿಲ್ಲೆಯ ಮುಂಜ್ಲಾ ಧಾರ್‌ನಲ್ಲಿ ಗುರುವಾರ (ನ. 7) ಭಯೋತ್ಪಾದಕರು ಇಬ್ಬರು ವಿಲೇಜ್ ಡಿಫೆನ್ಸ್ ಗಾರ್ಡ್‌ಗಳನ್ನು ಹತ್ಯೆ ಮಾಡಿದ್ದರು. ಓಹ್ಲಿ-ಕುಂಟ್ವಾರಾ ಗ್ರಾಮದ ನಿವಾಸಿಗಳಾದ 45 ವರ್ಷದ ನಜೀರ್ ಅಹ್ಮದ್ ಮತ್ತು 33 ವರ್ಷದ ಕುಲದೀಪ್ ಕುಮಾರ್ ಮೃತರು. ಈ ಹಿನ್ನೆಲೆಯಲ್ಲಿ ಗುರುವಾರವೇ ಭದ್ರತಾ



ಪಡೆ ಭಯೋತ್ಪಾದಕರ ನಿಗ್ರಹಕ್ಕೆ ಕಾರ್ಯಾಚರಣೆ ಆರಂಭಿಸಿತ್ತು. ವಿಡಿಜಿಗಳ ಮೃತದೇಹ ಪತ್ತೆಯಾದ ಸ್ಥಳದಿಂದ ಕೆಲವು ಕಿ.ಮೀ. ದೂರದ ಕಾಡಿನಲ್ಲಿ ಸೇನೆ ಮತ್ತು ಪೊಲೀಸರು ಜಂಟಿಯಾಗಿ ಶೋಧ ಕಾರ್ಯ ನಡೆಸುತ್ತಿದ್ದ ಭಯೋತ್ಪಾದಕರು ಗುಂಡಿನ ದಾಳಿ ನಡೆಸಿದ್ದರು. ಈ ವೇಳೆ ರಾಕೇಶ್ ಕುಮಾರ್ ಹುತಾತ್ಮರಾಗಿದ್ದಾರೆ.

# ಮಹಾರಾಷ್ಟ್ರದಲ್ಲಿಯೂ ಐದು ಗ್ಯಾರೆಂಟಿ ಘೋಷಣೆ - ಪ್ರಣಾಳಿಕೆ ಬಿಡುಗಡೆ ಮಾಡಿದ ಖರ್ಗೆ

**ಮಹಾರಾಷ್ಟ್ರ :** ಕಾಂಗ್ರೆಸ್ ನ ಪ್ರಣಾಳಿಕೆಯಿಂದ ಮಹಾರಾಷ್ಟ್ರದ ಕಲ್ಯಾಣಕ್ಕೆ ಸಹಕಾರಿಯಾಗುತ್ತದೆ ಎಂದು ಕಾಂಗ್ರೆಸ್ ಪಕ್ಷದ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದರು.



ಈ ಬಗ್ಗೆ ಮಹಾರಾಷ್ಟ್ರದಲ್ಲಿ ಮಾತನಾಡಿದ ಅವರು, ಮ್ಮ 5 ಭರವಸೆಗಳು ಮಹಾರಾಷ್ಟ್ರದ ಎಲ್ಲರ ಕಲ್ಯಾಣಕ್ಕೆ ಸಹಕಾರಿಯಾಗುತ್ತವೆ. ಪ್ರತಿ ಕುಟುಂಬಕ್ಕೂ ವಾರ್ಷಿಕ ಸುಮಾರು ನೆರವು ಸಿಗುತ್ತದೆ ಎಂದು ಹೇಳಿದರು.ನಮ್ಮ ಮಹಾಲಕ್ಷ್ಮಿ ಯೋಜನೆಯಲ್ಲಿ ಎಲ್ಲಾ ಮಹಿಳೆಯರಿಗೆ ಆರ್ಥಿಕ ನೆರವು ನೀಡಲಾಗುವುದು, ಪ್ರತಿ ತಿಂಗಳು ತಲಾ 3000 ರೂ.ಗಳನ್ನು ನೀಡಲಾಗುವುದು ಈ ಮೂಲಕ ರಾಜ್ಯದಲ್ಲಿ ಮಹಿಳೆಯರು ಸ್ವಾವಲಂಬಿಯಾಗಿ ಬದುಕು ಸಾಗಿಸಬಹುದು ಎಂದು ಮಲ್ಲಿಕಾರ್ಜುನ್ ಖರ್ಗೆ ಹೇಳಿದರು.ಕರ್ನಾಟಕದಂತೆ ಇಲ್ಲಿ ಕೂಡ ಮಹಿಳೆಯರಿಗೆ ಉಚಿತ ಬಸ್ ಸೇವೆಯನ್ನು ಆರಂಭಿಸಲಿದ್ದು, ಈ ಮೂಲಕ ಮಹಿಳೆಯರು ಪುಣ್ಯ ಕ್ಷೇತ್ರ ಸೇರಿದಂತೆ ಎಲ್ಲಾದರೂ ಉಚಿತವಾಗಿ ಹೋಗಿ ಬರಬಹುದು. ಜೊತೆಗೆ ರೈತರಿಗೆ ಸಕಾಲದಲ್ಲಿ ಸಾಲ ಮರುಪಾವತಿ ಮಾಡುವ ರೈತರಿಗೆ ತಲಾ 50000 ರೂ. ನೀಡಲು ಯೋಜನೆ ಅನುಷ್ಠಾನಕ್ಕೆ ತರಲು ಮುಂದಾಗಿದ್ದೇವೆ ಎಂದು ಖರ್ಗೆ ಹೇಳಿದರು.

# ಬಾಂಗ್ಲಾ ಹಂಗಾಮಿ ಪ್ರಧಾನಿ ವಿರುದ್ಧ ದೂರು!



**ಢಾಕಾ:** ಬಾಂಗ್ಲಾದೇಶದ ಹಂಗಾಮಿ ಪ್ರಧಾನಿ ಮುಹಮ್ಮದ್ ಯೂನಸ್ ವಿರುದ್ಧ ಇಂಟರ್‌ನ್ಯಾಷನಲ್ ಕ್ರಿಮಿನಲ್ ಕೋರ್ಟ್‌ನಲ್ಲಿ ನರಮೇಧದ ದೂರು ದಾಖಲಿಸಲಾಗಿದೆ. ಅವಾಮಿ ಲೀಗ್ ಮತ್ತು ಬಾಂಗ್ಲಾದೇಶದ ಮಧ್ಯಂತರ ಸರ್ಕಾರದ ನಡುವೆ ನಡೆಯುತ್ತಿರುವ ಉದ್ವಿಗ್ನತೆಯ ನಡುವೆ ಶೇಖ್ ಹಸೀನಾ ಅವರ ಪಕ್ಷದ ನಾಯಕರೊಬ್ಬರಾದ ಸಿಲ್ಹೆಟ್ನ ಮಾಜಿ ಮೇಯರ್ ಅನ್ವಾರುಜ್ಜಮಾನ್ ಚೌಧರಿ ಎನ್ನುವವರು ಮುಹಮ್ಮದ್ ಯೂನಸ್ ಹಾಗೂ 61 ಜನರ ವಿರುದ್ಧ ವಿರುದ್ಧ ಅಂತಾರಾಷ್ಟ್ರೀಯ ಕ್ರಿಮಿನಲ್ ನ್ಯಾಯಾಲಯದಲ್ಲಿ ದೂರು ದಾಖಲಿಸಿದ್ದಾರೆ. ಈ 62 ಆರೋಪಿಗಳಲ್ಲಿ ಯೂನಸ್ ಅವರ ಕ್ಯಾಬಿನೆಟ್ನ ಎಲ್ಲಾ ಸದಸ್ಯರು ಮತ್ತು ತಾರತಮ್ಯ ವಿರೋಧಿ ಒಕ್ಕೂಟದ ವಿದ್ಯಾರ್ಥಿ ನಾಯಕರು ಸೇರಿದ್ದಾರೆ. ಶೇಖ್ ಹಸೀನಾ ಅವರ ಸರ್ಕಾರದ ಪತನದ ನಂತರ ಅವಾಮಿ ಲೀಗ್ನ ಕಾರ್ಯಕರ್ತರು ದೇಶದಲ್ಲಿ ಹತ್ಯಾಕಾಂಡಕ್ಕೆ ಬಲಿಯಾಗಿದ್ದಾರೆ ಎಂದು ಚೌಧರಿ ಆರೋಪಿಸಿದ್ದಾರೆ. ಮೊಹಮ್ಮದ್ ಯೂನಸ್ ವಿರುದ್ಧ ಬಾಂಗ್ಲಾದೇಶದಲ್ಲಿ ಹಿಂದೂಗಳು, ಕ್ರಿಶ್ಚಿಯನ್ನರು, ಬೌದ್ಧರು ಕಾನೂನು ಜಾರಿ ಸಂಸ್ಥೆಗಳು ಮತ್ತು ಅವಾಮಿ ಲೀಗ್ನ ಸದಸ್ಯರ ಮೇಲೆ ದೌರ್ಜನ್ಯ ಮತ್ತು ಜನಾಂಗೀಯ ಹತ್ಯೆಯ ಆರೋಪಗಳಿವೆ.

# ಬಾಬಾ ಸಿದಿಕಿ ಮೇಲೆ ಗುಂಡು ಹಾರಿಸಿದ ಆರೋಪಿ ಅರೆಸ್ಟ್..!

**ಮುಂಬೈ:** ಎನ್ಸಿಪಿ ನಾಯಕ ಬಾಬಾ ಸಿದ್ದಿಕಿ ಮೇಲೆ ಗುಂಡು ಹಾರಿಸಿದ್ದ ಶೂಟರ್ ಶಿವಕುಮಾರ್ ಕೊನೆಗೂ ಸಿಕ್ಕಿಬಿದ್ದಿದ್ದಾನೆ. ಉತ್ತರಪ್ರದೇಶ ಎಸ್ಟಿಎಫ್ ಮತ್ತು ಮುಂಬೈ ಅಪರಾಧ ವಿಭಾಗ ಜಂಟಿ ಕಾರ್ಯಾಚರಣೆಯಲ್ಲಿ ಬಹ್ರೈಚ್‌ನಲ್ಲಿ ಶಿವಕುಮಾರ್‌ನನ್ನು ಬಂಧಿಸಲಾಗಿದೆ. ಪೊಲೀಸರ ಪ್ರಕಾರ, ಶಿವಕುಮಾರ್ ಬಹ್ರೈಚ್ ಗಡಿಯಿಂದ ನೇಪಾಳಕ್ಕೆ ತಪ್ಪಿಸಿಕೊಳ್ಳಲು ಯೋಜಿಸಿದ್ದನು. ಶಿವಕುಮಾರ್ ಗೆ ಆಶ್ರಯ ನೀಡಿ ನೇಪಾಳಕ್ಕೆ ಪರಾರಿಯಾಗಲು ಸಹಾಯ ಮಾಡಿದ್ದಕ್ಕಾಗಿ ಅನುರಾಗ್ ಕಶ್ಯಪ್, ಜ್ಞಾನ್ ಪ್ರಕಾಶ್ ತ್ರಿಪಾಠಿ, ಆಕಾಶ್ ಶ್ರೀವಾಸ್ತವ, ಅಖಿಲೇಂದ್ರ ಪ್ರತಾಪ್ ಸಿಂಗ್ ಅವರನ್ನು ಕೂಡ ಬಂಧಿಸಲಾಗಿದೆ. ಎಲ್ಲರೂ ಸ್ನೇಹಿತರಾಗಿದ್ದು, ಒಂದೇ ಗ್ರಾಮದ ಗಂದಾರ ನಿವಾಸಿಗಳು ಎನ್ನಲಾಗಿದೆ.



# ಅಫ್ಘಾನ್ ರಕ್ಷಣಾ ಸಚಿವರನ್ನು ಭೇಟಿಯಾದ ಭಾರತೀಯ ನಿಯೋಗ



**ಕಾಬೂಲ್:** ಮಹತ್ವದ ನಡೆಯೊಂದರಲ್ಲಿ ಭಾರತದ ನಿಯೋಗವು ಶನಿವಾರ ಅಫ್ಘಾನಿಸ್ತಾನದ ಹಂಗಾಮಿ ರಕ್ಷಣಾ ಸಚಿವ ಮುಲ್ಲಾ ಮುಹಮ್ಮದ್ ಯಾಕೂಬ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದೆ.

ಇರಾನ್ ನಲ್ಲಿ ತಾನು ಅಭಿವೃದ್ಧಿಪಡಿಸುತ್ತಿರುವ ಚಬಹಾರ್ ಬಂದರನ್ನು ಬಳಸಿಕೊಳ್ಳುವಂತೆ ಆಹ್ವಾನ ನೀಡಿದೆ.

ಅಲ್ಲದೆ ಅಫ್ಘಾನಿಸ್ತಾನಕ್ಕೆ ತಾನು ನೀಡುತ್ತಿರುವ ಮಾನವೀಯ ನೆರವನ್ನು ವಿಸ್ತರಿಸುವ ಬಗ್ಗೆಯೂ ಚರ್ಚಿಸಿದೆ.

ಭಾರತೀಯ ನಿಯೋಗದ ನೇತೃತ್ವವನ್ನು ಪಾಕಿಸ್ತಾನ -ಅಮೇರಿಕ - ಇರಾನ್ ವಿಭಾಗದ ಜಂಟಿ ಕಾರ್ಯದರ್ಶಿ ಜೆ.ಪಿ.ಸಿಂಗ್ ವಹಿಸಿದ್ದರು. ಅಫ್ಘಾನಿಸ್ತಾನದ ಮಾಜಿ ಅಧ್ಯಕ್ಷ ಹಾಮಿದ್ ಕರ್ಝಾಯಿ ಹಾಗೂ ಇತರ ಹಿರಿಯ ನಾಯಕರನ್ನು ಮತ್ತು ಅಫ್ಘಾನ್ ನಲ್ಲಿ ಕಾರ್ಯಾಚರಿಸುತ್ತಿರುವ ವಿಶ್ವಸಂಸ್ಥೆ ಏಜೆನ್ಸಿಗಳ ಮುಖ್ಯಸ್ಥರನ್ನು ಕೂಡಾ ಭಾರತೀಯ ನಿಯೋಗ ಭೇಟಿಯಾಗಿರುವುದಾಗಿ ವಿದೇಶಾಂಗ ವ್ಯವಹಾರಗಳ ವಕ್ತಾರ ರಣಧೀರ್ ಜೈಸ್ವಾಲ್ ತಿಳಿಸಿದ್ದಾರೆ.

2021ರಿಂದ ಅಫ್ಘಾನಿಸ್ತಾನದ ಆಡಳಿತ ನಡೆಸುತ್ತಿರುವ ತಾಲಿಬಾನ್ ಸರಕಾರಕ್ಕೆ ಭಾರತವು ಮಾನ್ಯತೆಯನ್ನು ನೀಡಿಲ್ಲ. ಆದರೆ ಆ ದೇಶದ ಜನತೆಗೆ ಭಾರತವು ಗೋಧಿ, ಔಷಧಿಗಳು, ವೈದ್ಯಕೀಯ ಸಾಮಾಗ್ರಿಗಳು ಸೇರಿದಂತೆ ಮಾನವೀಯ ನೆರವನ್ನು ಒದಗಿಸುತ್ತಾ ಬಂದಿದೆ.

ಚಬಹಾರ್ ಬಂದರನ್ನು ಅಭಿವೃದ್ಧಿಪಡಿಸಲು ಹಾಗೂ ನಿರ್ವಹಿಸುವ ಕುರಿತಾಗಿ ಈ ವರ್ಷದ ಆರಂಭದಲ್ಲಿ ಭಾರತವು ಇರಾನ್ ಜೊತೆ ಒಪ್ಪಂದವನ್ನು ಏರ್ಪಡಿಸಿಕೊಂಡಿತ್ತು.

# ಉಕ್ರೇನ್ ಯುದ್ಧವನ್ನು ಉಲ್ಬಣಗೊಳಿಸದಂತೆ ರಷ್ಯಾ ಅಧ್ಯಕ್ಷ ಪುಟಿನ್‌ಗೆ ಟ್ರಂಪ್ ಸಲಹೆ

ಅಮೆರಿಕ ಅಧ್ಯಕ್ಷೀಯ ಚುನಾವಣೆಯಲ್ಲಿ ಗೆಲುವು ಸಾಧಿಸಿರುವ ಡೊನಾಲ್ಡ್ ಟ್ರಂಪ್, ಉಕ್ರೇನ್ ಯುದ್ಧವನ್ನು ಉಲ್ಬಣಗೊಳಿಸದಂತೆ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್‌ಗೆ ಸಲಹೆ ನೀಡಿದ್ದಾರೆ. ಅಮೆರಿಕದ ನೂತನ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರೊಂದಿಗೆ ದೂರವಾಣಿಯಲ್ಲಿ ಮಾತನಾಡಿದರು. ಈ ಸಮಯದಲ್ಲಿ, ಉಕ್ರೇನ್ ಯುದ್ಧವನ್ನು ಕೊನೆಗೊಳಿಸುವ ಬಗ್ಗೆ ಇಬ್ಬರ ನಡುವೆ ಚರ್ಚೆ ನಡೆಯಿತು. ಇದರೊಂದಿಗೆ ಟ್ರಂಪ್ ಮತ್ತು ಪುಟಿನ್ ಹಲವು ಪ್ರಮುಖ ವಿಷಯಗಳ ಬಗ್ಗೆಯೂ ಮಾತನಾಡಿದ್ದಾರೆ. ಭಾನುವಾರ ಮಾಧ್ಯಮ ವರದಿಯಲ್ಲಿ ಈ ಹೇಳಿಕೆ ನೀಡಲಾಗಿದೆ.



ಇತ್ತೀಚಿನ ಅಧ್ಯಕ್ಷೀಯ ಚುನಾವಣೆಯಲ್ಲಿ ಗೆದ್ದ ನಂತರ, ಟ್ರಂಪ್ 70 ಕ್ಕೂ ಹೆಚ್ಚು ವಿಶ್ವ ನಾಯಕರೊಂದಿಗೆ ಮಾತನಾಡಿದ್ದಾರೆ. ಇವರಲ್ಲಿ ಭಾರತದ ಪ್ರಧಾನಿ ನರೇಂದ್ರ ಮೋದಿ ಮತ್ತು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಸೇರಿದ್ದಾರೆ. ಆದ್ದರಿಂದ ಕೆಲವು ದಿನಗಳ ಹಿಂದೆ ಅಮೆರಿಕದ ನೂತನ ಅಧ್ಯಕ್ಷರು ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅವರೊಂದಿಗೆ ಮಾತುಕತೆ ನಡೆಸಿದ್ದ ಸಂದರ್ಭದಲ್ಲಿ ಟ್ರಂಪ್ ಮತ್ತು ಪುಟಿನ್ ನಡುವಿನ ಸಂಭಾಷಣೆಯು ಮಹತ್ವದ್ದಾಗಿದೆ.

ಈ ಸಂವಾದದಲ್ಲಿ ಟ್ರಂಪ್ ಜೊತೆ ಎಲೋನ್ ಮಸ್ಕ್ ಕೂಡ ಉಪಸ್ಥಿತರಿದ್ದರು. ಅಮೆರಿಕದ ಆಕ್ಸಿಯೋಸ್ ಪೋರ್ಟಲ್‌ನ ಸುದ್ದಿ ವರದಿಯ ಪ್ರಕಾರ, ಉಕ್ರೇನ್ ವಿಷಯದ ಬಗ್ಗೆ ಎರಡು ಪ್ರಮುಖ ಘಟನೆಗಳು ನಡೆದಿವೆ, ಮೊದಲನೆಯದಾಗಿ, ಎಲೋನ್ ಮಸ್ಕ್ ಅವರು ಝೆಲೆನ್ಸ್ಕಿಯೊಂದಿಗೆ ಮಾತನಾಡಿದರು ಮತ್ತು ಎರಡನೆಯದಾಗಿ, ಈ ಸಂಭಾಷಣೆಯ ನಂತರ, ಝೆಲೆನ್ಸ್ಕಿ ಅವರು ಸಂಘರ್ಷಕ್ಕೆ ಸಂಬಂಧಿಸಿದಂತೆ ಕೆಲವು ವಿಷಯಗಳನ್ನು ವಿವರಿಸಿದರು.

ಅದೇ ವರದಿಯಲ್ಲಿ ಟ್ರಂಪ್, ಮಸ್ಕ್ ಮತ್ತು ಝೆಲೆನ್ಸ್ಕಿ ನಡುವೆ ಸುಮಾರು ಅರ್ಧ ಗಂಟೆ ದೂರವಾಣಿ ಸಂಭಾಷಣೆ ನಡೆದಿದೆ ಎಂದು ಹೇಳಲಾಗಿದೆ. ಡೊನಾಲ್ಡ್ ಟ್ರಂಪ್ ಅಮೆರಿಕದ ಅಧ್ಯಕ್ಷರಾಗಿ ಪ್ರಮಾಣ ವಚನ ಸ್ವೀಕರಿಸಲು ಇನ್ನೂ ಎರಡು ತಿಂಗಳುಗಳು ಉಳಿದಿವೆ.

ಇದಕ್ಕೂ ಮುನ್ನ ದೇಶ-ವಿದೇಶಗಳ ಸಮಸ್ಯೆಗಳನ್ನು ಇತ್ಯರ್ಥಪಡಿಸಲು ಸಿದ್ಧತೆ ಆರಂಭಿಸಿದ್ದಾರೆ.ಈ ನಿಟ್ಟಿನಲ್ಲಿ ರಷ್ಯಾ ಮತ್ತು ಉಕ್ರೇನ್ ನಡುವಿನ ಯುದ್ಧವನ್ನು ಕೊನೆಗೊಳಿಸುವುದು ಅವರ ಮೊದಲ ಆದ್ಯತೆಯಾಗಿದೆ. ಅಧ್ಯಕ್ಷರಾದ ನಂತರ ಯುದ್ಧಗಳನ್ನು ಪ್ರಾರಂಭಿಸುವುದಿಲ್ಲ, ಆದರೆ ಅವುಗಳನ್ನು ಕೊನೆಗೊಳಿಸುವುದಾಗಿ ಟ್ರಂಪ್ ಈಗಾಗಲೇ ಹೇಳಿದ್ದಾರೆ.

# ಕಳಂಕಿತರು ಬಿಜೆಪಿಗೆ ಸೇರ್ಪಡೆ ಬಗ್ಗೆ ಕೇಂದ್ರ ಸಚಿವ ನಿತಿನ್ ಗಡ್ಕರಿ ಕಳವಳ!



**ದೆಹಲಿ:** ಬಿಜೆಪಿ ಪಕ್ಷವನ್ನು ದೊಡ್ಡ ಮಟ್ಟದಲ್ಲಿ ಬೆಳೆಸಲು ಪಕ್ಷಾಂತರದ ಮೂಲಕ ಸೆಳೆಯಲಾಗುತ್ತಿದೆ. ಆದರೆ ಕಳಂಕಿತ ರಾಜಕಾರಣಿಗಳ ಸೇರ್ಪಡೆಯಿಂದ ಪಕ್ಷದ ವರ್ಚಸ್ಸು ಕುಂದುತ್ತಿದೆ ಎಂದು ಕೇಂದ್ರ ಸಚಿವ ನಿತಿನ್ ಗಡ್ಕರಿ ಕಳವಳ ವ್ಯಕ್ತಪಡಿಸಿದ್ದಾರೆ.

ಬಿಜೆಪಿ ಸೈದ್ಧಾಂತಿಕ ಪಕ್ಷವಾಗಿದ್ದು, ಈ ಸಿದ್ಧಾಂತ ಒಪ್ಪಿ ಬರುವ ಮುಖಂಡರು ಹಾಗೂ ಕಾರ್ಯಕರ್ತರನ್ನು ಸೇರಿಸಿಕೊಳ್ಳಬೇಕು. ಆದರೆ ಕಳಂಕಿತ ರಾಜಕಾರಣಿಗಳನ್ನು ಪ್ರಮುಖ ಸ್ಥಾನದಿಂದ ಹೊರಗೆ ಇಡದೇ ಇದ್ದರೆ ಪಕ್ಷದ ವರ್ಚಸ್ಸಿಗೆ ಧಕ್ಕೆ ಆಗುತ್ತದೆ ಎಂದು ಹೇಳಿದರು.ಮಹಾರಾಷ್ಟ್ರ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ನಡೆದ ಚರ್ಚೆಯ ವೇಳೆ ಮಾತನಾಡಿದ ಅವರು, ಪಕ್ಷದಿಂದ ಕಳೆಯನ್ನು ತೆಗೆದು ಶುದ್ಧೀಕರಿಸಬೇಕಾಗಿದೆ. ಬೆಳೆ ಬೆಳೆದಂತೆ ಕಳೆ ಹೆಚ್ಚಾಗುತ್ತದೆ. ಕಳೆ ಕೀಳದಿದ್ದರೆ ಉಳಿದ ಬೆಳೆಗಳಿಗೂ ಹಾನಿ ಆಗಬಹುದು ಎಂದು ಅವರು ಅಭಿಪ್ರಾಯ ವ್ಯಕ್ತಪಡಿಸಿದರು. ಬಿಜೆಪಿ ಕಾರ್ಯಕರ್ತರ ಪಕ್ಷ. ಪಕ್ಷಕ್ಕೆ ಹೊಸ ಸದಸ್ಯರು ಸೇರುತ್ತಿರುತ್ತಾರೆ. ಪಕ್ಷದ ಅಭಿವೃದ್ಧಿ ದೃಷ್ಟಿಯಿಂದ ಹೊಸ ಸದಸ್ಯರ ಸೇರ್ಪಡೆ ಅನಿವಾರ್ಯ. ಪಕ್ಷದೊಳಗೆ ಬರುವವರಿಗೆ ಸೂಕ್ತ ತರಬೇತಿ ನೀಡಬೇಕಿದೆ. ಆದರೆ ಒಬ್ಬ ಕಾರ್ಯಕರ್ತ ಮಾತನಾಡಿದರೆ ಅದರಿಂದ ಸಾವಿರಾರು ಕಾರ್ಯಕರ್ತರ ಶ್ರಮ ವ್ಯರ್ಥವಾಗುತ್ತದೆ. ಆದ್ದರಿಂದ ಪಕ್ಷದ ಸಿದ್ಧಾಂತಕ್ಕೆ ಒಗ್ಗಿಕೊಳ್ಳದ ಕಳಂಕಿತರನ್ನು ಹೊರಗೆ ಹಾಕುವ ಕೆಲಸ ಆಗಬೇಕು ಎಂದು ನಿತಿನ್ ಗಡ್ಕರಿ ಹೇಳಿದರು.

# ಶೇಖ್ ಹಸೀನಾ ಪಕ್ಷದ ನೂರಕ್ಕೂ ಹೆಚ್ಚು ಕಾರ್ಯಕರ್ತರ ಬಂಧನ!

**ಢಾಕಾ:** ಬಾಂಗ್ಲಾದೇಶದಲ್ಲಿ ಮತ್ತೊಮ್ಮೆ ರಾಜಕೀಯ ಕೋಲಾಹಲ ಉಂಟಾಗಿದೆ. ಆಗಸ್ಟ್ 2024 ರಲ್ಲಿ ನಡೆದ ಸರ್ಕಾರದ ವಿರುದ್ಧದ ದಂಗೆಯ ನಂತರ ಬಾಂಗ್ಲಾದೇಶ ಇನ್ನೂ ಸ್ಥಿರವಾಗಿಲ್ಲ. ಈತನ್ಮಧ್ಯೆ, ಮಾಜಿ ಪ್ರಧಾನಿ ಶೇಖ್ ಹಸೀನಾ ಅವರ ಅವಾಮಿ ಲೀಗ್ ಪಕ್ಷದ ನೂರಾರು ಕಾರ್ಯಕರ್ತರನ್ನು ಬಾಂಗ್ಲಾದೇಶ ಸೇನೆ ಬಂಧಿಸಿದೆ. ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ ಅವರ ಅವಾಮಿ ಲೀಗ್ ಪಕ್ಷದ ಬೆಂಬಲಿಗರು ಬಾಂಗ್ಲಾದೇಶದ ರಾಜಧಾನಿಯಲ್ಲಿ ಬೀದಿಗಿಳಿದು ಪ್ರತಿಭಟನೆ ನಡೆಸಲು ಮುಂದಾದ ವೇಳೆ ಈ ಘಟನೆ ನಡೆದಿದೆ. ಇದಕ್ಕೂ ಮೊದಲು, ಬಾಂಗ್ಲಾದೇಶದ ಮಧ್ಯಂತರ ಸರ್ಕಾರವು ಶನಿವಾರ (9 ನವೆಂಬರ್ 2024) ಅವಾಮಿ ಲೀಗ್ ನಡೆಸಲು ಉದ್ದೇಶಿಸಿದ್ದ ರ್ಯಾಲಿಯನ್ನು ಆಯೋಜಿಸಲು ಅನುಮತಿ ನೀಡುವುದಿಲ್ಲ ಎಂದು ಸ್ಪಷ್ಟಪಡಿಸಿತ್ತು. 'ಅವಾಮಿ ಲೀಗ್ ಅದರ ಪ್ರಸ್ತುತ ರೂಪದಲ್ಲಿ ಫ್ಯಾಸಿಸ್ಟ್ ಪಕ್ಷವಾಗಿದೆ. ಯಾವುದೇ ಸಂದರ್ಭದಲ್ಲೂ ಈ ಫ್ಯಾಸಿಸ್ಟ್ ಪಕ್ಷಕ್ಕೆ ಬಾಂಗ್ಲಾದೇಶದಲ್ಲಿ ಪ್ರತಿಭಟನೆ ನಡೆಸಲು ಬಿಡುವುದಿಲ್ಲ' ಎಂದು ಹಾಲಿ ಸರ್ಕಾರ ಹೇಳಿತ್ತು.ಅವಾಮಿ ಲೀಗ್ನ ಸಭೆ ಮತ್ತು ಪ್ರತಿಭಟನೆಗಳನ್ನು ತಡೆಯಲು ಢಾಕಾದ ಹಲವು ಪ್ರದೇಶಗಳಲ್ಲಿ ಸೇನೆ ಮತ್ತು ಪೊಲೀಸರನ್ನು ನಿಯೋಜಿಸಲಾಗಿದೆ. ಭಾನುವಾರ (10 ನವೆಂಬರ್ 2024) ಮಧ್ಯಾಹ್ನ 3 ಗಂಟೆಯ ನಂತರ ಹೆಚ್ಚಿನ ಸಂಖ್ಯೆಯ ಅವಾಮಿ ಲೀಗ್ ಬೆಂಬಲಿಗರು ಢಾಕಾದಲ್ಲಿ ಸೇರುತ್ತಾರೆ ಎಂದು ಅಂದಾಜಿಸಲಾಗಿದೆ. ಇದಕ್ಕಾಗಿ ಬಾಂಗ್ಲಾದೇಶ ಗಡಿ ಕಾವಲು ಪಡೆಯ 191 ತುಕಡಿಗಳನ್ನು ನಿಯೋಜಿಸಲಾಗಿದೆ.



# ಮಾಸ್ಕೋ ನಗರದ ಮೇಲೆ ಉಕ್ರೇನ್‌ನಿಂದ 25ಕ್ಕೂ ಅಧಿಕ ಡ್ರೋನ್ ದಾಳಿ

**ಮಾಸ್ಕೋ:** ರಶ್ಯ ರಾಜಧಾನಿ ಮಾಸ್ಕೋವನ್ನು ಗುರಿಯಿರಿಸಿ ಉಕ್ರೇನ್ ಸೇನೆಯು ರವಿವಾರ ಕನಿಷ್ಠ 25 ಡ್ರೋನ್ ದಾಳಿಗಳನ್ನು ನಡೆಸಿದೆ. ಸಂಘರ್ಷ ಆರಂಭಗೊಂಡಾಗಿನಿಂದ ಮಾಸ್ಕೊ ನಗರದ ಮೇಲೆ ಉಕ್ರೇನ್ ನಡೆಸಿದ ಅತಿ ದೊಡ್ಡ ದಾಳಿ ಇದಾಗಿದೆ.



ರಶ್ಯ ರಾಜಧಾನಿ ಮೇಲೆ ಡ್ರೋನ್ ಆಕ್ರಮಣ ನಡೆದಿರುವುದನ್ನು ಮಾಸ್ಕೋ ಮೇಯರ್ ಸೆರ್ಗೆಯಿ ದೃಢಪಡಿಸಿದ್ದಾರೆ ಮತ್ತು ಎಲ್ಲಾ ಡ್ರೋನ್‌ಗಳನ್ನು ಹೊಡೆದುರುಳಿಸಲಾಗಿದೆ ಎಂದವರು ಹೇಳಿದ್ದಾರೆ.

ಕಪ್ಪು ಸಮುದ್ರ ತೀರ ಪ್ರದೇಶವಾದ ಸೋಚಿಯಲ್ಲಿ ರಶ್ಯದ ಆತಿಥ್ಯದಲ್ಲಿ 50 ಆಫ್ರಿಕನ್ ರಾಷ್ಟ್ರಗಳ ಸಚಿವರ ಸಮಾವೇಶ ನಡೆಯುತ್ತಿರುವ ಸಂದರ್ಭದಲ್ಲೇ ಈ ಡ್ರೋನ್ ದಾಳಿಗಳು ನಡೆದಿವೆ. ಆದರೆ ದಾಳಿಯಲ್ಲಿ ಯಾವುದೇ ಸಾವು, ನೋವು ಸಂಭವಿಸಿರುವ ಬಗ್ಗೆ ವರದಿಯಾಗಿಲ್ಲ. ಆದಾಗ್ಯೂ ಯಾವುದೇ ಕಟ್ಟಡಗಳಿಗೆ ಹಾನಿಯಾಗಿಲ್ಲವೆಂದು ಅಧಿಕೃತ ಮೂಲಗಳು ತಿಳಿಸಿವೆ.

ಡ್ರೋನ್ ದಾಳಿಯ ಆನಂತರ ಮಾಸ್ಕೊದ ಡೊಮೊಡೆಡೊವೊ ಹಾಗೂ ಝುಲ್ಕೊವ್ಸ್ಕಿ ವಿಮಾನನಿಲ್ದಾಣಗಳ ಕಾರ್ಯಾಚರಣೆಗಳು ತಾತ್ಕಾಲಿಕವಾಗಿ ಸ್ಥಗಿತಗೊಂಡಿರುವುದಾಗಿ ವರದಿಯಾಗಿದೆ.

# ಗಾಝಾ ಕದನವಿರಾಮ ಮಾತುಕತೆ ಸ್ಥಗಿತಗೊಳಿಸಿದ ಖತರ್

**ದೋಹಾ:** ಗಾಝಾದಲ್ಲಿ ಕದನವಿರಾಮವನ್ನು ಏರ್ಪಡಿಸುವ ನಿಟ್ಟಿನಲ್ಲಿ ಹಮಾಸ್ ಹಾಗೂ ಇಸ್ರೇಲ್ ಜೊತೆ ತಾನು ನಡೆಸುತ್ತಿರುವ ಸಂಧಾನ ಮಾತುಕತೆಯನ್ನು ಸ್ಥಗಿತಗೊಳಿಸಿರುವುದಾಗಿ ಖತರ್ ರವಿವಾರ ಘೋಷಿಸಿದೆ.

ಮಾತುಕತೆಯಲ್ಲಿ ಪ್ರಗತಿಯಾಗದೆ ಇರುವ ಹಿನ್ನೆಲೆಯಲ್ಲಿ ಈ ನಿರ್ಧಾರಕ್ಕೆ ಬಂದಿರುವುದಾಗಿ ಅದು ಹೇಳಿದೆ.

ಆದರೆ ಖತರ್ ನ ಅತಿಥ್ಯದಲ್ಲಿರುವ ಹಮಾಸ್ ನಾಯಕರನ್ನು ದೇಶ ತೊರೆಯುವಂತೆ ಸೂಚಿಸಲಾಗುವುದೇ ಎಂಬುದು ಸ್ಪಷ್ಟವಾಗಿಲ್ಲ. ಹಮಾಸ್ ನಾಯಕರು ಇರಾನ್ ಹಾಗೂ ಟರ್ಕಿ ಜೊತೆ ಉತ್ತಮ ಬಾಂಧವ್ಯವನ್ನು ಹೊಂದಿದ್ದು, ಅದರ ಕೆಲವು ನಾಯಕರು ಈಗ ಲೆಬನಾನ್ ನಲ್ಲಿದ್ದಾರೆ. ಆದರೆ ಒಂದು ವೇಳೆ ಕದನ ವಿರಾಮ ಒಪ್ಪಂದವನ್ನು ಏರ್ಪಡಿಸಲು ಇಸ್ರೇಲ್ ಹಾಗೂ ಹಮಾಸ್ ರಾಜಕೀಯ ಇಚ್ಛಾಶಕ್ತಿಯನ್ನು ಪ್ರದರ್ಶಿಸಿದಲ್ಲಿ ಖತರ್ ಮತ್ತೆ ಮಾತುಕತೆಗೆ ಮಧ್ಯಸ್ಥಿಕೆ ವಹಿಸುವ ಸಾಧ್ಯತೆ ಇದೆ ಎಂದು ಇನ್ನೋರ್ವ ಪ್ರಮುಖ ಸಂಧಾನಕಾರ ರಾಷ್ಟ್ರವಾದ ಈಜಿಪ್ಟ್‌ನ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಉತ್ತಮ ನಂಬಿಕೆಯೊಂದಿಗೆ ಒಪ್ಪಂದವನ್ನು ಏರ್ಪಡಿಸಲು ಇತ್ತಂಡಗಳೂ ಇಚ್ಛೆ ವ್ಯಕ್ತಪಡಿಸದೆ ಇರುವವರೆಗೆ ತಾನು ಮಧ್ಯಸ್ಥಿಕೆ ವಹಿಸುವುದನ್ನು ಮುಂದುವರಿಸಲು ಸಾಧ್ಯವಿಲ್ಲವೆಂದು ಖತರ್ ದೇಶವು ಇಸ್ರೇಲ್



ಹಾಗೂ ಹಮಾಸ್ ಗೆ ಸ್ಪಷ್ಟಪಡಿಸಿದೆಯೆನ್ನಲಾಗಿದೆ. ಅಲ್ಲದೆ ಖತರ್‌ನಲ್ಲಿ ಕಾರ್ಯಾಚರಿಸುತ್ತಿರುವ ಹಮಾಸ್ ನ ರಾಜತಾಂತ್ರಿಕ ಕಚೇರಿಯು, ಅದರ ಉದ್ದೇಶವನ್ನು ಈಡೇರಿಸುತ್ತಿಲ್ಲವೆಂದು ಖತರ್ ನ ರಾಜತಾಂತ್ರಿಕ ಮೂಲಗಳು ತಿಳಿಸಿವೆ. ಗಂಭೀರವಾದ ಮಾತುಕತೆಗಳನ್ನು ನಡೆಸಲು ಹಮಾಸ್ ಸಿದ್ಧವಿಲ್ಲದೆ ಇದ್ದಲ್ಲಿ, ರಾಜತಾಂತ್ರಿಕ ನಿಯೋಗವು ಅಲ್ಲಿಂದ ತೆರಳುವಂತೆಯೂ ಸೂಚಿಸುವ ಸಾಧ್ಯತೆಯಿದೆಯೆಂದು ಮೂಲಗಳು ತಿಳಿಸಿವೆ.

# ಅರಿರೆನಾದಲ್ಲೂ ಟ್ರಂಪ್ ಜಯಭೇರಿ

**ವಾಶಿಂಗ್ಟನ್:** ಅಮೆರಿಕದ ಅಧ್ಯಕ್ಷೀಯ ಚುನಾವಣೆಯಲ್ಲಿ ಅರಿರೆನಾ ರಾಜ್ಯದ ಮತಏಣಿಕೆ ಶನಿವಾರ ಪೂರ್ಣಗೊಂಡಿದ್ದು, ಅಲ್ಲಿನ 11 ಸ್ಥಾನಗಳಲ್ಲಿ ರಿಪಬ್ಲಿಕನ್ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ಅವರು ಗೆಲುವು ಸಾಧಿಸಿದ್ದಾರೆ. ಇದರೊಂದಿಗೆ ಚುನಾವಣೆಯಲ್ಲಿ ನಿರ್ಣಾಯಕವಾದ ಎಲ್ಲಾ ಏಳು ರಾಜ್ಯಗಳಲ್ಲಿಯೂ ಟ್ರಂಪ್ ಮೇಲುಗೈ ಸಾಧಿಸಿದಂತಾಗಿದೆ.

ಅಮೆರಿಕ ಅಧ್ಯಕ್ಷೀಯ ಚುನಾವಣೆಯ ನೂತನ ಸ್ಥಾನ ಬಲಾಬಲಗಳ ಪ್ರಕಾರ ಟ್ರಂಪ್ ಒಟ್ಟು 312 ಸ್ಥಾನಗಳನ್ನು ಗೆದಿದ್ದು, ಸ್ಪಷ್ಟ ಬಹುಮತ ಗಳಿಸಿದ್ದಾರೆ. 2016ರ ಅಧ್ಯಕ್ಷೀಯ ಚುನಾವಣೆಯಲ್ಲಿ ಅವರು 304 ಸ್ಥಾನಗಳಲ್ಲಿ ಜಯಗಳಿಸಿದ್ದರು. ಅಧ್ಯಕ್ಷೀಯ ಚುನಾವಣೆಯಲ್ಲಿ ಸ್ಪಷ್ಟ ಬಹುಮತಕ್ಕೆ ಅಗತ್ಯವಿರುವ ಸ್ಥಾನಗಳ ಸಂಖ್ಯೆ 270 ಆಗಿದೆ.

ಫಲಿತಾಂಶವನ್ನೇ ಅದಲು ಬದಲು ಮಾಡುವ ಸಾಮರ್ಥ್ಯವಿರುವ ರಾಜ್ಯಗಳಾದ ಜಾರ್ಜಿಯಾ, ಪೆನ್ಸಿಲ್ವೇನಿಯಾ, ಮಿಶಿಗನ್ ಹಾಗೂ ವಿಸ್ಕೊನ್ಸಿನ್ ಸೇರಿದಂತೆ ಅಮೆರಿಕದ 50 ರಾಜ್ಯಗಳ ಪೈಕಿ ಅರ್ಧಾಂಶಕ್ಕಿಂತಲೂ ಹೆಚ್ಚು ರಾಜ್ಯಗಳಲ್ಲಿ ಟ್ರಂಪ್ ಮುನ್ನಡೆಯನ್ನು ಸಾಧಿಸಿದ್ದರು. ಜಿದ್ದಾಜಿದ್ದಿಯ ಸ್ಪರ್ಧೆಯೇರ್ಪಟ್ಟಿದ್ದ ಉತ್ತರ ಕರೋಲಿನಾ ಹಾಗೂ ನೆವಾಡ ಕೂಡಾ ಟ್ರಂಪ್ ಪಾಲಾಗಿದೆ.

ಎದುರಾಳಿ ಡೆಮಾಕ್ರಾಟ್ ಪಕ್ಷದ ಅಭ್ಯರ್ಥಿ ಕಮಲಾ ಹ್ಯಾರಿಸ್ ಕೇವಲ 226 ಸ್ಥಾನಗಳನ್ನು ಪಡೆಯುವಲ್ಲಿ ಸಫಲರಾಗಿದ್ದಾರೆ. ಡೊನಾಲ್ಡ್ ಟ್ರಂಪ್ ಅವರು ಜನವರಿ 20ರಂದು ಅಮೆರಿಕದ 47ನೇ ಅಧ್ಯಕ್ಷರಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ. ಟ್ರಂಪ್ ಅವರ ಚುನಾವಣಾ ಪಚಾರ ಮ್ಯಾನೇಜರ್ ಆಗಿದ್ದ ಸೂಸಿ ವೈಲ್ಸ್ ಶ್ವೇತಭವನದ ಸಿಬ್ಬಂದಿ ಮುಖ್ಯಸ್ಥೆಯಾಗಿ ಅಧಿಕಾರ ಸ್ವೀಕರಿಸಲಿದ್ದಾರೆ.



# ಅಫ್ಘಾನ್ ರಕ್ಷಣಾ ಸಚಿವರನ್ನು ಭೇಟಿಯಾದ ಭಾರತೀಯ ನಿಯೋಗ

**ಕಾಬೂಲ್:** ಮಹತ್ವದ ನಡೆಯೊಂದರಲ್ಲಿ ಭಾರತದ ನಿಯೋಗವು ಶನಿವಾರ ಅಫ್ಘಾನಿಸ್ತಾನದ ಹಂಗಾಮಿ ರಕ್ಷಣಾ ಸಚಿವ ಮುಲ್ಲಾ ಮುಹಮ್ಮದ್ ಯಾಕೂಬ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದೆ.

ಇರಾನ್ ನಲ್ಲಿ ತಾನು ಅಭಿವೃದ್ಧಿಪಡಿಸುತ್ತಿರುವ ಚಬಹಾರ್ ಬಂದರನ್ನು ಬಳಸಿಕೊಳ್ಳುವಂತೆ ಆಹ್ವಾನ ನೀಡಿದೆ.

ಅಲ್ಲದೆ ಅಫ್ಘಾನಿಸ್ತಾನಕ್ಕೆ ತಾನು ನೀಡುತ್ತಿರುವ ಮಾನವೀಯ ನೆರವನ್ನು ವಿಸ್ತರಿಸುವ ಬಗ್ಗೆಯೂ ಚರ್ಚಿಸಿದೆ.

ಭಾರತೀಯ ನಿಯೋಗದ ನೇತೃತ್ವವನ್ನು ಪಾಕಿಸ್ತಾನ -ಅಮೇರಿಕ - ಇರಾನ್ ವಿಭಾಗದ ಜಂಟಿ ಕಾರ್ಯದರ್ಶಿ ಜೆ.ಪಿ.ಸಿಂಗ್ ವಹಿಸಿದ್ದರು. ಅಫ್ಘಾನಿಸ್ತಾನದ ಮಾಜಿ ಅಧ್ಯಕ್ಷ ಹಾಮಿದ್ ಕರ್ಝಾಯಿ ಹಾಗೂ ಇತರ ಹಿರಿಯ ನಾಯಕರನ್ನು ಮತ್ತು ಅಫ್ಘಾನ್ ನಲ್ಲಿ ಕಾರ್ಯಾಚರಿಸುತ್ತಿರುವ ವಿಶ್ವಸಂಸ್ಥೆ ಏಜೆನ್ಸಿಗಳ ಮುಖ್ಯಸ್ಥರನ್ನು ಕೂಡಾ ಭಾರತೀಯ ನಿಯೋಗ ಭೇಟಿಯಾಗಿರುವುದಾಗಿ ವಿದೇಶಾಂಗ ವ್ಯವಹಾರಗಳ ವಕ್ತಾರ ರಣಧೀರ್ ಜೈಸ್ವಾಲ್ ತಿಳಿಸಿದ್ದಾರೆ.

2021ರಿಂದ ಅಫ್ಘಾನಿಸ್ತಾನದ ಆಡಳಿತ ನಡೆಸುತ್ತಿರುವ ತಾಲಿಬಾನ್ ಸರಕಾರಕ್ಕೆ ಭಾರತವು ಮಾನ್ಯತೆಯನ್ನು ನೀಡಿಲ್ಲ. ಆದರೆ ಆ ದೇಶದ ಜನತೆಗೆ ಭಾರತವು ಗೋಧಿ, ಔಷಧಿಗಳು, ವೈದ್ಯಕೀಯ ಸಾಮಾಗ್ರಿಗಳು ಸೇರಿದಂತೆ ಮಾನವೀಯ ನೆರವನ್ನು ಒದಗಿಸುತ್ತಾ ಬಂದಿದೆ. ಚಬಹಾರ್ ಬಂದರನ್ನು ಅಭಿವೃದ್ಧಿಪಡಿಸಲು ಹಾಗೂ ನಿರ್ವಹಿಸುವ ಕುರಿತಾಗಿ ಈ ವರ್ಷದ ಆರಂಭದಲ್ಲಿ ಭಾರತವು ಇರಾನ್ ಜೊತೆ ಒಪ್ಪಂದವನ್ನು ಏರ್ಪಡಿಸಿಕೊಂಡಿತ್ತು.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಎಲ್ಲವನ್ನೂ ಕಳೆದುಕೊಂಡ ಭವ್ಯಾ ಗೌಡ




**ಅಳುವಾಗ ಬಿಗಿದಪ್ಪಿ ಸಮಾಧಾನ ಮಾಡಿದ ಮೋಕ್ಷಿತಾ**

ಬಿಗ್ ಬಾಸ್ ಮನೆಯಲ್ಲಿ ಭವ್ಯಾ ಗೌಡ ಹಾಗೂ ಮೋಕ್ಷಿತಾ ಪೈ ಮಧ್ಯೆ ಯಾವುದೂ ಸರಿ ಇರಲಿಲ್ಲ. ಅವರು ನಾಮಕಾವಸ್ತೆಗೆ ಮಾತ್ರ ಎದುರಿನಿಂದ ನಗುತ್ತಾರೆ. ಆದರೆ, ಹಿಂದಿನಿಂದ ಒಬ್ಬರಿಗೊಬ್ಬರು ಬೈದು ಕೊಳ್ಳುತ್ತಾರೆ. ಆದರೆ, ಭವ್ಯಾ ನೋವಿನಲ್ಲಿ ಇರುವಾಗ ಮೋಕ್ಷಿತಾ ಹೆಗಲುಕೊಟ್ಟಿದ್ದಾರೆ. ಅವರು ಭವ್ಯಾನ ಬಿಗಿದಪ್ಪಿ ಸಮಾಧಾನ ಮಾಡಿದ್ದಾರೆ. ಭಾನುವಾರದ (ನವೆಂಬರ್ 11) ಎಪಿಸೋಡ್ ನಲ್ಲಿ ಇದು ಹೈಲೈಟ್ ಆಗಿದೆ.

ಭವ್ಯಾ ಗೌಡ ಅವರಿಗೆ ಕಳೆದ ವಾರ ಸಾಕಷ್ಟು ಹಿನ್ನಡೆಗಳು ಆದವು. ಕ್ಯಾಪ್ಟನ್ಸಿ ರೇಸ್ ನಿಂದ ಅವರು ಔಟ್ ಆದರು. ಇದಕ್ಕೆ ಮಂಜು ಅವರು ಮಾಡಿದ ಕುತಂತ್ರವೇ ಕಾರಣ. ಇದಕ್ಕೆ ಅವರು ಸಾಕಷ್ಟು ಬೇಸರಗೊಂಡರು. ಆ ಬಳಿಕ ಕಿಚ್ಚನ ಚಪ್ಪಾಳೆ ಕೂಡ ಮಿಸ್ ಆಯಿತು. ಇದಕ್ಕೆ ಭವ್ಯಾ ಗೌಡ ಅವರು ಸಾಕಷ್ಟು ನೊಂದುಕೊಂಡರು.

ಭವ್ಯಾ ಅವರು ಉತ್ತಮವಾಗಿ ಆಡಿದ್ದರು ನಿಜ. ಆದರೆ, ಪ್ರಶ್ನೆ ಕೇಳುವ ಜಾಗದಲ್ಲಿ ಮೌನವಾಗಿದ್ದರು. ಇದಕ್ಕೆ ಸುದೀಪ್ ಅಸಮಾಧಾನ ಹೊರಹಾಕಿದರು. 'ಒಂದೇ ಒಂದು ತಪ್ಪಿನಿಂದ ನಿಮಗೆ ಕಿಚ್ಚನ ಚಪ್ಪಾಳೆ ಮಿಸ್ ಆಗಿದೆ' ಎಂದು ಹೇಳುತ್ತಿದ್ದಂತೆ ಭವ್ಯಾ ಅವರು ಕಣ್ಣೀರು ಹಾಕಿದರು. ಎಪಿಸೋಡ್ ಮುಗಿದ ಬಳಿಕವೂ ಅವರು ಅಳುತ್ತಲೇ ಇದ್ದರು.

'ಮನೆಯ ಹೊರಗೂ ಹೀಗೆ ಆಗುತ್ತಿತ್ತು. ಕಾರು ತೆಗೆದುಕೊಳ್ಳಬೇಕು ಎಂದಾಗ ಮನೆಯಲ್ಲಿ ಏನೋ ಸಮಸ್ಯೆ ಆಯಿತು. ಈ ಕಾರಣಕ್ಕೆ ಕಾರು ತೆಗೆದುಕೊಳ್ಳೋಕೆ ಆಗಿರಲಿಲ್ಲ. ಇಲ್ಲಿಯೂ ಹಾಗೆಯೇ ಆಗುತ್ತಿದೆ' ಎಂದು ಅಳಲು ಆರಂಭಿಸಿದರು. ಆಗ ಅಲ್ಲಿಯೇ ಇದ್ದ ಮೋಕ್ಷಿತಾ ಅವರು ಭವ್ಯಾ ಅವರನ್ನು ಹಗ್ ಮಾಡಿ ಸಮಾಧಾನ ಮಾಡಿದ್ದಾರೆ. ಈ ಬಗ್ಗೆ ಮೆಚ್ಚುಗೆ ಸಿಕ್ಕಿದೆ. ಭವ್ಯಾ ಹಾಗೂ ಮೋಕ್ಷಿತಾ ಈ ಮೊದಲು ಮಾತಿನ ಫೈಟ್ ಮಾಡಿಕೊಂಡಿದ್ದು ಇದೆ. ಹಿಂದಿನಿಂದ ಮಾತನಾಡಿಕೊಂಡಿದ್ದೂ ಇದೆ. ಆದರೆ, ಇನ್ಮೇಲೆ ಇವರ ಮಧ್ಯೆ ಗೆಳೆತನ ಬೆಳೆಯುತ್ತದೆಯೇ ಎಂಬ ಪ್ರಶ್ನೆ ಮೂಡಿದೆ.

# 'ಪುಷ್ಪ 2' ರಿಲೀಸ್‌ಗೂ ಮುನ್ನವೇ ಅರ್ಜುನ್‌ಗೆ ರಶ್ಮಿಕಾ ಸ್ಪೆಷಲ್ ಗಿಫ್ಟ್



ಕೊಡಗಿನ ಬೆಡಗಿ ರಶ್ಮಿಕಾ ಮಂದಣ್ಣ ಬ್ಯಾಕ್ ಟು ಬ್ಯಾಕ್ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಕೈತುಂಬಾ ಸಿನಿಮಾಗಳಿರುವ ನಡುವೆ ಸಹನಟ ಅಲ್ಲು ಅರ್ಜುನ್‌ಗೆ 'ಪುಷ್ಪ 2' ಬಿಡುಗಡೆಗೂ ಮುನ್ನವೇ ಸ್ಪೆಷಲ್ ಗಿಫ್ಟ್‌ವೊಂದನ್ನು ನೀಡಿದ್ದಾರೆ.

ಅಲ್ಲು ಅರ್ಜುನ್ ಮತ್ತು ರಶ್ಮಿಕಾ ನಟನೆಯ 'ಪುಷ್ಪ 2' ಸಿನಿಮಾ ಡಿಸೆಂಬರ್ 5ರಂದು ರಿಲೀಸ್ ಆಗಲಿದೆ. ಇದೀಗ ಸಿನಿಮಾ ರಿಲೀಸ್‌ಗೂ ಮುನ್ನವೇ ವಿಶೇಷ ಗಿಫ್ಟ್‌ವೊಂದನ್ನು ಅಲ್ಲು ಅರ್ಜುನ್‌ಗೆ ರಶ್ಮಿಕಾ ನೀಡಿದ್ದಾರೆ. ದೀಪಾವಳಿ ಹಬ್ಬದ ಪ್ರಯುಕ್ತ ಬೆಳ್ಳಿ ನಾಣ್ಯವೊಂದನ್ನು ಉಡುಗೊರೆಯಾಗಿ ನಟನಿಗೆ ಕೊಟ್ಟಿದ್ದಾರೆ.

ಬೆಳ್ಳಿಯನ್ನು ಯಾರಿಗಾದರೂ ಉಡುಗೊರೆಯಾಗಿ ನೀಡಿದ್ರೆ, ಅವರಿಗೆ ಅದೃಷ್ಟ ಬರುತ್ತದೆ ಎಂದು ನನ್ನ ತಾಯಿ ಆಗಾಗ ಹೇಳುತ್ತಿದ್ದರು. ನಿಮಗೆ ಹೆಚ್ಚಿನ ಅದೃಷ್ಟವನ್ನು ತರಲಿ ಎಂದು ನಾನು ಭಾವಿಸುತ್ತೇನೆ. ನಿಮಗೆ ಮತ್ತು ನಿಮ್ಮ ಕುಟುಂಬಕ್ಕೆ ದೀಪಾವಳಿ ಹಬ್ಬದ ಶುಭಾಶಯಗಳು ಎಂದು ರಶ್ಮಿಕಾ ಬರೆದು ಕಳುಹಿಸಿದ್ದಾರೆ. ಬೆಳ್ಳಿಯ ನಾಣ್ಯದ ಜೊತೆ ಸಿಹಿ ತಿನಿಸುಗಳನ್ನು ನಟಿ ಕಳುಹಿಸಿದ್ದಾರೆ.

ರಶ್ಮಿಕಾ ಕಳುಹಿಸಿದ ಗಿಫ್ಟ್ ಫೋಟೋ ಕ್ಲಿಕ್ಕಿಸಿ ಸೋಶಿಯಲ್ ಮೀಡಿಯಾದಲ್ಲಿ ಶೇರ್ ಮಾಡಿ ಅಲ್ಲು ಅರ್ಜುನ್ ಥ್ಯಾಂಕ್ಯೂ ಎಂದಿದ್ದಾರೆ. ಈಗ ನನಗೆ ಹೆಚ್ಚು ಅದೃಷ್ಟ ಬೇಕು ಎಂದು ಬರೆದುಕೊಂಡಿದ್ದಾರೆ. ಅದಕ್ಕೆ ನಟಿ, ರಿಲೀಸ್ ಬಳಿಕ 'ಪುಷ್ಪ 2' ಚಿತ್ರ ಖಂಡಿತವಾಗಿಯೂ ಸದ್ದು ಮಾಡುತ್ತೆ. ನಮ್ಮ ಶ್ರಮಕ್ಕೆ ತಕ್ಕ ಪ್ರತಿಫಲ ಸಿಗಲಿದೆ. ನಮ್ಮ ಕೆಲಸವನ್ನು ಪ್ರೇಕ್ಷಕರು ಗುರುತಿಸುತ್ತಾರೆ. ಈ ವಿಷ್ಯದಲ್ಲಿ ನನಗೆ ನಂಬಿಕೆಯಿದೆ ಎಂದು ಪ್ರತಿಯುತ್ತರ ನೀಡಿದ್ದಾರೆ. ಪುಷ್ಪರಾಜ್ ಮತ್ತು ಶ್ರೀವಲ್ಲಿಯ ತೆರೆಹಿಂದಿನ ಸಂಭಾಷಣೆ ನೋಡಿ ಫ್ಯಾನ್ಸ್ ಖುಷಿಪಟ್ಟಿದ್ದಾರೆ. ಸಿನಿಮಾಗಾಗಿ ಎದುರು ನೋಡುತ್ತಿದ್ದಾರೆ.



# ಬಲ್ಲಾಳದೇವ ರಾಣಾ ಜೊತೆ ಕಾಂತಾರದ ಶಿವ



ತೆಲುಗಿನ ಖ್ಯಾತ ನಟ ರಾಣಾ ದಗ್ಗುಬಾಟಿ ಮತ್ತು ಕನ್ನಡದ ಹೆಸರಾಂತ ನಟ ರಿಷಬ್ ಶೆಟ್ಟಿ ಜೊತೆಗಿನ ಫೋಟೋ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗ್ತಿದೆ. ರಾಣಾ ಏನಾದರೂ ಕನ್ನಡ ಸಿನಿಮಾ ರಂಗಕ್ಕೆ ಎಂಟ್ರಿ ಕೊಟ್ಟರಾ ಅನ್ನೋ ಅನುಮಾನ ಕೂಡ ಮೂಡಿದೆ. ಆದರೆ, ಕನ್ನಡಕ್ಕೆ ರಾಣಾ ಬಂದಿಲ್ಲ. ತೆಲುಗಿಗೆ ರಿಷಬ್ ಹೋಗಿದ್ದಾರೆ. ಜೈ ಹನುಮಾನ್ ಸಿನಿಮಾದಲ್ಲಿ ಈ ಜೋಡಿ ಒಟ್ಟಾಗಿ ನಟಿಸುತ್ತಿದೆ.

'ಕಾಂತಾರ' ಕಣಕ್ಕಿಳಿದಿರುವ ಕಾಡುಬೆಟ್ಟ ಶಿವನ ಲುಕ್ಕು ಕಣ್ತುಂಬಿಕೊಳ್ಳುವುದಕ್ಕೆ ಅಖಂಡ ಸಿನಿಮಾ ಪ್ರೇಮಿಗಳು ಕಾತರದಿಂದ ಕಾಯ್ತಿದ್ದಾರೆ. ಕುಂದಾಪುರದ ಕೆರಾಡಿ ಹುಡ್ಗ 'ಕಾಂತಾರ' ಪ್ರೀಕ್ವೆಲ್ ಮೂಲಕ ಕದಂಬರ ಕಥೆ ಹರವಿಡೋದಿಕ್ಕೆ ರೆಡಿಯಾಗಿರುವುದರ ಜೊತೆಗೆ ಪುರಾತನ ಸಮರ ಕಲೆ ಕಳರಿಪಯಟ್ಟು ಕಲೆಯನ್ನ ಕಟ್ಟಿಕೊಡಲು ಕಸರತ್ತು ನಡೆಸಿದ್ದಾರೆ. ಇದರ ನಡುವೆ ಹನುಮಾನ್ ಪಾತ್ರದಲ್ಲಿ ಮಿಂಚಲು ರಿಷಬ್ ಶೆಟ್ಟಿ ರೆಡಿಯಾಗಿದ್ದಾರೆ. ಈ ಮೂಲಕ ತೆಲುಗಿಗೆ ನಟ ಎಂಟ್ರಿ ಕೊಟ್ಟಿದ್ದಾರೆ.

ಟಾಲಿವುಡ್ ಅಂಗಳದಲ್ಲಿ ಮೂಡಿಬಂದಿದ್ದ 'ಜೈ ಹನುಮಾನ್' ಸಿನಿಮಾ ಸಕ್ಸಸ್ ಕಂಡಿತ್ತು. ಗಲ್ಲಾಪೆಟ್ಟಿಗೆಯಲ್ಲಿ ಕಮಾಲ್ ಮಾಡಿದ್ದ ಹನುಮಾನ್ ಸಿನಿಮಾದ ಸೀಕ್ವೆಲ್ ಮೂಡಿಬರುತ್ತಿದ್ದು, ಇದೀಗ ಪ್ಯಾನ್ ಇಂಡಿಯಾ ಹಿಟ್ ಸೀಕ್ವೆಲ್‌ನಲ್ಲಿ 'ಕಾಂತಾರ' ಶಿವ ನಟಿಸುವುದು ಅಧಿಕೃತವಾಗಿದೆ. ನಿರ್ದೇಶಕ ಪ್ರಶಾಂತ್ ವರ್ಮಾ ಡೈರೆಕ್ಷನ್ ಅಡಿಯಲ್ಲಿ ಮೂಡಿ ಬರುತ್ತಿರುವ 'ಹನುಮಾನ್' ಸಿನಿಮಾದ ಸೀಕ್ವೆಲ್‌ನಲ್ಲಿ ರಿಷಬ್ ಶೆಟ್ಟಿ ಹನುಮಂತನ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ದೀಪಾವಳಿಯ ವಿಶೇಷ ಸಂದರ್ಭದಲ್ಲಿ ಫಸ್ಟ್ ಲುಕ್ ಬಿಡುಗಡೆ ಮಾಡಲಾಗಿದೆ. ನಿರ್ದೇಶಕ ಪ್ರಶಾಂತ್ ವರ್ಮಾ 'ಜೈ ಹನುಮಾನ್' ಚಿತ್ರದ ಸೀಕ್ವೆಲ್‌ನಲ್ಲಿ ಹನುಮಾನ್ ಪಾತ್ರಧಾರಿಗೆ ಬಹಳಷ್ಟು ಅಳೆದೂ ತೂಗಿ ರಿಷಬ್ ಶೆಟ್ಟಿ ಅವರನ್ನು ಆಯ್ಕೆ ಮಾಡಿದ್ದಾರೆ. ಕಾಂತಾರ ಸೀಕ್ವೆಲ್‌ಗಾಗಿ ನ್ಯಾಷನಲ್ ಅವಾರ್ಡ್ ಮುಡಿಗೇರಿಸಿಕೊಂಡಿರುವ ಡಿವೈನ್ ಸ್ಟಾರ್ ಕೇವಲ ನಟರಾಗಿ ಅಷ್ಟೇ ಅಲ್ಲದೆ, ನಿರ್ದೇಶಕರಾಗಿಯೂ ಪ್ಯಾನ್ ಇಂಡಿಯಾದಾದ್ಯಂತ ಮೋಡಿ ಮಾಡಿದ್ದಾರೆ. ಇದೇ ಕಾರಣಕ್ಕೆ ಯಾವುದೇ ಪಾತ್ರವನ್ನಾದರೂ ರಿಷಬ್ ನಿಭಾಯಿಸಬಲ್ಲರು. ಜೊತೆಗೆ ಕಥೆ-ಚಿತ್ರಕಥೆ ಹಾಗೂ ಸಂಭಾಷಣೆ ವಿಭಾಗಗಳಲ್ಲೂ ರಿಷಬ್ ಶೆಟ್ಟಿಗೆ ಕಂಟ್ರೋಲ್ ಇರೋದ್ರಿಂದ 'ಹನುಮಾನ್' ಸಿನಿಮಾದ ಸೀಕ್ವೆಲ್‌ಗೆ ಪ್ಲಸ್ ಪಾಯಿಂಟ್ಸ್ ಆಗಲಿದೆ.

ಕೈಯಲ್ಲಿ ರಾಮನ ವಿಗ್ರಹ ಹಿಡಿದು ರಿಷಬ್ ಶೆಟ್ಟಿ ಹನುಮಾನ್ ಪಾತ್ರದಲ್ಲಿ ಪವರ್‌ಫುಲ್ ಪೋಸ್ಟ್ ಕೊಟ್ಟಿದ್ದಾರೆ. ಫಸ್ಟ್ ಲುಕ್ ಪೋಸ್ಟರ್ ಬಹಳ ಆಕರ್ಷಕವಾಗಿದೆ. 'ಜೈ ಹನುಮಾನ್' ಸಿನಿಮಾವನ್ನು ಪ್ರಶಾಂತ್ ವರ್ಮಾ ಸಿನಿಮಾಟಿಕ್ ಯೂನಿವರ್ಸ್‌ನ ಭಾಗವಾಗಿ ತಯಾರಾಗಲಿದೆ. ಈ ಚಿತ್ರವನ್ನು ಮೈತ್ರಿ ಮೂವಿ ಮೇಕರ್ಸ್ ನಿರ್ಮಾಣ ಮಾಡಲಿದ್ದಾರೆ.

**ತವರಲ್ಲೇ ಆಸ್ಟ್ರೇಲಿಯಾ ಬಗ್ಗು ಬಡಿದ ಪಾಕ್**

# 22 ವರ್ಷಗಳ ಬಳಿಕ ಸರಣಿ ಗೆಲುವು



**ಕ್ಯಾನ್ಬೆರಾ:** ಇಲ್ಲಿನ ಪರ್ತ್ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಆಸ್ಟ್ರೇಲಿಯಾ ವಿರುದ್ಧ ನಡೆದ 3ನೇ ಏಕದಿನ ಪಂದ್ಯದಲ್ಲಿ ಪಾಕಿಸ್ತಾನ ಕ್ರಿಕೆಟ್ ತಂಡ 8 ವಿಕೆಟ್‌ಗಳ ಭರ್ಜರಿ ಗೆಲುವು ಸಾಧಿಸಿದೆ.

ಈ ಮೂಲಕ ಮೂರು ಪಂದ್ಯಗಳ ಏಕದಿನ ಸರಣಿಯನ್ನು 2-1 ಅಂತರದಲ್ಲಿ ಗೆದ್ದುಕೊಂಡಿದೆ. ಜೊತೆಗೆ ಕಳೆದ 22 ವರ್ಷಗಳಲ್ಲಿ ಇದೇ ಮೊದಲಬಾರಿಗೆ ಪಾಕ್, ಆಸ್ಟ್ರೇಲಿಯಾದಲ್ಲಿ ಸರಣಿಗೆದ್ದ ಸಾಧನೆ ಮಾಡಿದೆ. ಇದು ನೂತನ ಕ್ಯಾಪ್ಟನ್ ಮೊಹಮ್ಮದ್ ರಿಜ್ವಾನ್ ಅವರ ನಾಯಕತ್ವದಲ್ಲಿ ಗೆದ್ದ ಮೊದಲ ಸರಣಿಯೂ ಆಗಿದೆ. ಕೊನೆಯದ್ದಾಗಿ 2002ರಲ್ಲಿ ಪಾಕ್ ಆಸೀಸ್ ನೆಲದಲ್ಲಿ ಸರಣಿ ಗೆದ್ದಿತ್ತು.

141 ರನ್‌ಗಳ ಸುಲಭ ಗುರಿ ಬೆನ್ನತ್ತಿದ್ದ ಪಾಕ್ ಬ್ಯಾಟರ್‌ಗಳು ಉತ್ತಮ ಆರಂಭ ಪಡೆಯುವಲ್ಲಿ ಯಶಸ್ವಿಯಾದರು. ಮೊದಲ ವಿಕೆಟ್‌ಗೆ ಪಾಕ್ 84 ರನ್‌ಗಳ ಜೊತೆಯಾಟ ನೀಡಿತ್ತು. ಆರಂಭಿಕರ ವಿಕೆಟ್ ಪತನವಾದ ಬಳಿಕ ಕ್ರೀಸ್‌ಗಿಳಿದ ನಾಯಕ ಮೊಹಮ್ಮದ್ ರಿಜ್ವಾನ್ ಮತ್ತು ಬಾಬರ್ ಆಜಂ ಜೋಡಿ ವಿಕೆಟ್ ಬಿಟ್ಟುಕೊಡದೇ ತಂಡವನ್ನು ಗೆಲುವಿನ ದಡ ಸೇರಿಸಿದರು.

ಪಾಕ್ ಪರ ಸೈಮ್ ಅಯೂಬ್ 42 ರನ್, ಅಬ್ದುಲ್ಲಾ ಶಫೀಕ್ 37 ರನ್ ಗಳಿಸಿ ಔಟಾದರೆ, ಮೊಹಮ್ಮದ್ ರಿಜ್ವಾನ್ 30 ರನ್ ಹಾಗೂ ಬಾಬರ್ ಆಜಂ 28 ರನ್ ಗಳಿಸಿ ಕ್ರೀಸ್‌ನಲ್ಲಿ ಉಳಿದರು. ಇನ್ನೂ ಆಸ್ಟ್ರೇಲಿಯಾ ಪಾರ ಲ್ಯಾನ್ಸ್ ಮೊರಿಸ್ 6 ಓವರ್‌ಗಳಲ್ಲಿ 24 ರನ್ ಬಿಟ್ಟುಕೊಟ್ಟು 2 ವಿಕೆಟ್ ಕಿತ್ತರು.

ಇದಕ್ಕೂ ಮುನ್ನ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಆತಿಥೇಯ ಆಸೀಸ್ ತಂಡವು 31.5 ಓವರ್‌ಗಳಲ್ಲಿ ಕೇವಲ 140 ರನ್‌ಗಳಿಗೆ ಆಲೌಟ್ ಆಯಿತು. ಅಗ್ರ ಕ್ರಮಾಂಕದ ಬ್ಯಾಟರ್‌ಗಳು ಅಲ್ಪ ಮೊತ್ತಕ್ಕೆ ನೆಲಕಚ್ಚಿದರು. ಆದರೆ 8ನೇ ಕ್ರಮಾಂಕದಲ್ಲಿ ಕಣಕ್ಕಿಳಿದ ಶಾನ್ ಅಬಾಟ್ 41 ಎಸೆತಗಳಲ್ಲಿ 30 ರನ್ ಬಾರಿಸಿದರು. ಅತ್ತ ಸಂಘಟಿತ ದಾಳಿಯೊಂದಿಗೆ ಆಸ್ಟ್ರೇಲಿಯನ್ನರ ಮೇಲೆ ಹಿಡಿತ ಸಾಧಿಸಿದ ಪಾಕ್ ಬೌಲರ್‌ಗಳು ಅಂತಿಮವಾಗಿ ಆತಿಥೇಯರನ್ನು 31.5 ಓವರ್‌ಗಳಲ್ಲಿ 140 ರನ್‌ಗಳಿಗೆ ಆಲೌಟ್ ಮಾಡಿದರು.

ಪಾಕಿಸ್ತಾನ ಪರ ಶಾಹೀನ್ ಶಾ ಅಫ್ರಿದಿ 32 ರನ್ ನೀಡಿ 3 ವಿಕೆಟ್ ಪಡೆದರೆ, ನಸೀಮ್ ಶಾ 54 ರನ್ ನೀಡಿ 3 ವಿಕೆಟ್ ಕಬಳಿಸಿದರು. ಇನ್ನು ಹ್ಯಾರಿಸ್ ರೌಫ್ 24 ರನ್‌ಗಳಿಗೆ 2 ವಿಕೆಟ್ ಕಬಳಿಸಿ ಮಿಂಚಿದರು. ಇದರೊಂದಿಗೆ ಸರಣಿಯಲ್ಲಿ ಒಟ್ಟು 10 ವಿಕೆಟ್ ಪಡೆಯುವ ಮೂಲಕ ಪಂದ್ಯ ಶ್ರೇಷ್ಠ ಹಾಗೂ ಸರಣಿಶೇಷ್ಠ ಪ್ರಶಸ್ತಿಗೂ ಪಾತ್ರರಾದರು.

# ಭಾರತದ ವಿರುದ್ಧ ದಕ್ಷಿಣ ಆಫ್ರಿಕಾಗೆ 3 ವಿಕೆಟ್‌ಗಳ ರೋಚಕ ಜಯ



**ಗ್ಕೆಬರ್ಹಾ:** ಟ್ರಿಸ್ಟನ್ ಸ್ಟಬ್ಸ್ ಅಮೋಘ ಬ್ಯಾಟಿಂಗ್ ಹಾಗೂ ಸಂಘಟಿತ ಬೌಲಿಂಗ್ ದಾಳಿ ನೆರವಿನಿಂದ ದಕ್ಷಿಣ ಆಫ್ರಿಕಾ ತಂಡ ಟೀಂ ಇಂಡಿಯಾ ವಿರುದ್ಧ 3 ವಿಕೆಟ್‌ಗಳ ರೋಚಕ ಗೆಲುವು ಸಾಧಿಸಿದೆ. ಈ ಮೂಲಕ 5 ಪಂದ್ಯಗಳ ಟಿ20 ಸರಣಿಯನ್ನು 1-1ರಲ್ಲಿ ಸಮಬಲ ಸಾಧಿಸಿದೆ.

**ಟರ್ನಿಂಗ್ ಸಿಕ್ಕಿದ್ದೆಲ್ಲಿ?:** ಟೀಂ ಇಂಡಿಯಾ ಸ್ಪಿನ್ನರ್ ವರುಣ್ ಚಕ್ರವರ್ತಿ 13ನೇ ಓವರ್ ನಲ್ಲಿ ಬೌಲಿಂಗ್‌ನಲ್ಲಿದ್ದರು. ಮೊದಲ ಎರಡು ಎಸೆತಗಳಲ್ಲಿ ಹೆನ್ರಿಚ್ ಕ್ಲಾಸೆನ್, ಡೇವಿಡ್ ಮಿಲ್ಲರ್ ದೈತ್ಯ ಆಟಗಾರರಿಗೆ ಪೆವಿಲಿಯನ್ ದಾರಿ ತೋರಿದರು. ಇದರಿಂದ ಭಾರತದ ಗೆಲುವು ಸುಲಭ ಎಂದೇ ಭಾವಿಸಲಾಗಿತ್ತು. ಆದ್ರೆ ಕೊನೇ ಮೂರು ಓವರ್‌ಗಳಲ್ಲಿ ಟ್ರಿಸ್ಟನ್ ಸ್ಟಬ್ಸ್ ಹಾಗೂ ಜೆರಾಲ್ಡ್ ಕೋಟ್ಜಿ ಅವರ ಭರ್ಜರಿ ಬ್ಯಾಟಿಂಗ್ ಪ್ರದರ್ಶನವು ಗೆಲುವು ತಂದುಕೊಡುವಲ್ಲಿ ಯಶಸ್ವಿಯಾಯಿತು. ಈ ಜೋಡಿ 17,18,19ನೇ ಓವರ್‌ನಲ್ಲೇ ಕ್ರಮವಾಗಿ 12, 12, 16 ರನ್ ಚಚ್ಚಿದ್ದರ ಪರಿಣಾಮ ಗೆಲುವು ದಕ್ಷಿಣ ಆಫ್ರಿಕಾದ ಪಾಲಾಯಿತು.

ಮೊದಲು ಬ್ಯಾಟಿಂಗ್ ಮಾಡಿದ್ದ ಟೀಂ ಇಂಡಿಯಾ 20 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 126 ರನ್ ಗಳಿಸಿತ್ತು. ಈ ಗುರಿ ಬೆನ್ನತ್ತಿದ್ದ ದಕ್ಷಿಣ ಆಫ್ರಿಕಾ 19 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 128 ರನ್ ಗಳಿಸಿ ಗೆಲುವಿನ ನಗೆ ಬೀರಿತು.

ದಕ್ಷಿಣ ಆಫ್ರಿಕಾ ಪರ ಟ್ರಿಸ್ಟನ್ ಸ್ಟಬ್ಸ್ ಅಜೇಯ 47 ರನ್, ರೀಝಾ ಹೆಂಡ್ರಿಕ್ಸ್ 24 ರನ್, ಜೆರಾಲ್ಡ್ ಕೋಟ್ಜಿ ಅಜೇಯ 19 ರನ್, ರಿಯಾನ್ ರಿಕ್ಲೆಂಟನ್ 13 ರನ್ ಗಳಿಸಿದರು.

**ಸೋತ ಪಂದ್ಯದಲ್ಲಿ ಮಿಂಚಿದ ವರುಣ್:** ಭಾರತ ಸೋತ ದಕ್ಷಿಣ ಆಫ್ರಿಕಾ ವಿರುದ್ಧ ಸೋತರು ಸ್ಪಿನ್ ಮಾಂತ್ರಿಕ ವರುಣ್ ಚಕ್ರವರ್ತಿ ಪ್ರಮುಖ ವಿಕೆಟ್ ಕಿತ್ತು ಸೈ ಎನಿಸಿಕೊಂಡರು. 4 ಓವರ್‌ಗಳಲ್ಲಿ ಕೇವಲ 17 ರನ್ ಬಿಟ್ಟುಕೊಟ್ಟು 5 ವಿಕೆಟ್ ಪಡೆದು ಮಿಂಚಿದರು. ಅರ್ಷ್‌ದೀಪ್ ಸಿಂಗ್, ರವಿ ಬಿಷ್ಣೋಯಿ ತಲಾ ಒಂದೊಂದು ವಿಕೆಟ್ ಪಡೆದರು.

ಇನ್ನೂ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ್ದ ಟೀಂ ಇಂಡಿಯಾ, 20 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 126 ರನ್ ಗಳಿಸಿ, ದಕ್ಷಿಣ ಆಫ್ರಿಕಾಗೆ 125 ರನ್‌ಗಳ ಗುರಿ ನೀಡಿತ್ತು. ಆರಂಭದಲ್ಲೇ ವಿಕೆಟ್ ಕಳೆದಕೊಂಡು ಸಂಕಷ್ಟಕ್ಕೀಡಾದ ಟೀಂ ಇಂಡಿಯಾಕ್ಕೆ ಅಕ್ಷರ್ ಪಟೇಲ್ ನೆರವಾಗಿದ್ದರು. 21 ಎಸೆತಗಳಲ್ಲಿ 27 ರನ್ ಬಾರಿಸಿ, ಉತ್ಸಾಹ ತುಂಬಿದ್ದರು. ಈ ವೇಳೆ ಹಾರ್ದಿಕ್ ಪಾಂಡ್ಯ ಹೊಡೆದ ಸ್ಟ್ರೈಟ್‌ಲೆಂತ್ ಬಾಲ್ ಬೌಲರ್ ಕೈಗೆ ತಾಕಿ ವಿಕೆಟ್‌ಗೆ ಬಡಿದು ರನೌಟ್‌ಗೆ ತುತ್ತಾದರು.

ಕೊನೆಯಲ್ಲಿ ಹಾರ್ದಿಕ್ ಪಾಂಡ್ಯ ಹೋರಾಟದಿಂದ ಭಾರತ 120 ರನ್‌ಗಳ ಗಡಿ ದಾಟಿತು. ಟೀಂ ಇಂಡಿಯಾ ಪರ ಹಾರ್ದಿಕ್ ಪಾಂಡ್ಯ 31 ರನ್ ಗಳಿಸಿದ್ರೆ, ಅಕ್ಷರ್ ಪಟೇಲ್ 27 ರನ್, ತಿಲಕ್ ವರ್ಮಾ 20 ರನ್ ಗಳಿಸಿದ್ರು, ಉಳಿದವರು ಅಲ್ಪ ಮೊತ್ತಕ್ಕೆ ಔಟಾದರು.

# ಕನ್ನಡ ಭಾಷೆಗೆ ಎರಡು ಸಾವಿರ ವರ್ಷಗಳ ಇತಿಹಾಸವಿದೆ ಶಾಸಕ ಎಸ್.ಮುನಿರಾಜು



**ಪೀಣ್ಯ ದಾಸರಹಳ್ಳಿ:** ಕನ್ನಡ ಭಾಷೆಗೆ ಸುಮಾರು 2 ಸಾವಿರಕ್ಕೂ ಹೆಚ್ಚು ವರ್ಷಗಳ ಇತಿಹಾಸವಿದ್ದು, ಭಾಷೆ, ಬದುಕು, ಸಾಹಿತ್ಯ, ಸಂಸ್ಕೃತಿ ಬೆಳವಣಿಗೆಯಲ್ಲಿ ಕನ್ನಡ ಭಾಷೆಯು ತನ್ನದೇ ಅಸ್ಮಿತೆಯನ್ನು ಒಳಗೊಂಡಿದೆ. ಪ್ರಾಚೀನ ಕಾಲದಿಂದಲೂ ಶಾಸನಗಳಲ್ಲಿ ಕನ್ನಡ ಭಾಷೆ ಬಳಕೆಯಾಗಿರುವುದು ಕಂಡು ಬರುತ್ತದೆ ಎಂದು ಶಾಸಕ ಎಸ್ ಮುನಿರಾಜು ತಿಳಿಸಿದರು.

ದಾಸರಹಳ್ಳಿ ವಿಧಾನಸಭಾ ಕ್ಷೇತ್ರದ ಬಾಗಲಗುಂಟೆಯಲ್ಲಿರುವ ವಾಯು ವಿಹಾರಿಗಳ ಸಂಘದ ವತಿಯಿಂದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಧ್ವಜಾರೋಹಣ ಮಾಡುವ ಮೂಲಕ ಕಾರ್ಯಕ್ರಮ ಮಾಡಲಾಯಿತು. ವಾಯು ವಿಹಾರಿಗಳ ಸಂಘದ ಪಧಾಧಿಕಾರಿಗಳು ಹಾಗೂ ದಾನಿಗಳು ನೀಡಿದ್ದ ಸೋಲಾರ್ ಲೈಟ್ ಅನ್ನು ಶಾಸಕ ಎಸ್ ಮುನಿರಾಜು ಉದ್ಘಾಟಿಸಿದರು.

ಬಳಿಕ ಮಾತನಾಡಿದ ಶಾಸಕ ಎಸ್ ಮುನಿರಾಜು ಕನ್ನಡ ಭಾಷೆ ಮಾತನಾಡುವವರು ಕಾವೇರಿಯಿಂದ ಗೋದಾವರಿಯವರೆಗೆ ಇರುವುದನ್ನು ಕಾಣುತ್ತೇವೆ ಇಂದು ಕರ್ನಾಟಕ ಏಕೀಕರಣಗೊಂಡ ದಿನ. ಇದು ಕನ್ನಡಿಗರಾದ ನಮ್ಮೆಲ್ಲರಿಗೂ ಬಹಳ ವಿಶೇಷವಾದ ದಿನ. ಕನ್ನಡದ ಕಾರಣಕ್ಕೆ ಒಗ್ಗೂಡಿರುವ ಜನ ನಾವು. ಸ್ವಾತಂತ್ರ್ಯ ಪೂರ್ವದಲ್ಲಿ ಹಲವು ಪ್ರಾಂತ್ಯಗಳಲ್ಲಿ ಹರಿದು ಹಂಚಿಹೋಗಿದ್ದ ಕನ್ನಡಿಗರ ಹಲವು ಪ್ರದೇಶಗಳನ್ನು ಒಂದುಗೂಡಿಸಿ, 1956ರ ನವೆಂಬರ್ 1 ರಂದು ಕರ್ನಾಟಕ ಏಕೀಕರಣ ಮಾಡಲಾಯಿತು. ಅಂದಿನಿಂದ ಪ್ರತಿ ವರ್ಷ ನವೆಂಬರ್ ತಿಂಗಳನ್ನು ನಾವು ಕನ್ನಡ ರಾಜ್ಯೋತ್ಸವವನ್ನು ಆಚರಿಸಿಕೊಂಡು ಬಂದಿದ್ದೇವೆ ಎಂದು ತಿಳಿಸಿದರು.

ಕ್ರಿ.ಶ.450 ರ ಕನ್ನಡ ಭಾಷೆಯ ಮೊಟ್ಟ ಮೊದಲ ಹಲ್ಮಿಡಿ ಶಾಸನದಲ್ಲಿ ಕನ್ನಡದ ಪದಗಳಿವೆ. ಕ್ರಿ.ಶ. 850 ರ ಕನ್ನಡದ ಮೊಟ್ಟ ಮೊದಲ ಗ್ರಂಥ ಕವಿರಾಜ ಮಾರ್ಗದಲ್ಲಿ ಕನ್ನಡ ನಾಡಿನ ವಿಸ್ತಾರದ ಬಗ್ಗೆ ಉಲ್ಲೇಖವಿದೆ. 21 ನೇ ಶತಮಾನದ ಈ ಹೊತ್ತಿನಲ್ಲಿ ಕನ್ನಡ ಭಾಷೆ ಆಧುನಿಕತೆಯೊಂದಿಗೆ ತನ್ನದೇ ಅಸ್ಮಿತೆಯನ್ನು ಉಳಿಸಿಕೊಂಡಿದೆ. ಈ ಮಣ್ಣಿಗೊಂದು, ಈ ನುಡಿಗೊಂದು ಸೊಗಸಿದೆ, ಸೌಂದರ್ಯವಿದೆ, ಬೆಡಗಿದೆ, ಆದ್ದರಿಂದ ಪ್ರಾದೇಶಿಕ ಸಂಸ್ಕೃತಿಯನ್ನು ಎತ್ತಿಹಿಡಿಯುವ ಕಾರ್ಯವನ್ನು ನಾವು ಮಾಡಬೇಕಿದೆ ಎಂದರು. ಇಂದು ಹೆಮ್ಮೆಯಿಂದ ಆಚರಿಸುತ್ತಿರುವ ಕನ್ನಡ ರಾಜ್ಯೋತ್ಸವದ ಹಿಂದೆ ನಾಡಿನ ಏಕೀಕರಣಕ್ಕಾಗಿ ಶ್ರಮಿಸಿದ ಮಹನೀಯರ ಹೋರಾಟವಿದೆ.

ಬಳಿಕ ಮಾತನಾಡಿದ ಸಾಹಿತಿ ಹಾಗೂ ವಾಗ್ಮಿಗಳಾದ ಶಶಿಕಾಂತರಾವ್ ಕರ್ನಾಟಕದ ಏಕೀಕರಣದ ಹೋರಾಟದಲ್ಲಿ ಬಹುದೊಡ್ಡ ಪ್ರಮಾಣದಲ್ಲಿ ಧ್ವನಿ ಎತ್ತಿದವರು ಸಾಹಿತಿಗಳು ಹಾಗೂ ರಾಜಕಾರಣಿಗಳು. ರಾಷ್ಟ್ರಕವಿ ಕುವೆಂಪು ಅವರು ಸಹ ಕರ್ನಾಟಕ ಏಕೀಕರಣಕ್ಕೆ ಒತ್ತಾಸೆಯಾಗಿ ನಿಂತಿದ್ದರು. ಕವೆಂಪು ಅವರ ಜೈ ಭಾರತ ಜನನಿನಿಯ ತನುಜಾತೆ' ಗೀತೆಯು ನಮ್ಮ ರಾಜ್ಯದ ನಾಡಗೀತೆಯಾಗಿದೆ ಎಂದು ತಿಳಿಸಿದರು.

ದೇಶಕ್ಕೆ ಸ್ವಾತಂತ್ರ್ಯ ಸಿಕ್ಕಿದ ನಂತರ ಕರ್ನಾಟಕ ಏಕೀಕರಣ ಆಗಿದ್ದರೂ, ಸ್ವಾತಂತ್ರ್ಯ ಪೂರ್ವದಿಂದಲೂ ಕನ್ನಡ ಭಾಷೆ ಮಾತನಾಡುವ ಪ್ರದೇಶಗಳ ಐಕ್ಯತೆಯ ಕೂಗು ಎದ್ದಿತ್ತು. ಆದರೆ ಮೊದಲು ದೇಶಕ್ಕೆ ಸ್ವಾತಂತ್ರ್ಯ ನಂತರ ಭಾಷಾವಾರು ಐಕ್ಯತೆ ಎಂಬ ವಿಚಾರವನ್ನು ಅಂದಿನ ಹೋರಾಟಗಾರರು ತಳೆದಿದ್ದರು. ಸಾಹಿತಿಗಳು, ಚಿಂತಕರು, ಲೇಖಕರು ತಮ್ಮ ಬರಹಗಳ ಮೂಲಕ ಏಕೀಕರಣದ ಪರವಾಗಿ ಧ್ವನಿಗೂಡಿಸಿದರು.

ಬಳಿಕ ಮಾತನಾಡಿದ ವಾಯು ವಿಹಾರಿಗಳ ಸಂಘದ ಗೌರವಾಧ್ಯಕ್ಷ ಆನಂದ್ ರೆಡ್ಡಿ ಕನ್ನಡವು ಯಾವುದೋ ಮತ ಪಂಥದ ಭಾಷೆಯಲ್ಲ. ಅದು ಈ ನಾಡಿನ, ಈ ಮಣ್ಣಿನ ಭಾಷೆ. ಈ ಭಾಷೆಯಲ್ಲೇ ನಮ್ಮ ಸಂಸ್ಕೃತಿ ಇದೆ. ನಮ್ಮ ಸಂಸ್ಕಾರ ಇದೆ. ನಮ್ಮ ಸಂಬಂಧಗಳು ಇವೆ. ನಮ್ಮ ನಾಗರೀಕತೆ ಇದೆ. ಈ ಭಾಷೆಯ ಶ್ರೀಮಂತಿಕೆಗೆ ಹಲವಾರು ಮಹನೀಯರು ಶ್ರಮಿಸಿದ್ದಾರೆ. ಮುಂದಿನ ತಲೆಮಾರಿಗೆ ಈ ಭಾಷೆಯನ್ನು ಕೊಂಡೊಯ್ಯುವ ಜವಾಬ್ದಾರಿ ನಮ್ಮ ಮೇಲೆ ಇದೆ. ಕೇವಲ ಭೌಗೋಳಿಕವಾಗಿ, ಆಡಳಿತಾತ್ಮಕವಾಗಿ ಏಕೀಕರಣವಾದರೆ ಸಾಲದು. ಕನ್ನಡದ ಮನಸ್ಸುಗಳು ಏಕೀಕರಣವಾಗಬೇಕು ಎಂಬ ಆಶಯವನ್ನು ವ್ಯಕ್ತಪಡಿಸಿದರು.

ಈ ಸಂಧರ್ಭದಲ್ಲಿ ಎಸ್ ಅರ್ ಎಸ್ ಎಂಟರ್ ಪ್ರೈಸಸ್ ಮಾಲೀಕ ಟಿ ಎಸ್ ಬಸವರಾಜು , ವಿಸ್ತಾರ ಡೆವಲಪರ್ಸ್ ಮಾಲೀಕ ಕಾಂತರಾಜು, ಶ್ರೀನಿವಾಸ ಮಂಜುನಾಥ ಫೌಂಡೇಶನ್ ಸಂಸ್ಥಾಪಕ ಡಾ.ಎಸ್ ಮಂಜುನಾಥ (ಎಬಿಬಿ) ಸಮಾಜ ಸೇವಕರಾದ ಹನುಮಂತರಾಜು ಇತರರು ಇದ್ದರು.

# ಕುಮಾರಸ್ವಾಮಿ ಆರೋಪ ಅಲ್ಲಗಳೆದ ಕೃಷಿ ಸಚಿವ



**ರಾಮನಗರ:** ಸಚಿವ ಚಲುವರಾಯಸ್ವಾಮಿಗೆ ಕಪಾಳಮೋಕ್ಷ ಆಗಿದ್ಯಾ? ಮಾಜಿ ಎಂಎಲ್‌ಸಿ ಕೀಲಾರ ಜಯರಾಂ ಹಲ್ಲೆ ಮಾಡಿದ್ರಾ? ಟ್ರಾನ್ಸ್‌ಫರ್ ವಿಚಾರದಲ್ಲಿ ಗಲಾಟೆ ಆಯ್ತಾ? ಕೇಂದ್ರ ಸಚಿವ ಹೆಚ್‌ಡಿ ಕುಮಾರಸ್ವಾಮಿ ಮಾಡಿದ ಆರೋಪ ಇಂತಹ ಅನುಮಾನಗಳಿಗೆ ಕಾರಣ ಆಗಿದೆ.

ಹುಣಸೂರಿನ ಹೋಟೆಲ್‌ವೊಂದರಲ್ಲಿ ಸಚಿವ ಚಲುವರಾಯಸ್ವಾಮಿ ಮತ್ತು ಮಾಜಿ ಎಂಎಲ್‌ಸಿ ಕಿಲಾರ ಜಯರಾಮ್ ನಡುವೆ ವರ್ಗಾವಣೆ ಹಣಕಾಸಿನ ವಿಚಾರದಲ್ಲಿ ಕಿತ್ತಾಟ ನಡೆದಿತ್ತು. ಈ ವೇಳೆ ಕೃಷಿ ಸಚಿವರ ಮೇಲೆ ಮಾಜಿ ಎಂಎಲ್‌ಸಿ ಹಲ್ಲೆ ಮಾಡಿದ್ದರು ಎಂಬ ವಿಚಾರವನ್ನು ಕುಮಾರಸ್ವಾಮಿ ಬಹಿರಂಗ ಮಾಡಿದ್ದರು. ಸಚಿವರ ಮೇಲೆ ಹಲ್ಲೆ ನಡೆಯುವಂತಹ ಸ್ಥಿತಿ ರಾಜ್ಯದಲ್ಲಿ ಉದ್ಭವವಾಗಿದೆ ಎಂದು ಲೇವಡಿ ಮಾಡಿದ್ದರು.

ಆದರೆ ಈ ಆರೋಪವನ್ನು ಸಚಿವ ಚಲುವರಾಯಸ್ವಾಮಿ ಅಲ್ಲಗಳೆದಿದ್ದಾರೆ. ಅವರು ಚಪಲಕ್ಕೆ ಏನೇನು ಹೇಳುತ್ತಾರೋ ಗೊತ್ತಿಲ್ಲ. ಹೆಚ್‌ಡಿಕೆಗೆ ಮಗನ ಚುನಾವಣೆಗಿಂತ ಚಲುವರಾಯಸ್ವಾಮಿ ವಿಚಾರ ಮುಖ್ಯವಾಗಿದೆ. ನನಗೂ, ಜಯರಾಂಗೂ ಯಾವುದೇ ವರ್ಗಾವಣೆ, ಹಣದ ವ್ಯವಹಾರ ನಡೆದಿಲ್ಲ. ನಮ್ಮ ಸರ್ಕಾರ ಬಂದಾಗಿಂದ ಅವರು ಯಾವುದೇ ಸಹಕಾರ ನಮಗೆ ಕೊಟ್ಟಿಲ್ಲ. ಎಲ್ಲರದ್ದು ನನ್ನ ಜೇಬಲ್ಲಿ ಇದೆ ಎನ್ನುತ್ತಾರೆ. ಒಂದೂವರೆ ವರ್ಷದಿಂದ ಇನ್ನೂ ಬಿಡುಗಡೆ ಮಾಡಿಲ್ಲ. ಬರೀ ಈ ರೀತಿಯ ಹೇಳಿಕೆಯಲ್ಲೇ ಹೆಚ್‌ಡಿಕೆ ಕಾಲಹರಣ ಮಾಡುತ್ತಿದ್ದಾರೆ. ನಮ್ಮ ಹೆಸರು ಹೇಳದಿದ್ದರೆ ಅವರಿಗೆ ನಿದ್ದೆ ಬರಲ್ಲ ಎಂದು ಹರಿಹಾಯ್ದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com